13 February 2026 Friday

SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ನಮ್ಮ ಮನಸ್ಸೇ ಬಂಧು, ನಮ್ಮ ಮನಸ್ಸೇ ಶತ್ರು! ನಾವು ಮಾಡುವ ವಿಚಾರಗಳೇ ನಮ್ಮ ಬಂಧು, ಶತ್ರುವಾಗಿ ಪಾತ್ರ ವಹಿಸುತ್ತವೆ!

-ಸ್ನೇಹಾ ಆನಂದ್



ನಗರಸಭೆ ಬಜೆಟ್‌ಪೂರ್ವ ಭಾವಿ ಸಭೆಯಲ್ಲಿ ಸಲಹೆ ಪಡೆದ ಅಧ್ಯಕ್ಷರು — ಪುಟ ಸಂ. 2



ಭಿತ್ತಿಪತ್ರಕ್ಕೆ ಬೆಂಕಿಹಚ್ಚಿ ಆಕ್ರೋಶ: ಬೇಡಿಕೆಗಳ ಈಡೇರಿಕೆಗೆ ಒತ್ತಾಯ — ಪುಟ ಸಂ. 3



ಶಿವರಾತ್ರಿ ಜಾತ್ರೆಗೆ ದಿನಗಣನೆ: ಕಾವೇರಿ ದಾಟಿ ಬರುತ್ತಿರುವ ಭಕ್ತಸಾಗರ — ಪುಟ ಸಂ. 4

info.varthaman@gmail.com

9742504916


ಮೈಸೂರು ಮಂಡ್ಯ ಬೆಂಗಳೂರು ಹಾಸನ ಚಾಮರಾಜನಗರ ರಾಮನಗರ ಬೆಂಗಳೂರು ಗ್ರಾಮಾಂತರ ಕೊಡಗು ಕಾರ್ಯನಿರ್ವಾಹಕ ಸಂಪಾದಕ - ಕೆ.ಆರ್.ಮಿಹಿರ್ ಆಕಾಶ್

VARTHAMAN Volume: 69 Issue: 99 Pages: 06 KA/SK/MYS/1098/2023-2025 R.N.I. No.3577/1957 www.varthaman.in Price-3

# ಬೈರತಿ ಜಾಮೀನು ಅರ್ಜಿ 'ಸುಪ್ರೀಂ'ನಲ್ಲಿ ವಜಾ: ಬಂಧನ

**ಬೆಂಗಳೂರು:** ರೌಡಿ ಶೀಟರ್ ಬಿಕ್ಲು ಶಿವ ಅಲಿಯಾಸ್ ಶಿವಕುಮಾರ್ ಕೊಲೆ ಪ್ರಕರಣದಲ್ಲಿ ನಿರೀಕ್ಷಣಾ ಜಾಮೀನು ಕೋರಿ ಬಿಜೆಪಿ ಶಾಸಕ ಬೈರತಿ ಬಸವರಾಜ್ ಸಲ್ಲಿಸಿದ್ದ ಮೇಲ್ಮನವಿಯನ್ನು ಸುಪ್ರೀಂ ಕೋರ್ಟ್ ಗುರುವಾರ ವಜಾಗೊಳಿಸಿದೆ.

ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಅವರ ಪೀಠ ಮೇಲ್ಮನವಿಯನ್ನು ವಜಾಗೊಳಿಸಿದೆ. ಈ ಹಿಂದೆ ಹೈಕೋರ್ಟ್ ಸಹ ನಿರೀಕ್ಷಣಾ ಜಾಮೀನು ಅರ್ಜಿ ವಜಾ ಮಾಡಿತ್ತು. ಅದರ ಬೆನ್ನಲ್ಲೇ ಕೆ.ಆರ್.ಪುರ ಕ್ಷೇತ್ರದ ಬಿಜೆಪಿ ಶಾಸಕ ಬೈರತಿ ಬಸವರಾಜ್ ಬಂಧನ ಭೀತಿಯಿಂದ ತಲೆಮರೆಸಿಕೊಂಡಿದ್ದರು.



ಸುಪ್ರೀಕೋರ್ಟ್ ಜಾಮೀನು ಅರ್ಜಿ ವಜಾ ಆದ ಬೆನ್ನಲ್ಲಿಯೇ ಬೆಂಗಳೂರು ಏರ್‌ಪೋರ್ಟ್‌ಗೆ ಬಂದಿಳಿದ ಬೈರತಿ ಬಸವರಾಜು ಅವರನ್ನು ಸಿಐಡಿ ಪೊಲೀಸರು ಗುರುವಾರ ರಾತ್ರಿ ಬಂಧಿಸಿದರು. ಅವರನ್ನು ವಶಕ್ಕೆ ಪಡೆದು ಕರೆದೊಯ್ದಿದ್ದಾರೆ.

ಸರ್ಕಾರ ಶಾಸಕರ ಬಂಧನಕ್ಕೆ ಸಿಐಡಿ ವಿಶೇಷ ತಂಡಗಳನ್ನು ರಚಿಸಿತ್ತು. ಆ ತಂಡಗಳು ಮಹಾರಾಷ್ಟ್ರಕ್ಕೆ ತೆರಳಿ, ಆರೋಪಿಗಾಗಿ ವಿವಿಧೆಡೆ ಹುಡುಕಾಟ ನಡೆಸಿದ್ದವು.

ಬೈರತಿ ಬಸವರಾಜ್ ಮಹಾರಾಷ್ಟ್ರದ ಸ್ಟಾರ್ ಹೋಟೆಲ್‌ವೊಂದರಲ್ಲಿ ವಾಸ್ತವ್ಯ ಹೂಡಿರುವ ಮಾಹಿತಿ ಇತ್ತು. ಅವರು ವಿದೇಶಕ್ಕೆ ಪರಾರಿಯಾಗದಂತೆ ತಡೆಯಲು ಲುಕ್‌ಔಟ್ ನೋಟಿಸ್ ಜಾರಿ ಮಾಡಲಾಗಿತ್ತು.

ಕಳೆದ ಡಿಸೆಂಬರ್‌ನಲ್ಲೂ ಬೈರತಿ ಅವರು ನಿರೀಕ್ಷಣಾ ಜಾಮೀನು ಕೋರಿ ಹೈಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಿದ್ದರು. ಆಗಲೂ ಅರ್ಜಿಯನ್ನು ಹೈಕೋರ್ಟ್ ತಿರಸ್ಕರಿಸಿತ್ತು. ಇದಾದ ಬೆನ್ನಲ್ಲೇ ಶಾಸಕರನ್ನು ವಶಕ್ಕೆ

ಪುಟ 2ಕ್ಕೆ

## ಪಾಸ್‌ಪೋರ್ಟ್ ಕೇಂದ್ರ ಮೇಲ್ದರ್ಜೆಗೇರಿಸಿ

**ಕೇಂದ್ರ ಸಚಿವರಿಗೆ ಯದುವೀರ್ ಮನವಿ**

**ಮೈಸೂರು:** ಮೈಸೂರಿನಿಂದ ದೇಶ ವಿದೇಶಗಳಿಗೆ ತೆರಳುವವರ ಸಂಖ್ಯೆ ಹೆಚ್ಚಾಗಿರುವ ಹಿನ್ನೆಲೆಯಲ್ಲಿ ಈಗಿರುವ ಪಾಸ್‌ಪೋರ್ಟ್ ಸೇವಾ ಕೇಂದ್ರವನ್ನು ಪೂರ್ಣ ಪ್ರಮಾಣದ ಕೇಂದ್ರವನ್ನಾಗಿ ಮೇಲ್ದರ್ಜೆಗೇರಿಸಬೇಕು ಎಂದು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರು ಕೇಂದ್ರ ಸಚಿವರಿಗೆ ಮನವಿ ಸಲ್ಲಿಸಿದ್ದಾರೆ.



ನಗರದಲ್ಲಿ ಈಗಿರುವ ಅಂಚೆ ಕಚೇರಿ ಪಾಸ್‌ಪೋರ್ಟ್ ಸೇವಾ ಕೇಂದ್ರವನ್ನು (ಪಿಒಪಿಎಸ್‌ಕೆ) ತತ್ಕಾಲ್ ಸೇವೆಗಳೊಂದಿಗೆ ಪೂರ್ಣ ಪ್ರಮಾಣದ ಪಾಸ್‌ಪೋರ್ಟ್ ಸೇವಾ ಕೇಂದ್ರ (ಪಿಎಚ್‌ಕೆ) ವನ್ನಾಗಿ ಮೇಲ್ದರ್ಜೆಗೇರಿಸಬೇಕಾದ ಅಗತ್ಯವಿದೆ. ಇಟ್ಟಿಗೆಗೂಡಿನಲ್ಲಿರುವ ಪಾಸ್‌ಪೋರ್ಟ್ ಕಚೇರಿ ಆವರಣಕ್ಕೆ ಸ್ಥಳಾಂತರಿಸುವಂತೆ ಕೋರಲಾಗಿದೆ ಎಂದು ಯದುವೀರ್ ತಿಳಿಸಿದರು.

ಮೈಸೂರಿನಲ್ಲಿ ಉನ್ನತ ಶಿಕ್ಷಣ,

ಪುಟ 2ಕ್ಕೆ

# ರಾಜ್ಯದ ಜನರಿಗೆ ಮತ್ತೆ 'ವಿದ್ಯುತ್ ಶಾಕ್'

**ಏಪ್ರಿಲ್ 1ರಿಂದಲೇ ದರ ಏರಿಕೆಗೆ ಸರ್ಕಾರದ ಸಿದ್ಧತೆ | ಕೆಇಆರ್‌ಸಿಗೆ ಪ್ರಸ್ತಾವನೆ ಸಲ್ಲಿಕೆ**

**ಬೆಂಗಳೂರು:** ರಾಜ್ಯದ ಜನರಿಗೆ ರಾಜ್ಯ ಸರ್ಕಾರ ಮತ್ತೊಂದು ಶಾಕ್ ನೀಡಲು ಮುಂದಾಗಿದೆ. ಬಸ್, ಹಾಲು, ನೋಂದಣಿ ಶುಲ್ಕ, ನೀರಿನ ಬಿಲ್ ಮತ್ತಿತರ ದರ ಏರಿಕೆ ನಂತರ ಶೀಘ್ರದಲ್ಲೇ ಮತ್ತೆ ವಿದ್ಯುತ್ ದರ ಹೆಚ್ಚಳ ಮಾಡಲು ಸಿದ್ಧತೆ ನಡೆಸಿದೆ.



ಏಪ್ರಿಲ್ 1ರಿಂದಲೇ ಜಾರಿಗೆ ಬರುವಂತೆ ಪರಿಷ್ಕೃತ ವಿದ್ಯುತ್ ದರ ಪ್ರಕಟವಾಗುವ ಸಾಧ್ಯತೆಯಿದೆ. ಇದು ಜಾರಿಯಾದರೆ ಗ್ರಾಹಕರ ಜೇಬಿಗೆ ಕತ್ತರಿ ಬೀಳುವುದು ಖಚಿತ.

ರಾಜ್ಯದ ಐದು ವಿದ್ಯುತ್ ಸರಬರಾಜು ಕಂಪನಿಗಳು (ಎಸ್ಕಾಮ್‌ಗಳು) 2026–27ರ ಹಣಕಾಸು ವರ್ಷಕ್ಕೆ ರಾಜ್ಯದಾದ್ಯಂತ ವಿದ್ಯುತ್ ದರದಲ್ಲಿ ಸರಾಸರಿ 67 ಪೈಸೆ ಹೆಚ್ಚಳ ಮಾಡುವಂತೆ ರಾಜ್ಯ ಸರ್ಕಾರವನ್ನು ಕೋರಿವೆ. ನೀರಾವರಿ ಪಂಪ್‌ಸೆಟ್‌ಗಳು, ವಾಣಿಜ್ಯ ಮತ್ತು ಕೈಗಾರಿಕಾ ಗ್ರಾಹಕ ವರ್ಗಗಳಿಗೆ ಸರಬರಾಜು ಮಾಡುವ ವಿದ್ಯುತ್ ದರವನ್ನು ಪರಿಷ್ಕರಿಸುವಂತೆಯೂ ಕಂಪನಿಗಳು ಪ್ರಸ್ತಾವನೆ ಸಲ್ಲಿಸಿವೆ.

ರಾಜ್ಯದಲ್ಲಿ ವಿದ್ಯುತ್ ಪೂರೈಕೆ ಮಾಡುವ ಬಹುತೇಕ ಕಂಪನಿಗಳು ನಷ್ಟದ ಹಾದಿಯಲ್ಲಿವೆ. ಆದಾಯ ಸರಿದೂಗಿಸಲು ವಿದ್ಯುತ್ ದರ ಏರಿಕೆ ಮಾಡುವಂತೆ ವಿದ್ಯುಚ್ಛಕ್ತಿ ನಿಯಂತ್ರಣಾ ಆಯೋಗಕ್ಕೆ ಕಂಪನಿಗಳು ಪ್ರಸ್ತಾವನೆ ಸಲ್ಲಿಸಿವೆ.

ಬೆಸ್ಕಾಂ ಸೇರಿದಂತೆ ರಾಜ್ಯದ ವಿವಿಧ ಎಸ್ಕಾಂಗಳು 2024–25ನೇ ಸಾಲಿನ ತಮ್ಮ ಕಾರ್ಯನಿರ್ವಹಣಾ ವರದಿಯನ್ನು ಮತ್ತು ದರ ಏರಿಕೆಯ ಪ್ರಸ್ತಾವನೆಯನ್ನು ಕೆಇಆರ್‌ಸಿಗೆ ಸಲ್ಲಿಸಿವೆ. ವರದಿ ಸಲ್ಲಿಕೆಯ ಬೆನ್ನಲ್ಲೇ

ಪುಟ 2ಕ್ಕೆ

### ಕಳೆದ ವರ್ಷ ಶೇ.7 ಹೆಚ್ಚಳ

ಕಳೆದ ವರ್ಷ ಮಾರ್ಚ್ 28, 2025ರಂದು ಕೆಇಆರ್‌ಸಿ ವಿದ್ಯುತ್ ದರವನ್ನು ಶೇ.7ರಷ್ಟು ಹೆಚ್ಚಳ ಮಾಡಿತ್ತು. ಸ್ಥಿರ ಶುಲ್ಕವನ್ನು 25 ರೂ.ಗಳಷ್ಟು ಹೆಚ್ಚಿಸಿತ್ತು. ಈಗಾಗಲೇ 2025–26, 2026–27 ಮತ್ತು 2027–28ನೇ ಆರ್ಥಿಕ ವರ್ಷಗಳಿಗೆ ದರ ನಿಗದಿ ಮಾಡಲಾಗಿತ್ತು. ಆದರೆ, ಈಗ ಎದುರಾಗಿರುವ ನಷ್ಟವನ್ನು ಸರಿದೂಗಿಸಲು 'ಹೆಚ್ಚುವರಿ ದರ ಏರಿಕೆ'ಗೆ ಕೆಇಆರ್‌ಸಿ ಚಿಂತನೆ ನಡೆಸಿದೆ ಎನ್ನಲಾಗಿದೆ.

## ಸಂಕ್ಷಿಪ್ತ ಸುದ್ದಿ

### ಭ್ರಷ್ಟ ಅಧಿಕಾರಿಗಳಿಗೆ 'ಲೋಕಾ ಶಾಕ್'

*** ಮೈಸೂರು ಸೇರಿದಂತೆ 11 ಕಡೆ ದಾಳಿ: ಆಸ್ತಿ ದಾಖಲೆಗಳ ವಶ**





**ಮೈಸೂರು:** ಮೈಸೂರು ಸೇರಿದಂತೆ ವಿವಿಧೆಡೆ ಭ್ರಷ್ಟ ಅಧಿಕಾರಿಗಳಿಗೆ ಬೆಳ್ಳಂಬೆಳಗ್ಗೆ ಲೋಕಾಯುಕ್ತ ಅಧಿಕಾರಿಗಳು ಬಿಸಿ ಮುಟ್ಟಿಸಿದ್ದಾರೆ. ಬೆಂಗಳೂರು, ಮೈಸೂರು, ದಾವಣಗೆರೆ ಜಿಲ್ಲೆಯ ಹಲವು ಕಡೆ ಏಕಕಾಲಕ್ಕೆ ದಾಳಿ ನಡೆಸಿ ಅಪಾರ ಪ್ರಮಾಣದ ಆಸ್ತಿ ದಾಖಲೆಗಳನ್ನು ವಶಕ್ಕೆ ಪಡೆದಿದ್ದಾರೆ.

ಲೋಕೋಪಯೋಗಿ ಇಲಾಖೆ ಚೀಫ್ ಇಂಜಿನಿಯರ್ ಪುರುಷೋತ್ತಮ ದಾಸ್ ಎಂಬುವವರಿಗೆ ಸೇರಿದ 11 ಕಡೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಮೈಸೂರಿನಲ್ಲಿ 5 ಕಡೆ, ಬೆಂಗಳೂರಿನಲ್ಲಿ 6 ಕಡೆ ದಾಳಿ ನಡೆಸಿದ್ದಾರೆ. ಮಹತ್ವದ ದಾಖಲೆಗಳಿಗೆ ಹುಡುಕಾಟ ನಡೆಸಿದ್ದಾರೆ.

ದಾವಣಗೆರೆಯ ಬೆಸ್ಕಾಂನ ಸಿವಿಲ್ ವಿಭಾಗದ ಇಂಜಿನಿಯರ್ ಆರ್.ಹೆಚ್ ಅರ್ಜುನ್ ಅವರ ಮನೆ ಹಾಗೂ ಕಚೇರಿ ಮೇಲೂ ಲೋಕಾಯುಕ್ತ ಅಧಿಕಾರಿಗಳ ತಂಡ ದಾಳಿ ನಡೆಸಿದೆ. ಅರ್ಜುನ್ ವಿರುದ್ಧ ಆದಾಯ ಮೀರಿ ಅಪಾರ ಪ್ರಮಾಣದ ಆಸ್ತಿ ಗಳಿಸಿರುವ ಆರೋಪ ಕೇಳಿಬಂದಿತ್ತು. ಈ ಹಿನ್ನೆಲೆ ಲೋಕಾಯುಕ್ತ ಎಸ್ಪಿ ಎಂಎಸ್ ಕೌಲಾಪುರೆ ನೇತ್ರತ್ವದ ತಂಡ ದಾಳಿ ನಡೆಸಿದೆ. ಅರ್ಜುನ್ ವಾಸವಿದ್ದ ದಾವಣಗೆರೆ ನಗರದ ನಿಟ್ಟುವಳ್ಳಿನಲ್ಲಿ ರೂಮ್, ಕಚೇರಿ ಹಾಗೂ ಶಿವಮೊಗ್ಗದ ಮನೆಯ ಮೇಲೆ ಏಕ ಕಾಲಕ್ಕೆ ದಾಳಿ ನಡೆಸಲಾಗಿದೆ. ಶಿವಮೊಗ್ಗದ ಮನೆಯಲ್ಲಿ ಆಸ್ತಿ ಪತ್ರ ಹಾಗೂ ಚಿನ್ನ ಬೆಳ್ಳಿ ಪತ್ತೆಯಾಗಿದೆ. ಇನ್ನಷ್ಟು ಮಹತ್ವದ ದಾಖಲೆಗಳನ್ನ ಪತ್ತೆಹಚ್ಚಲು ಅಧಿಕಾರಿಗಳು ಶೋಧ ಮುಂದುವರಿಸಿದ್ದಾರೆ.

### ರಾಹುಲ್ ಚಿತ್ರ ವಿರೂಪ: ಶಾಸಕ ಅರಗ ಪಿಎ ಬಂಧನ

**ಶಿವಮೊಗ್ಗ:** ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ ವಿರುದ್ಧ ಸಾಮಾಜಿಕ ಜಾಲತಾಣದಲ್ಲಿ ಅವಹೇಳನಕಾರಿ ಪೋಸ್ಟ್ ಮಾಡಿದ್ದ ಆರೋಪದಡಿ ತೀರ್ಥಹಳ್ಳಿ ಶಾಸಕ ಆರಗ ಜ್ಞಾನೇಂದ್ರ ಆಪ್ತ ಸಹಾಯಕನನ್ನು ಪೊಲೀಸರು ಬಂಧಿಸಿದ್ದಾರೆ.



ಹೊಸನಗರ ತಾಲ್ಲೂಕಿನ ಮಳಲಿ ಗ್ರಾಮದ ರಾಜೇಶ್ ಹಿರಿಮನೆ ಬಂಧಿತ ಆರೋಪಿ. ಇಲ್ಲಿನ ಜೆ.ಎಂ.ಎಫ್.ಸಿ ನ್ಯಾಯಾಲಯ ಆರೋಪಿಗೆ ಫೆಬ್ರವರಿ 24ರವರೆಗೆ ನ್ಯಾಯಾಂಗ ಬಂಧನ ವಿಧಿಸಿದೆ. ರಾಜೇಶ್ ಹಿರಿಮನೆ, ರಾಹುಲ್ ಗಾಂಧಿ ಅವರ ಮುಖದ ಅರ್ಧ ಭಾಗ ಹಾಗೂ ಪಾಕಿಸ್ತಾನ ಸೇನೆಯ ಸಮವಸ್ತ್ರ ಧರಿಸಿದ ಅಧಿಕಾರಿ ಅಸಿಮ್ ಫೋಟೋವನ್ನು ಎಡಿಟ್ ಮಾಡಿ ಒಂದಕ್ಕೊಂದು ಸೇರಿಸಿದ್ದರು. ಈ ವಿವಾದಾತ್ಮಕ ಚಿತ್ರಕ್ಕೆ 'ಒನ್

ಪುಟ 2ಕ್ಕೆ

### ಮಾ.6 ರಂದು ಬಜೆಟ್ ಮಂಡಿಸಲಿರುವ ಸಿಎಂ

ಬೆಂಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ಮಾರ್ಚ್ 6 ರಂದು ರಾಜ್ಯ ಬಜೆಟ್ ಮಂಡನೆ ಮಾಡಲಿದ್ದಾರೆ



ಗುರುವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ಮಾರ್ಚ್ 6 ರಿಂದ 27ರವರೆಗೆ ಬಜೆಟ್ ಅಧಿವೇಶನ ನಡೆಸಲು ತೀರ್ಮಾನ ಮಾಡಲಾಗಿದೆ. ಮಾರ್ಚ್ 6 ರಂದು 17 ನೇ ದಾಖಲೆ ಬಜೆಟ್ ಮಂಡಿಸಲು ಸಿಎಂ ಸಿದ್ದರಾಮಯ್ಯ ಸಜ್ಜಾಗಿದ್ದಾರೆ

### ಮೆಟ್ರೋ ಡಬಲ್ ಡೆಕ್ಕರ್‌ಗೆ 'ರೆಡ್ ಸಿಗ್ನಲ್'

**ಬೆಂಗಳೂರು:** ಮೆಟ್ರೋ ದರ ಏರಿಕೆ ಜಟಾಪಟಿ ಬೆನ್ನಲ್ಲೇ ರಾಜ್ಯಕ್ಕೆ ಕೇಂದ್ರ ಸರ್ಕಾರ ಬಿಗ್ ಶಾಕ್ ನೀಡಿದೆ. ಮೆಟ್ರೋ ರೆಡ್ ಲೈನ್ ಹಾಗೂ ಡಬಲ್ ಡೆಕ್ಕರ್ ಪ್ಲಾನ್‌ಗೆ ಕೇಂದ್ರ ಸರ್ಕಾರ ಬ್ರೇಕ್ ಹಾಕಿದೆ.

ಸರ್ಜಾಪುರ ಹೆಬ್ಬಾಳ ಮೆಟ್ರೋ ಕಾರಿಡಾರ್ ಯೋಜನೆಯಗೆ ಕೇಂದ್ರ ಸರ್ಕಾರ ತಡೆ ನೀಡಿದೆ. ಯೋಜನೆ ಮತ್ತೆ ಮರುಪರಿಶೀಲನೆ ಮಾಡಲು ಸೂಚಿಸಲಾಗಿದೆ. 28, 405 ಕೋಟಿ ರೂ. ಡಿಪಿಆರ್ ಹಿನ್ನೆಲೆ ಅನುಮೋದನೆಯನ್ನು ಸ್ಥಗಿತಗೊಳಿಸಾಗಿದೆ ಎಂದು ಸಂಸದ ಪಿ.ಸಿ.ಮೋಹನ್ ಮಾಹಿತಿ ನೀಡಿದರು. ಡಬಲ್ ಡೆಕ್ಕರ್ ವ್ಯವಸ್ಥೆ ಮಾಡಿದರೆ ಮೆಟ್ರೋದಲ್ಲಿ ಪ್ರಯಾಣ ಮಾಡುವವರ ಸಂಖ್ಯೆ ಕಡಿಮೆಯಾಗಲಿದೆ. ಹಾಗಾಗಿ, ರೆಡ್ ಲೈನ್ ಮೆಟ್ರೋ ಕಾರಿಡಾರ್‌ಗಳಲ್ಲಿ ಡಬಲ್ ಡೆಕ್ಕರ್ ಬೇಡ. ಆಯ್ದ ಜಂಕ್ಷನ್‌ಗಳಲ್ಲಿ ಡಬಲ್ ಡೆಕ್ಕರ್ ಮಾಡಬಹುದು ಎಂದು ಕೇಂದ್ರ ಸೂಚಿಸಿದೆ. ರಾಜ್ಯ ಸರ್ಕಾರ ಮುಂಬರುವ ಎಲ್ಲಾ ಮೆಟ್ರೋ ಮಾರ್ಗಗಳಲ್ಲೂ ಡಬಲ್ ಡೆಕ್ಕರ್ ಫ್ಲೈಓವರ್ ಮಾಡಲು ಪ್ಲಾನ್ ಮಾಡಿತ್ತು.



ಪುಟ 2ಕ್ಕೆ

# ದೆಹಲಿಯಲ್ಲಿ ಡಿಕೆ ಬ್ರದರ್ಸ್ 'ಪಾಲಿಟಿಕ್ಸ್'

**ತಡರಾತ್ರಿವರೆಗೂ ರಾಜಕೀಯ ಚಟುವಟಿಕೆ | ಸಿಎಂ ಕುರ್ಚಿಗಾಗಿ ಜೋರಾದ ಲಾಬಿ**

**ಬೆಂಗಳೂರು:** ಮುಖ್ಯಮಂತ್ರಿ ಕುರ್ಚಿ ಪಡೆಯಲು ಮುಂದಾಗಿರುವ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮತ್ತು ಅವರ ಸಹೋದರ ಡಿ.ಕೆ.ಸುರೇಶ್ ಅವರು ದೆಹಲಿಯಲ್ಲಿ ತಡರಾತ್ರಿ ವರೆಗೂ ಕಾಂಗ್ರೆಸ್ ವರಿಷ್ಠರನ್ನು ಭೇಟಿ ಮಾಡಿ ಚರ್ಚಿಸಿದ್ದಾರೆ.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ಅವರೊಂದಿಗೆ ತಡರಾತ್ರಿವರೆಗೂ ಸಭೆ ನಡೆಸಿದ್ದಾರೆ. ಅಲ್ಲದೆ, ಕಾಂಗ್ರೆಸ್ ನಾಯಕಿ ಸೋನಿಯಾ ಗಾಂಧಿ ಅವರನ್ನು ಪ್ರತ್ಯೇಕವಾಗಿ ಭೇಟಿ ಮಾಡಿ ಚರ್ಚಿಸಿದ್ದಾರೆ.

ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಾವಣೆಯ ಬಗ್ಗೆ ಹೊಸ ಊಹಾಪೋಹಗಳ ನಡುವೆಯೇ ಈ ಬೆಳವಣಿಗೆಗಳು ತೀವ್ರ ಕುತೂಹಲಕ್ಕೆ ಕಾರಣವಾಗಿದೆ. ಅಸ್ಸಾಂ ವಿಧಾನಸಭಾ ಚುನಾವಣೆ ಕಾರ್ಯತಂತ್ರ ಸಭೆಯಲ್ಲಿ ಭಾಗವಹಿಸಿದ್ದ ಡಿ.ಕೆ.ಶಿವಕುಮಾರ್ ಅವರು, ಸಭೆಯ ನಂತರ ಖರ್ಗೆ ಮತ್ತು ವೇಣುಗೋಪಾಲ್ ಅವರನ್ನು ಪ್ರತ್ಯೇಕವಾಗಿ ಭೇಟಿಯಾಗಿ ಚರ್ಚಿಸಿದ್ದಾರೆ.

ಕೆ.ಸಿ.ವೇಣುಗೋಪಾಲ್ ಅವರನ್ನು ಬುಧವಾರ ತಡ ರಾತ್ರಿ ಭೇಟಿಯಾದ ಡಿ.ಕೆ.ಬ್ರದರ್ಸ್, ಮುಖ್ಯಮಂತ್ರಿ ಹುದ್ದೆಗೆ ತಮ್ಮ ಹಕ್ಕೊತ್ತಾಯವನ್ನು ಮುಂದಿಟ್ಟಿದ್ದಾರೆ. ಎರಡೂವರೆ ವರ್ಷಕ್ಕೆಂದು ನಿಮ್ಮ ಸಮ್ಮುಖದಲ್ಲೇ ಭರವಸೆ ನೀಡಲಾಗಿತ್ತು. ನಿಮ್ಮ ಆಶ್ವಾಸನೆಯಂತೆ ನಾವು ನಡೆದುಕೊಂಡಿದ್ದೇವೆ. ಪವರ್ ಶೇರಿಂಗ್ ಒಪ್ಪಂದ ಮುಗಿದು ಮೂರು ತಿಂಗಳು ಆಗಿದೆ. ನಮಗೆ ನೀಡಿದ ವಚನದಂತೆ ಅಧಿಕಾರ ಹಸ್ತಾಂತರ ಆಗಲಿ ಎಂದು ಅವರು ಒತ್ತಾಯಿಸಿದ್ದಾರೆ ಎನ್ನಲಾಗಿದೆ.




ಸಿದ್ದರಾಮಯ್ಯನವರು ಅಂದು ನಿಮ್ಮೆಲ್ಲರ ಸಮ್ಮುಖದಲ್ಲೇ ವಚನ ನೀಡಿದ್ದರು. ಎರಡೂವರೆ ವರ್ಷಕ್ಕೂ ಮೊದಲೇ ಕುರ್ಚಿ ಬಿಟ್ಟುಕೊಡ್ತೇನೆ ಎಂದು ಹೇಳಿದ್ದರು. ಆಗ ಪ್ರೆಸ್ ಮುಂದೆ ವಿಷಯ ಹೇಳಲಿಲ್ಲ. ಪ್ರೆಸ್ ಮುಂದೆ ಘೋಷಣೆ ಮಾಡದಿದ್ದರಿಂದ ಈ ರೀತಿ ಆಗುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು. ನಿಮ್ಮ ಮಾತಿಗೆ ಓಗೊಟ್ಟು ನಾವು ಒಪ್ಪಿಕೊಂಡಿದ್ದೇವೆ. ಆದರೆ ಈಗ ರಾಹುಲ್ ಗಾಂಧಿ ಅವರ ಕಡೆ ಬೊಟ್ಟು ಮಾಡುವುದು ಹಿರಿಯ ನಾಯಕರಿಗೆ ಶೋಭೆ ತರಲ್ಲ. ಇದು ಸಿದ್ದರಾಮಯ್ಯನವರ ವರ್ಚಸ್ಸಿಗೂ ಧಕ್ಕೆ ತರಲಿದೆ ಎಂದು ಡಿ.ಕೆ.

ಪುಟ 2ಕ್ಕೆ

### ಸೋನಿಯಾ, ರಾಹುಲ್, ಪ್ರಿಯಾಂಕ ಗಾಂಧಿ ಭೇಟಿ

**ನವದೆಹಲಿ:** ರಾಜ್ಯದಲ್ಲಿ ಅಧಿಕಾರ ಹಸ್ತಾಂತರ ಬಿಕ್ಕಟ್ಟಿನ ನಡುವೆಯೇ ದೆಹಲಿಗೆ ಭೇಟಿ ನೀಡಿರುವ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಸೋನಿಯಾ ಗಾಂಧಿ ಸೇರಿದಂತೆ ಕಾಂಗ್ರೆಸ್ ವರಿಷ್ಠರನ್ನು ಭೇಟಿ ಮಾಡಿ ಮಾತುಕತೆ ನಡೆಸಿರುವುದು ರಾಜ್ಯ ರಾಜಕೀಯದಲ್ಲಿ ಕುತೂಹಲ ಮೂಡಿಸಿದೆ.



ಡಿ.ಕೆ.ಶಿವಕುಮಾರ್ ಗುರುವಾರ ಮೊದಲಿಗೆ ಪ್ರಿಯಾಂಕಾ ಗಾಂಧಿ, ರಾಹುಲ್ ಗಾಂಧಿ ಮತ್ತು ಸೋನಿಯಾ ಗಾಂಧಿ ಅವರನ್ನು ಭೇಟಿ ಮಾಡಿ ಪ್ರತ್ಯೇಕವಾಗಿ ಚರ್ಚಿಸಿದ್ದಾರೆ. ಡಿಕೆಶಿ ಪ್ರಸ್ತಾಪಕ್ಕೆ

## ನಾನು ದೆಹಲಿಗೆ ಬಂದಿರುವುದೇ ರಾಜಕಾರಣ ಮಾಡುವ ಸಲುವಾಗಿ!

*** ಮುಖ್ಯಮಂತ್ರಿ ಕುರ್ಚಿಗಾಗಿ ನೇರ ಅಖಾಡಕ್ಕಿಳಿದ ಡಿಕೆಶಿ**

**ನವದೆಹಲಿ:** ನಾನು ದೆಹಲಿಗೆ ಬಂದಿರುವುದೇ ರಾಜಕಾರಣ ಮಾಡುವ ಸಲುವಾಗಿ. ನಾನು ಸುಮ್ಮನೆ ಗಾಳಿ ಕುಡಿದುಕೊಂಡು ಹೋಗೋದಿಕ್ಕೆ ದೆಹಲಿಗೆ ಬಂದಿಲ್ಲ. ವರಿಷ್ಠರ ಬಳಿ ಏನು ಮಾತನಾಡಬೇಕೋ ಅದನ್ನ ಮಾತನಾಡಿದ್ದೀನಿ. ಎಲ್ಲದಕ್ಕೂ ಕಾಲ ಉತ್ತರ ಕೊಡುತ್ತದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಖಡಕ್ ಆಗಿ ಮಾತನಾಡಿದ್ದಾರೆ.



ದೆಹಲಿಯಲ್ಲಿ ಗುರುವಾರ ಡಿ.ಕೆ.ಶಿಕುಕುಮಾರ್ ಅವರು, ಕಾಂಗ್ರೆಸ್ ವರಿಷ್ಠರನ್ನು ಪ್ರತ್ಯೇಕವಾಗಿ ಭೇಟಿ ಮಾಡಿ ಮಾತುಕತೆ ನಡೆಸಿದರು. ದೆಹಲಿಯ 10 ಜನ್ ಪಥ್ ರಸ್ತೆಯಲ್ಲಿರುವ ಸೋನಿಯಾ ಗಾಂಧಿ ನಿವಾಸದಲ್ಲಿ ನಾಯಕಿಯನ್ನು ಭೇಟಿ ಮಾಡಿದ ಡಿ.ಕೆ ಶಿವಕುಮಾರ್ ಸುಮಾರು ಅರ್ಧ ಗಂಟೆ ಕಾಲ ಮಾತುಕತೆ ನಡೆಸಿದ್ದಾರೆ.

ನಂತರ ಸೋನಿಯಾ ಗಾಂಧಿ ನಿವಾಸದ ಹೊರಗೆ ಮಾಧ್ಯಮ ಪ್ರತಿನಿಧಿಗಳಿಗೆ ಪ್ರತಿಕ್ರಿಯೆ ನೀಡಿದ ಅವರು, ದೆಹಲಿಗೆ ಬಂದ ಮೇಲೆ ಎಲ್ಲಾ ವಿಚಾರ ಮಾತನಾಡಬೇಕು. ವರಿಷ್ಠರಿಗೆ ಏನು ಹೇಳಬೇಕೋ ಅದನ್ನ ಮಾತನಾಡಿದ್ದೀನಿ. ಆದರೆ ಯಾರ ಹತ್ತಿರ ಏನೇನು ಮಾತನಾಡಿದೆ ಅಂತ ಬಹಿರಂಗವಾಗಿ ಹೇಳೋಕೆ ಆಗಲ್ಲ. ಒಳಗೆ ನಡೆದ ಚರ್ಚೆಯನ್ನು ಹೊರಗೆ ಹೇಳುವುದು ಸರಿಯಲ್ಲ ಎಂದು ತಿಳಿಸಿದರು.

### ಮಹಾ ಶಿವರಾತ್ರಿ: ತ್ರಿನೇಶ್ವರಸ್ವಾಮಿಗೆ ಚಿನ್ನದ ಕೊಳಗ



**ಮೈಸೂರು:** ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಸಮೂಹ ದೇವಸ್ಥಾನಗಳಲ್ಲಿ ಒಂದಾದ ಶ್ರೀ ತ್ರಿನೇಶ್ವರಸ್ವಾಮಿ ದೇವಾಲಯದಲ್ಲಿ ಫೆಬ್ರವರಿ 15ರಂದು ಮಹಾಶಿವರಾತ್ರಿ ಹಬ್ಬದ ಪ್ರಯುಕ್ತ ಮೂಲ ದೇವರಿಗೆ ಚಿನ್ನದ ಕೊಳಗವನ್ನು ಧರಿಸಲಾಗುತ್ತದೆ. ದೇವಾಲಯದಲ್ಲಿ ವಿಶೇಷ ಪೂಜೆ, ಅಭಿಷೇಕ, ಪ್ರಸಾದ ವಿತರಣೆಗೆ ಏರ್ಪಾಡು ಮಾಡಲಾಗಿದೆ. ಅಂದು ಬೆಳಿಗ್ಗೆ 6.30ರಿಂದ ಸಂಜೆ 4.30 ರವರೆಗೆ ಸಾರ್ವಜನಿಕರಿಗೆ ಸಾಮಾನ್ಯ

ಪುಟ 2ಕ್ಕೆ


## ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧಿ ಖಾಲಿ

**ಪಾಪರ್ ಸರ್ಕಾರದ ಸಂಕೇತ: ಅಶೋಕ್**

**ಬೆಂಗಳೂರು:** ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧಿ ಖಾಲಿಯಾಗಿರುವುದು ಪಾಪರ್ ಸರ್ಕಾರದ ಸಂಕೇತವಾಗಿದೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ್ ಕಿಡಿಕಾರಿದರು.

ಸುದ್ದಿಗೋಷ್ಠಿಯಲ್ಲಿ ಗುರುವಾರ ಮಾತನಾಡಿದ ಅವರು, ರಾಜ್ಯ ಕಾಂಗ್ರೆಸ್ ಸರ್ಕಾರಕ್ಕೆ ಔಷಧಿ ಖರೀದಿಸಲು ಹಣವಿಲ್ಲ. ಪ್ಯಾರಾಸಿಟಾಮಾಲ್‌ನಿಂದ ಆರಂಭವಾಗಿ ಅಗತ್ಯವಾದ 800ಕ್ಕೂ ಅಧಿಕ ಔಷಧಿಗಳು ಲಭ್ಯವಿಲ್ಲವೆಂದು ನಾನು 2024ರ ಡಿಸೆಂಬರ್‌ನ ಅಧಿವೇಶನದಲ್ಲಿ ಹೇಳಿದ್ದೆ. ಆಗ ಸಚಿವ ದಿನೇಶ್ ಗುಂಡೂರಾವ್, ಕೂಡಲೇ ಔಷಧಿ ಖರೀದಿಸಲಾಗುವುದು ಎಂದು ಹೇಳಿದ್ದರು. ಇನ್ನೂ ಯಾವುದೇ ಔಷಧಿ ದಾಸ್ತಾನಿಲ್ಲ. ಈ ಮೂಲಕ ಆರೋಗ್ಯ ಇಲಾಖೆ ಅನಾರೋಗ್ಯ ಪೀಡಿತವಾಗಿದೆ. ಆಸ್ಪತ್ರೆಗಳ ನಿರ್ವಹಣೆಯ ಹಣದಿಂದ ಔಷಧಿ ಖರೀದಿಸುವ ದುಸ್ಥಿತಿಗೆ ಸರ್ಕಾರ ಬಂದಿದೆ. ಸಾಲ ಮಾಡಿ ಔಷಧಿ ಖರೀದಿಸುವ ಸ್ಥಿತಿ ಬಂದಿದೆ ಎಂದು ಆರೋಪಿಸಿದರು.

ಮಾರ್ಚ್‌ಗೆ ಟೆಂಡರ್‌ಗೆ ಅಂತಿಮಗೊಳಿಸಲು ಆರೋಗ್ಯ ಇಲಾಖೆಯಿಂದ ಆದೇಶ ಹೊರಡಿಸಲಾಗಿದೆ. ಅಂದರೆ ಮೇ, ಜೂನ್ ವರೆಗೆ ಸರ್ಕಾರಿ ಆಸ್ಪತ್ರೆಗಳಿಗೆ ಔಷಧಿ ಬಾರದೇ ಇದ್ದರೆ ರೋಗಿಗಳು ಸಾಯ ಬೇಕಾಗುತ್ತದೆ. ಅಪಘಾತವಾದರೆ ಬ್ಯಾಂಡೇಜ್ ಕೂಡ ಸಿಗುವುದಿಲ್ಲ.



## ಬೆಂಗಳೂರಿನಲ್ಲಿ ಐಪಿಎಲ್ ಪಂದ್ಯ

**ಕೆಎಸ್‌ಸಿಎ ಜೊತೆ ಗೃಹ ಸಚಿವ ಜಿ.ಪರಮೇಶ್ವರ ಸಭೆ**

**ಬೆಂಗಳೂರು:** ನಗರದ ಚಿನ್ನಸ್ವಾಮಿ ಕ್ರೀಡಾಂಗಣ ದಲ್ಲಿ ಐಪಿಎಲ್ 2026ರ ಪಂದ್ಯಗಳನ್ನು ಆಯೋ ಜಿಸುವ ಕುರಿತು ಗೃಹ ಸಚಿವ ಜಿ.ಪರಮೇಶ್ವರ ಅಧ್ಯ ಕ್ಷತೆಯಲ್ಲಿ ಗುರುವಾರ ವಿಧಾನಸೌಧದಲ್ಲಿ ಕರ್ನಾ ಟಕ ರಾಜ್ಯ ಕ್ರಿಕೆಟ್ ಸಂಸ್ಥೆ (ಕೆಎಸ್‌ಸಿಎ) ಸಭೆ ನಡೆಯಿತು.




ಸಭೆ ನಂತರ ಕೆಎಸ್ ಸಿಎ ಅಧ್ಯಕ್ಷ ವೆಂಕಟೇಶ್ ಪ್ರಸಾದ್ ಮಾತನಾಡಿ, ಚಿನ್ನಸ್ವಾಮಿ ಕ್ರೀಡಾಂಗಣದ ಕುರಿತು ಸಂಪುಟದ ನಿರ್ಧಾರಕ್ಕಾಗಿ ಕಾಯುತ್ತಿ ದ್ದೇವೆ. ಸಭೆಯಲ್ಲಿ ಸಕಾರಾತ್ಮಕ ಫಲಿತಾಂಶ ಲಭ್ಯ ವಾಗಿದೆ. ಎಲ್ಲ ಸಲಹೆಗಳನ್ನು ಪರಿಗಣಿಸಲಾ ಗಿದೆ ಮತ್ತು ಶಿಫಾರಸುಗಳ ಪ್ರಕಾರ ಕೆಲಸ ಪ್ರಗತಿಯಲ್ಲಿದೆ ಎಂದು ಹೇಳಿದರು.



ಕೆಎಸ್‌ಸಿಎ ಕಾರ್ಯದರ್ಶಿ, ಗೃಹ ಇಲಾಖೆ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿ ನಾಥ್, ರಾಜ್ಯ ಡಿಜಿಪಿ ಎಂಎ ಸಲೀಂ, ಜಿಬಿಎ ಆಯುಕ್ತ ಮಹೇಶ್ವರ ರಾವ್, ಗೃಹ ಇಲಾಖೆ ಕಾರ್ಯದರ್ಶಿ ಕೆವಿ ಶರತ್‌ಚಂದ್ರ, ಬೆಂಗಳೂರು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಮತ್ತು ಐಪಿಎಲ್ ಫ್ರಾಂಚೈಸಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಪದಾಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.

## ರಾಗಾ ಸದಸ್ಯತ್ವ ರದ್ದತಿಗೆ ಬಿಜೆಪಿ ನಿಲುವಳಿ ಪ್ರಸ್ತಾವನೆ

**ನವದೆಹಲಿ:** ಕೇಂದ್ರ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸುತ್ತಿರುವ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ವಿರುದ್ಧ ಮುಗಿಬಿದ್ದಿರುವ ಆಡಳಿತ ರೂಢ ಬಿಜೆಪಿ ಈಗ ಅವರ ಲೋಕಸಭಾ ಸದಸ್ಯತ್ವವನ್ನು ರದ್ದುಗೊಳಿಸಲು ನೋಟಿಸ್ ಸಲ್ಲಿಸಿದೆ.

ರಾಹುಲ್ ಗಾಂಧಿ ಅವರ ಸದಸ್ಯತ್ವವನ್ನು ರದ್ದುಗೊಳಿಸು ವಂತೆ ನಾನು 'ನಿಲುವಳಿ ಪ್ರಸ್ತಾ ವನೆ' ಸಲ್ಲಿಸಿದ್ದೇನೆ ಎಂದು ಬಿಜೆಪಿ ಸಂಸದ ನಿಶಿಕಾಂತ್ ದುಬೆ ಅವರು ಗುರುವಾರ ತಿಳಿಸಿದರು. ತಮ್ಮ ನೋಟಿಸ್‌ನಲ್ಲಿ ರಾಹುಲ್ ಗಾಂಧಿಯ ವರು ಸೊರೊಸ್ ಫೌಂಡೇಶನ್, ಯುಎಸ್‌ಐಐಡಿ, ಫೋರ್ಡ್ ಫೌಂಡೇಶನ್‌ನೊಂದಿಗೆ ಕೈಜೋಡಿಸಿ ವಿದೇಶಗಳಿಗೆ ಹೇಗೆ ಭೇಟಿ ನೀಡುತ್ತಾರೆ ಮತ್ತು ಭಾರತ ವಿರೋಧಿ ಹೇಳಿಕೆಗಳನ್ನು ಉಲ್ಲೇಖಿಸಿರು ವುದಾಗಿ ತಿಳಿಸಿದ್ದಾರೆ. ರಾಹುಲ್ ಗಾಂಧಿ ಅವರ ಸಂಸದೀಯ ಸದಸ್ಯತ್ವ ವನ್ನು ರದ್ದುಗೊಳಿಸಬೇಕು ಹಾಗೂ ಜೀವಿತಾವಧಿಗೆ ಚುನಾವಣೆಯಲ್ಲಿ ಸ್ಪರ್ಧಿಸಲು ಅವಕಾಶ ನೀಡಬಾರದು ಎಂದು ನಾನು ಆಗ್ರಹಿಸಿದ್ದೇನೆ ಎಂದು ಬಿಜೆಪಿ ಸಂಸದ ಹೇಳಿದ್ದಾರೆ. ಇದು ವಿಶೇಷ ಹಕ್ಕುಚ್ಯುತಿ ನೋಟಿಸ್ ಅಲ್ಲ. ಬದಲಾಗಿ ಒಂದು ಪ್ರಮುಖ ಪ್ರಸ್ತಾವನೆ ಸಲ್ಲಿಸಿದ್ದೇನೆ. ಅದರಲ್ಲಿ ನಾನು ರಾಹುಲ್ ಗಾಂಧಿ, ಸೊರೊಸ್ ಫೌಂಡೇಶನ್, ಫೋರ್ಡ್ ಫೌಂಡೇಶನ್ ಮತ್ತು ಯುಎಸ್‌ಐಐಡಿಯೊಂದಿಗೆ ಥೈಲ್ಯಾಂಡ್, ವಿಯೆಟ್ನಾಂ, ಕಾಂಬೋಡಿಯಾಗೆ ಹೇಗೆ ಭೇಟಿ ನೀಡುತ್ತಾರೆ ಮತ್ತು ಭಾರತ ವಿರೋಧಿ ಪಡೆಗಳೊಂದಿಗೆ ಹೇಗೆ ಒಪ್ಪಂದ ಮಾಡಿಕೊಳ್ಳುತ್ತಾರೆ ಎಂಬುದನ್ನು ಉಲ್ಲೇಖಿಸಿರುವ ಸಬ್ಸ್ಟಾಂಟಿವ್ ಮೋಷನ್ ನೋಟಿಸ್ ನೀಡಿದ್ದೇನೆ ಎಂದು ದುಬೆ ತಿಳಿಸಿದ್ದಾರೆ. ಭಾರತ–ಅಮೆರಿಕ ವ್ಯಾಪಾರ ಒಪ್ಪಂದ, ಕೇಂದ್ರ ಬಜೆಟ್ ಅನ್ನು ಟೀಕಿಸಿ ರಾಹುಲ್ ಗಾಂಧಿ ಸಂಸತ್ತಿನಲ್ಲಿ ಭಾಷಣ ಮಾಡಿದ್ದರು. ಇದಾದ ಒಂದು ದಿನದ ನಂತರ ಈ ಬೆಳವಣಿಗೆ ನಡೆದಿದೆ.



ಮೊದಲ ಪುಟದಿಂದ

## ಮಹಾ ಶಿವರಾತ್ರಿ: ತ್ರಿನೇಶ್ವರಸ್ವಾಮಿಗೆ ಚಿನ್ನದ ಕೊಳಗ

ದರ್ಶನದ ವ್ಯವಸ್ಥೆಯನ್ನು ಕಲ್ಪಿಸಲಾಗುತ್ತದೆ. ರಾತ್ರಿ 10 ಗಂಟೆಗೆ ಸರ್ಕಾರಿ ಸೇವೆಯ ಮೂಲಕ ಏಕಾದಶಿ ರುದ್ರಾಭಿಷೇಕ ಇರುವುದರಿಂದ ಮಧ್ಯರಾತ್ರಿ 12 ಗಂಟೆಯವರೆಗೆ ನಿರಂತರ ದರ್ಶನದ ವ್ಯವಸ್ಥೆಯ ಅವಕಾಶವನ್ನು ಕಲ್ಪಿಸಲಾಗಿದೆ ಎಂದು ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ತಿಳಿಸಿದ್ದಾರೆ.

## ಜನರಿಗೆ ಮತ್ತೆ 'ವಿದ್ಯುತ್ ಶಾಕ್'

ಆಯೋಗವು ಸಾರ್ವಜನಿಕರ ಅಹವಾಲು ಮತ್ತು ಆಕ್ಷೇಪಣೆಗಳನ್ನು ಆಲಿಸಲು ಮುಂದಾಗಿದೆ. ಫೆಬ್ರವರಿ 16ರಿಂದ ಫೆಬ್ರವರಿ 27ರವರೆಗೆ ರಾಜ್ಯದ ನಾನಾ ಭಾಗಗಳಲ್ಲಿ ಕೆಇಆರ್‌ಸಿ ಸಾರ್ವಜನಿಕ ವಿಚಾರಣಾ ಸಭೆಗಳನ್ನು ನಡೆಸಲಿದೆ. ಈ ಸಭೆಗಳಲ್ಲಿ ಗ್ರಾಹಕರು ತಮ್ಮ ಅಭಿಪ್ರಾಯಗಳನ್ನು ತಿಳಿಸಬಹುದಾಗಿದೆ.

ನೀರಾವರಿ ಪಂಪ್‌ಸೆಟ್‌ಗಳು, ವಾಣಿಜ್ಯ ಮತ್ತು ಕೈಗಾರಿಕಾ ಗ್ರಾಹಕ ವರ್ಗಗಳ ಸುಂಕದಲ್ಲಿನ ಮಾರ್ಪಾಡುಗಳಿಗೆ ಸಂಬಂಧಿಸಿದ ಸಾರ್ವಜನಿಕ ವಿಚಾರಣೆಗಳನ್ನು ಫೆಬ್ರವರಿ 25, 2026ರಂದು ನಡೆಸಲು ಮುಂದಾಗಿದೆ. ಕೆಇಆರ್‌ಸಿ ತನ್ನ ಆದೇಶದಲ್ಲಿ, ಮಾರ್ಚ್ 3, 2025ರಂದು 2026ರ ಹಣಕಾಸು ವರ್ಷದ ಸುಂಕ ಹೆಚ್ಚಳದಲ್ಲಿ ಪ್ರತಿ ಯೂನಿಟ್‌ಗೆ 36 ಪೈಸೆ ಪಿ & ಜಿ ಸರ್‌ಚಾರ್ಜ್ (ಸರ್ಕಾರದ ಕೊಡುಗೆ), 2027ರ ಹಣಕಾಸು ವರ್ಷಕ್ಕೆ ಪ್ರತಿ ಯೂನಿಟ್‌ಗೆ 35 ಪೈಸೆ ಮತ್ತು 2028 ರ ಹಣಕಾಸು ವರ್ಷಕ್ಕೆ ಪ್ರತಿ ಯೂನಿಟ್‌ಗೆ 34 ಪೈಸೆ ಸೇರಿಸುವ ಆದೇಶವನ್ನು ಸೇರಿಸಿದೆ.

## ಬೈರತಿ ಜಾಮೀನು ಅರ್ಜಿ 'ಸುಪ್ರೀಂ'ನಲ್ಲಿ ವಜಾ: ಬಂಧನ

ಪಡೆದುಕೊಂಡು ವಿಚಾರಣೆ ನಡೆಸಲು ಸಿಐಡಿ ಪೊಲೀಸರು ಸಿದ್ಧತೆ ನಡೆಸಿದ್ದರು. ಆ ಸಂದರ್ಭದಲ್ಲೂ ಶಾಸಕರು ತಲೆಮರೆಸಿಕೊಂಡಿದ್ದರು.

## ಪಾಸ್‌ಪೋರ್ಟ್ ಕೇಂದ್ರ ಮೇಲ್ದರ್ಜೆಗೇರಿಸಿ

ಐಟಿ ವಲಯ, ಪ್ರವಾಸೋದ್ಯಮ ಮತ್ತು ವಿದೇಶಗಳಲ್ಲಿ ಉದ್ಯೋಗ ಕ್ಷೇತ್ರ ವಿಸ್ತರಣೆಯಾಗಿದೆ. ಮೈಸೂರು– ಕೊಡಗು ಕ್ಷೇತ್ರದಲ್ಲಿ ಪಾಸ್‌ಪೋರ್ಟ್ ಸೇವೆಗಳಿಗೆ ಬೇಡಿಕೆ ತೀವ್ರವಾಗಿದೆ ಎಂದು ಹೇಳಿದರು.

ಸೀಮಿತ ಸಾಮರ್ಥ್ಯ ಮತ್ತು ತತ್ಕಾಲ್ ಸೇವೆ ಇಲ್ಲದಿರುವುದರಿಂದ ಪ್ರಸ್ತುತ ಅಂಚೆ ಕಚೇರಿ ಪಾಸ್‌ಪೋರ್ಟ್ ಸೇವಾ ಕೇಂದ್ರ ಸಾರ್ವಜನಿಕ ಅಗತ್ಯಗಳನ್ನು ಪೂರೈಸಲು ಸಾಕಾಗುವುದಿಲ್ಲ. ಎಲ್ಲದ್ದಕ್ಕೂ ಬೆಂಗಳೂರಿಗೆ ತೆರಳಬೇಕಾದ ಅಗತ್ಯವಿದೆ ಎಂದು ಮನವರಿಕೆ ಮಾಡಿಕೊಡಲಾಗಿದೆ ಎಂದು ತಿಳಿಸಿದರು.

ಇಲ್ಲಿ ಪೂರ್ಣ ಪ್ರಮಾಣದ ಕೇಂದ್ರ ಆರಂಭವಾದರೆ, ಬೆಂಗಳೂರು ಪಾಸ್‌ಪೋರ್ಟ್ ಸೇವಾ ಕೇಂದ್ರಗಳ ಮೇಲಿನ ಅವಲಂಬನೆ ತಗ್ಗಲಿದೆ. ಈ ನಿಟ್ಟಿನಲ್ಲಿ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವರು ಭರವಸೆ ನೀಡಿದ್ದಾರೆ. ನನ್ನ ಕ್ಷೇತ್ರದ ವ್ಯಾಪ್ತಿಯ ಕೊಡಗಿನಲ್ಲಿ ಪಾಸ್‌ಪೋರ್ಟ್ ಪಡೆಯಬೇಕಾದದವರು ಮೈಸೂರು ಅಥವಾ ಬೆಂಗಳೂರಿಗೆ ಬರಬೇಕಾದ ಅನಿವಾರ್ಯವಿದೆ. ಹೀಗಾಗಿ, ಅಲ್ಲಿ ಮೆಗಾ ಪಾಸ್‌ಪೋರ್ಟ್ ಮೇಳ ಆಯೋಜಿಸುವಂತೆಯೂ ಕೋರಿದ್ದೇನೆ ಎಂದು ಅವರು ತಿಳಿಸಿದ್ದಾರೆ.

## ರಾಹುಲ್ ಚಿತ್ರ ವಿರೂಪ: ಶಾಸಕ ಅರಗ ಪಿಎ ಬಂಧನ

ಅಜೆಂಡ' ಎಂಬ ಟ್ಯಾಗ್ ಲೈನ್ ನೀಡಿ ಫೇಸ್‌ಬುಕ್‌ನಲ್ಲಿ ಹರಿಬಿಡಲಾಗಿತ್ತು. ಇದು ಸಾರ್ವಜನಿಕ ವಲಯದಲ್ಲಿ ಆಕ್ರೋಶಕ್ಕೆ ಕಾರಣವಾಗಿತ್ತು. ಈ ಆಕ್ಷೇಪಾರ್ಹ ಪೋಸ್ಟ್ ಗಮನಿಸಿದ ಹೊಸನಗರ–ನಗರ ಪೊಲೀಸರು ಬಿಎನ್‌ಎಸ್ ಕಾಯ್ದೆಯ ಸೆಕ್ಷನ್ 353(2) ರ ಅಡಿಯಲ್ಲಿ ಸ್ವಯಂ ಪ್ರೇರಿತ ದೂರು ದಾಖಲಿಸಿಕೊಂಡಿದ್ದರು.

## ಸೋನಿಯಾ, ರಾಹುಲ್, ಪ್ರಿಯಾಂಕ ಗಾಂಧಿ ಭೇಟಿ

ಸೋನಿಯಾ ಮತ್ತು ರಾಹುಲ್ ಗಾಂಧಿ ಏನು ಉತ್ತರಿಸಿದ್ದಾರೆ? ಸಿಎಂ ಸಿದ್ದರಾಮಯ್ಯ ಅವರಿಗೆ ಸಂದೇಶ ರವಾನೆಯಾಗಿದೆಯಾ? ಸದ್ಯಕ್ಕೆ ಯಥಾಸ್ಥಿತಿ ಕಾಪಾಡಿಕೊಳ್ಳಲು ಸೂಚಿಸಿದ್ದಾರಾ ಎಂಬುದು ಸದ್ಯದ ಕುತೂಹಲವಾಗಿದೆ.

ಅಸ್ಸಾಂ ಚುನಾವಣೆ ಬಗ್ಗೆ ಚರ್ಚೆ ಮಾಡಲು ಸೋನಿಯಾ ಗಾಂಧಿ ನಿವಾಸಕ್ಕೆ ಆಗಮಿಸಿದ್ದೆವು ಎಂದು ಅವರು ತಿಳಿಸಿದ್ದಾರೆ. ಸೋನಿಯಾ ನಿವಾಸದ ಒಳಗೆ ಏನು ಮಾತನಾಡಿದೆ, ಯಾರ ಬಳಿ ಮಾತನಾಡಿದೆ ಎಂಬುದನ್ನು ಹೇಳಲ್ಲ. ಇಲ್ಲಿ ಬೀದಿಯಲ್ಲಿ ನಿಂತು ಎಲ್ಲ ಮಾತನಾಡುವ ಅಗತ್ಯ ಇಲ್ಲ. ಇಲ್ಲಿಗೆ ಬಂದ ಮೇಲೆ ಏನು ಮಾತನಾಡಬೇಕೋ ಎಲ್ಲವನ್ನೂ ಮಾತನಾಡಿದ್ದೀನಿ. ಕಾಲವೇ ಎಲ್ಲದಕ್ಕೂ ಉತ್ತರ ಕೊಡುತ್ತದೆ ಎಂದು ಡಿಕೆಶಿ ತಿಳಿಸಿದ್ದಾರೆ.

## ಮೆಟ್ರೋ ಡಬಲ್ ಡೆಕ್ಕರ್‌ಗೆ ಕೇಂದ್ರ ಸರ್ಕಾರದ 'ರೆಡ್ ಸಿಗ್ನಲ್'

ಈ ಹಿಂದೆ ಯೋಜನಾ ವೆಚ್ಚ ಹೆಚ್ಚಾಗಿದೆ ಎಂದು ಡಿಪಿಆರ್ ಅನ್ನು ಕೇಂದ್ರ ಸರ್ಕಾರ ವಾಪಸ್ ಕಳಿಸಿತ್ತು. ಇದೀಗ ಮತ್ತೊಮ್ಮೆ ರಾಜ್ಯ ಸರ್ಕಾರದ ಯೋಜನೆಗೆ ಕೇಂದ್ರ ಬ್ರೇಕ್ ಹಾಕಿದೆ.

ವರ್ತಮಾನ
ಜಾಹಿರಾತಿಗೆ ಉತ್ತಮ ಮಾಧ್ಯಮ

# ಬಿಜೆಪಿ ವಿರುದ್ಧ ಕೈ ದೂರು



ಮೈಸೂರು: ಬಿಜೆಪಿಯ ಸೋಶಿಯಲ್ ಮೀಡಿಯಾ ಖಾತೆಯಲ್ಲಿ ವಿಧಾನ ಪರಿಷತ್ ಸದಸ್ಯ ಯತೀಂದ್ರ ಸಿದ್ದರಾಮಯ್ಯರನ್ನು "ವರ್ಗಾವಣೆ ದಂದೆ ಹಾಗೂ ಕಮಿಷನ್ ವಸೂಲಿ ಇಲಾಖೆ ಕರ್ನಾಟಕ ಸರ್ಕಾರದ ಸಚಿವರು" ಎಂದು ಹಾಕಿರುವುದು ಮತ್ತು ಮಾಜಿ ಸಂಸದ ಪ್ರತಾಪ್ ಸಿಂಹ ಮಾಧ್ಯಮಗಳ ಜೊತೆ ಸುದ್ದಿಗೋಷ್ಠಿ ನಡೆಸಿ ಯತೀಂದ್ರ ಸಿದ್ದರಾಮಯ್ಯ ಅವರನ್ನ ವರ್ಗಾವಣೆ ದಂಧೆ ಸಚಿವ ಎಂದು ನಿಂದಿಸಿರುವುದರ ವಿರುದ್ಧ ಎಫ್‌ಐಆರ್ ದಾಖಲಿಸಿ ಕ್ರಮವಹಿಸಬೇಕು ಎಂದು ಒತ್ತಾಯಿಸಿ ನಗರ ಪೊಲೀಸ್ ಆಯುಕ್ತರಿಗೆ ನಗರ ಮತ್ತು ಗ್ರಾಮಾಂತರ ಕಾಂಗ್ರೆಸ್ ಸಮಿತಿ ನಿಯೋಗ ದೂರು ಸಲ್ಲಿಸಿದರು.

ಬಿಜೆಪಿ ಐಟಿಸೆಲ್ ಯತೀಂದ್ರ ಸೆಲ್ ಅವರ ವಿಚಾರದಲ್ಲಿ ಬಹಳ ಕೆಟ್ಟದಾಗಿ ಹಾಕಿ ದಂಧೆ ಖಾತೆಯ ಸಚಿವರು ಎಂದು ಬಿಂಬಿಸಿ ಕೆಟ್ಟದಾಗಿ ಪ್ರಚಾರ ಮಾಡಿರುವುದರ ವಿರುದ್ಧ ಅವರನ್ನು ಸೈಬರ್ ಆಕ್ಟ್ ಅಡಿಯಲ್ಲಿ ಬಂಧಿಸಬೇಕು. ಮಾಜಿ ಸಂಸದನಿಗೆ ಮಾನ ಮಾರ್ಯಾದೆ ಇದ್ದರೆ ಟಿಕೇಟ್ ಯಾಕೆ ತಪ್ಪಿತು ಎಂಬುದನ್ನು ಇದುವರೆವಿಗೂ ಹೇಳಿಲ್ಲ. ನಿತ್ಯ ಮುಖ್ಯಮಂತ್ರಿ, ಅವರ ಕುಟುಂಬದವರನ್ನು ಬೈಯುವುದಕ್ಕೆ ವ್ಯವಸ್ಥೆ ಮಾಡಿಕೊಂಡಿರುವುದರ ವಿರುದ್ಧವೂ ದೂರು ನೀಡಿದ್ದೇವೆ. ಬಿಜೆಪಿಗೆ ಸಿಎಂ ಸಿದ್ದರಾಮಯ್ಯ ಎರಡನೇ ಅವಧಿಗೆ ಸಿಎಂ ಆಗಿರುವುದನ್ನು ನಿತ್ಯವೂ ಸಹಿಸಲು ಆಗುತ್ತಿಲ್ಲ. ಅವರನ್ನು ಸಿಎಂ ಹುದ್ದೆಯಿಂದ ತೆಗಿಯಬೇಕೆಂಬ ಉದ್ದೇಶದಿಂದ ನಿತ್ಯವೂ ಸುಳ್ಳು ಹೇಳಿ ಅದನ್ನೇ ಸತ್ಯ ಮಾಡಲು ಹೊರಟಿದ್ದಾರೆ ಎಂದು ಕಿಡಿಕಾರಿದರು. ವಿಜಯೇಂದ್ರ ತಂದೆ ಮುಖ್ಯಮಂತ್ರಿಯಾಗಿದ್ದಾಗ ತಾವೇ ಸಹಿ ಮಾಡಿ ಸಿಕ್ಕಿಹಾಕಿಕೊಂಡಿದ್ದಂತಹ ವ್ಯಕ್ತಿ ಈಗ ಸಿಎಂ ವಿರುದ್ಧ ಮಾತನಾಡುತ್ತಿದ್ದಾರೆ. ಕೆಲ ಬಿಜೆಪಿ ಶಾಸಕರು ಬಾಯಿಗೆ ಬಂದಂತೆ ಮಾತನಾಡುತ್ತಿದ್ದಾರೆ. ಜಿಲ್ಲಾಧ್ಯಕ್ಷರು ನೀಡಿದ ಗಡುವಿನಲ್ಲಿ ಪೊಲೀಸರು ಕ್ರಮ ಕೈಗೊಳ್ಳದಿದ್ದರೆ ಸಿಎಂ ಹಾಗೂ ಅಧ್ಯಕ್ಷರ ಮಾತಿಗೂ ಸುಮ್ಮನಾಗದೇ ಕಾರ್ಯಕರ್ತರೇ ನಮ್ಮ ನಾಯಕರ ರಕ್ಷಣೆ ಮುಂದಾಗಲಿದ್ದಾರೆಂದರು.

ಕಾಂಗ್ರೆಸ್ ಜಿಲ್ಲಾಧ್ಯಕ್ಷ ಬಿ.ಜೆ.ವಿಜಯಕುಮಾರ್ ಮಾತನಾಡಿ, ಮುಖ್ಯಮಂತ್ರಿ ವಿರುದ್ಧ ಇಂತಹ ಹೇಳಿಕೆಗಳನ್ನು ಸಹಿಸಲಾಗುವುದಿಲ್ಲ. ಅಲ್ಲದೆ, ಯತೀಂದ್ರ ಅವರ ಮೇಲೆ ಆಧಾರ ಇಲ್ಲದೇ ಆರೋಪ ಮಾಡುತ್ತಿರುವುದು ಖಂಡನೀಯ. ಗುರುವಾರ ಸಂಜೆ ಒಳಗೆ ಬಿಜೆಪಿ ಐಟಿಸೆಲ್ ಮತ್ತು ಪ್ರತಾಪ್ ಸಿಂಹ ವಿರುದ್ಧ ಎಫ್‌ಐಆರ್ ಆಗಬೇಕು. ಇಲ್ಲದಿದ್ದರೆ ಮುಂದಿನ ಪರಿಣಾಮವನ್ನು ಎದುರಿಸಬೇಕಾಗು ತ್ತದೆ ಎಂದರು. ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್, ಕಾಂಗ್ರೆಸ್ ಜಿಪಂ ಮಾಜಿ ಅಧ್ಯಕ್ಷ ಬಿ.ಎಂ.ರಾಮು, ಮಾಜಿ ಮೇಯರ್ ಪುಷ್ಪಲತಾ ಚಿಕ್ಕಣ್ಣ, ನಗರ ಕಾಂಗ್ರೆಸ್ ಪ್ರಧಾನ ಕಾರ್ಯ ದರ್ಶಿ ಎಂ.ಶಿವಣ್ಣ ಗುಡ್ಡಪ್ಪ, ಕಾರ್ಯದರ್ಶಿ ಈಶ್ವರ್ ಚಕ್ಕಡಿ, ಭಾಸ್ಕರ್ ಎಲ್.ಗೌಡ, ಮೋಹನ್, ಹಿಂದುಳಿದ ವರ್ಗಗಳ ನಗರಾಧ್ಯಕ್ಷ ನಾಗೇಶ್, ಕುರುಬರಹಳ್ಳಿ ಪ್ರಕಾಶ್, ಊಮಾ ಶಂಕರ್, ಮುಖಂಡರಾದ ಕುರುಬರಹಳ್ಳಿ ರಾಹುಲ್, ಹುಣಸೂರು ಬಸವಣ್ಣ, ಕಾಂಗ್ರೆಸ್ ಮಾಧ್ಯಮ ವಕ್ತಾರ ಮಹೇಶ್, ಚಂದನ್ ಗೌಡ, ಮೋಹನ್ ಉಪಸ್ಥಿತರಿದ್ದರು.

# ನಾಳೆ ಐತಿಹಾಸಿಕ ಹನುಮಾನ್ ಚಾಲಿಸ್



ಮೈಸೂರು: ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮದ ವತಿಯಿಂದ ಫೆ.14ರಂದು ನಗರದ ಮಹಾರಾಜ ಕಾಲೇಜು ಮೈದಾನದಲ್ಲಿ ಆಯೋಜಿಸಲಾಗಿರುವ ಬೃಹತ್ 'ಸಾಮೂಹಿಕ ಹನುಮಾನ್ ಚಾಲೀಸಾ ಪಾರಾಯಣ' ಕಾರ್ಯಕ್ರಮಕ್ಕೆ ಭರದ ಸಿದ್ಧತೆಗಳು ನಡೆದಿವೆ.

ಈ ಹಿನ್ನೆಲೆಯಲ್ಲಿ ಮುಡಾ ಮಾಜಿ ಅಧ್ಯಕ್ಷ ಎಚ್.ವಿ.ರಾಜೀವ್ ಹಾಗೂ ಗಣಪತಿ ಆಶ್ರಮದ ಪ್ರಮುಖರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಬಳಿಕ ಮಾತನಾಡಿದ ಎಚ್.ವಿ.ರಾಜೀವ್ ಮಾತನಾಡಿ, ಕಾರ್ಯಕ್ರಮಕ್ಕೆ ಬರುವ ಭಕ್ತರ ಸಂಖ್ಯೆಯನ್ನು ದೃಷ್ಟಿಯಲ್ಲಿಟ್ಟುಕೊಂಡು ಯಾವುದೇ ಲೋಪವಾಗದಂತೆ ಸಕಲ ವ್ಯವಸ್ಥೆ ಮಾಡಲಾಗಿದೆ. ಕಾರ್ಯಕ್ರಮಕ್ಕೆ ಸಾವಿರಾರು ಸಂಖ್ಯೆಯಲ್ಲಿ ಭಕ್ತರು ಆಗಮಿಸುವುದರಿಂದ, ಸುರಕ್ಷತೆ ಮತ್ತು ಶಿಸ್ತು ಕಾಪಾಡುವ ನಿಟ್ಟಿನಲ್ಲಿ ಸೂಕ್ತ ಪೊಲೀಸ್ ಬಂದೋಬಸ್ತ್ ವ್ಯವಸ್ಥೆಯನ್ನು ಮಾಡಲಾಗಿದೆ. ಮಹಾರಾಜ ಕಾಲೇಜು ಮೈದಾನದ ಪೂರ್ತಿ ಭಾಗಕ್ಕೆ ಶಾಮಿಯಾನ (ಪೆಂಡಾಲ್) ಅಳವಡಿಸಲಾಗಿದೆ. ಭಕ್ತರಿಗೆ ಅನುಕೂಲವಾಗುವಂತೆ ಸುಮಾರು 45,000 ಕುರ್ಚಿಗಳನ್ನು ಹಾಕಲಾಗಿದೆ ಎಂದು ಹೇಳಿದರು.

ಭಕ್ತರಿಗೆ ಮಾರ್ಗದರ್ಶನ ನೀಡಲು ಮತ್ತು ವ್ಯವಸ್ಥೆ ನಿರ್ವಹಿಸಲು 800 ಮಂದಿ ಸ್ವಯಂ ಸೇವಕರು ಕಾರ್ಯ ನಿರ್ವಹಿಸಲಿದ್ದಾರೆ. ಮಹಿಳೆಯರು ಮತ್ತು ಪುರುಷರಿಗೆ ಪ್ರತ್ಯೇಕ ಶೌಚಾಲಯ ಹಾಗೂ ಪ್ರವೇಶ ದ್ವಾರದಲ್ಲಿಯೇ ನೀರಿನ ಬಾಟಲ್ ವಿತರಣೆಗೆ ವ್ಯವಸ್ಥೆ ಕಲ್ಪಿಸಲಾಗಿದೆ.

> **ಜಾತಿ ಮೀರಿ ಕುಟುಂಬ ಹಾಗೂ ಲೋಕದ ಒಳಿತಿಗಾಗಿ ನಡೆಯುತ್ತಿರುವ ಈ ದೊಡ್ಡ ಪಾರಾಯಣದಲ್ಲಿ ಪ್ರತಿಯೊಬ್ಬರೂ ಭಾಗವಹಿಸುವ ಮೂಲಕ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿಕೊಡಬೇಕಿದೆ. ಆ ಮೂಲಕ ಗಣಪತಿ ಸಚ್ಚಿದಾನಂದ ಶ್ರೀಗಳು ಮಾಡಲು ಹೊರಟಿರುವ ಈ ಪಾರಾಯಣ ಮೈಸೂರಿನಲ್ಲಿ ಮತ್ತೊಂದು ದಾಖಲೆ ಬರೆಯುವಂತೆ ಮಾಡಬೇಕಿದೆ.**
>
> –ಎಚ್.ವಿ.ರಾಜೀವ್

ಕಾರ್ಯಕ್ರಮಕ್ಕೆ ಆಗಮಿಸುವವರ ವಾಹನ ನಿಲುಗಡೆಗೆ ಅರಸು ಬೋರ್ಡಿಂಗ್ ಶಾಲೆ ಹಾಗೂ ಯುವರಾಜ ಕಾಲೇಜು ಆವರಣದಲ್ಲಿ ಅವಕಾಶ ಕಲ್ಪಿಸಲಾಗಿದೆ. ಅನ್ನಪ್ರಸಾದಕ್ಕೆ ಯಾವುದೇ ಲೋಪ ಆಗದಂತೆ ಕ್ರಮ ಕೈಗೊಂಡಿದ್ದು ಪಾರಾಯಣ ಸ್ಥಳದಲ್ಲೇ ಅನ್ನಪ್ರಸಾದ ನೀಡಲು ವ್ಯವಸ್ಥೆಗೆ ಕಲ್ಪಿಸಲಾಗಿದೆ. ಇದಲ್ಲದೆ ಅಗ್ನಿ ಶಾಮಕ ವಾಹನ ಹಾಗೂ ಆಂಬುಲೆನ್ಸ್ ವ್ಯವಸ್ಥೆಗಳನ್ನು ಸಹ ಏರ್ಪಡಿಸಲಾಗಿದೆ ಎಂದು ತಿಳಿಸಿದರು. ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆಗಮಿಸಿ ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದರು. ಪತ್ರಿಕಾಗೋಷ್ಠಿಯಲ್ಲಿ ಮೈಸೂರಿನ ಉದ್ಯಮಿ ರಾಮೇಗೌಡ ಆಶ್ರಮದ ಟ್ರಸ್ಟಿಗಳಾದ ಎಚ್.ವಿ.ಪ್ರಮೋದ್, ರಮೇಶ್, ವಿನಯ ಬಾಬು ಮತ್ತಿತರರು ಉಪಸ್ಥಿತರಿದ್ದರು.

ನಗರಸಭೆ ಬಜೆಟ್

# ಪೂರ್ವ ಭಾವಿ ಸಭೆಯಲ್ಲಿ ಪ.ಜಾ, ಪ.ಪಂಗಡ ಸಮುದಾಯಗಳ ಸಲಹೆ ಪಡೆದ ಅಧ್ಯಕ್ಷರು

ರಾಮನಗರ: ಸಮುದಾಯ ಭವನಗಳನ್ನು ದುರಸ್ಥಿಗೊಳಿಸಿ, ಸಾಂಸ್ಕೃತಿಕ ಚಟುವಟಿಕೆಗಳಿಗಾಗಿ ಸುಸಜ್ಜಿತ ಭವನ ನಿರ್ಮಿಸಿಕೊಡಿ, ಹಿಂದೂ ಸ್ಮಶಾನಗಳನ್ನು ಸ್ವಚ್ಚಗೊಳಿಸಿ, ಅಗತ್ಯ ಸೌಲಭ್ಯಗಳನ್ನು ಕಲ್ಪಿಸಿಕೊಡಿ, ನಿವೇಶನ ರಹಿತರಿಗೆ ನಿವೇಶನ ಕೊಡಿ, ವಿದ್ಯಾಭ್ಯಾಸಕ್ಕೆ ಆರ್ಥಿಕ ಸಹಾಯ ಒದಗಿಸಿ, ಡಾ.ಬಾಬು ಜಗಜೀವನ ರಾಂ ಅವರ ಹೆಸರಿನಲ್ಲೊಂದು ಭವನ ನಿರ್ಮಿಸಿ, ಅಲೆಮಾರಿ ಸಮುದಾಯಗಳ ಅಭಿವೃದ್ಧಿಯಕಡೆಗೂ ಗಮನ ಹರಿಸಿ

ಹೀಗೆ ನಗರದಲ್ಲಿ ವಾಸವಿರುವ ಎಸ್ಸಿ, ಎಸ್ಟಿ ಸಮುದಾಯಗಳ ನಾಗರೀಕರು ನಗರಸಭೆಗೆ ತಮ್ಮ ಸಲಹೆಗಳನ್ನು ತಿಳಿಸಿ, ಬೇಡಿಕೆಗಳನ್ನು ಮಂಡಿಸಿ 2026–27ನೇ ಸಾಲಿನ ಆಯವ್ಯಯದಲ್ಲಿ ಇವುಗಳಿಗೆ ಸೂಕ್ತ ಅನುದಾನವನ್ನು ಮೀಸಲಿರಿಸುವಂತೆ ಮನವಿ ಮಾಡಿದರು. ನಗರಸಭೆಯ ಸಭಾಂಗಣದಲ್ಲಿ ನಗರ ಸಭಾಧ್ಯಕ್ಷ ಕೆ.ಶೇಷಾದ್ರಿ ಅವರು ಬಜೆಟ್ ಪೂರ್ವ ಭಾವಿ ಸಭೆಗೆ ಆಹ್ವಾನಿಸಿದ್ದ ಎಸ್ಸಿ,ಎಸ್ಟಿ ಸಮುದಾಯದ ಪ್ರಮುಖರು ಮತ್ತು ವಿವಿಧ ಸಂಘಟನೆಗಳ ಪದಾಧಿಕಾರಿಗಳು ಸಲಹೆಗಳು ಮತ್ತು ಬೇಡಿಕೆಗಳನ್ನು ಇಟ್ಟರು.

### ಸ್ವ–ಉದ್ಯೋಗಕ್ಕೆ ಧನ ಸಹಾಯ

ಜಿಲ್ಲಾ ದಲಿತ ಸಂಘರ್ಷ ಸಮಿತಿಯ ಅಧ್ಯಕ್ಷ ಶಿವಕುಮಾರಸ್ವಾಮಿ ಮಾತನಾಡಿ, ನಗರದ ವಿವಿಧ ವಾರ್ಡುಗಳಲ್ಲಿರುವ ಸಮುದಾಯ ಭವನಗಳನ್ನು ದುರಸ್ಥಿಗೊಳಿಸುವ ಅವಶ್ಯಕತೆ ಇದೆ, ಅಲ್ಲಿ ಗ್ರಂಥಾಲಯವನ್ನು ಸ್ಥಾಪಿಸಿ, ದಿನ ಪತ್ರಿಕೆಗಳನ್ನು ಚಂದಾದಾರಿಕೆ ಮಾಡಿಸಿದರೆ ಜ್ಞಾನವೃದ್ದಿಗೆ ಅವಕಾಶವಾಗುತ್ತದೆ. ಸಮುದಾಯದ ಯುವಕ, ಯುವತಿಯರಿಗೆ ಟೈಲರಿಂಗ್, ಕಂಪ್ಯೂಟರ್, ಟೈಪಿಂಗ್, ಚಾಲನಾ ತರಬೇತಿ ಕೊಡಿಸಿ ಎಂದು ಸಲಹೆ ಕೊಟ್ಟರು. ಸ್ವ ಉದ್ಯೋಗ ಕಲ್ಪಿಸಿಕೊಳ್ಳುವವರಿಗೆ ಧನ ಸಹಾಯ ಕೊಡಲು ಶೇ 24.10 ಕಾರ್ಯಕ್ರಮದಡಿ ಅವಕಾಶ ಮಾಡಿ ಎಂದರು.

### ಪ್ಲಾಸ್ಟಿಕ್ ಮುಕ್ತ ನಗರ

ರಾಜ್ಯ ನಾಟಕ ಅಕಾಡೆಮಿಯ ಸದಸ್ಯ ಕುಂಬಾಪುರ ಬಾಬು ಮಾತನಾಡಿ, ಸಾಂಸ್ಕೃತಿಕ ಚಟುವಟಿಕೆಗಳನ್ನು ನಡೆಸಲು ಸೂಕ್ತ ಭವನ ನಿರ್ಮಾಣದ ಅಗತ್ಯವಿದೆ ಎಂದರು. ನಗರವನ್ನು ಪ್ಲಾಸ್ಟಿಕ್ ಮುಕ್ತ ನಗರವನ್ನಾಗಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಮತ್ತು ನಗರ ಸೌಂದರ್ಯ ವೃದ್ದಿಸಲು ಸಸಿಗಳನ್ನು ನೆಡುವಂತೆ ಸಲಹೆ ಕೊಟ್ಟರು.



### ವಿದ್ಯುತ್ ಚಿತಾಗರ ಸಮಸ್ಯೆ ನಿವಾರಣೆಗೆ ಮನವಿ

ವಿದ್ಯುತ್ ಗುತ್ತಿಗೆದಾರರ ಸಂಘದ ಜಿಲ್ಲಾಧ್ಯಕ್ಷ ವೆಂಕಟೇಶ್ ಮಾತನಾಡಿ, ವಿದ್ಯುತ್ ಚಿತಾಗಾರ ಸರಿಯಾಗಿ ಕಾರ್ಯನಿರ್ವಹಿಸುತ್ತಿಲ್ಲ. ಈ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಬೇಕು. ಹೆಣ ಸಾಗಿಲು ವಾಹನದ ಅವಶ್ಯಕತೆ ಇದೆ ಎಂದು ಮನವಿ ಮಾಡಿದರು.

ಅರ್ಕಾವತಿ ನದಿ ದಂಡೆಯಲ್ಲಿರುವ ಡಾ.ರಾಜ್ ಕುಮಾರ್ ಸಂಕೀರ್ಣವನ್ನು ದುರಸ್ಥಿ ಮಾಡಿಸಿ, ಮೂಲ ಸೌಕರ್ಯಗಳನ್ನು ಕಲ್ಪಿಸಿದರೆ ಅಂಗಡಿ ಮಳಿಗೆಗಳಿಗೆ ಬಾಡಿಗೆ ಬರುತ್ತದೆ. ನಗರಸಭೆಯ ಆದಾಯಕ್ಕೆ ಸಹಕಾರಿಯಾಗಲಿದೆ ಎಂದು ಸಲಹೆ ಕೊಟ್ಟರು.

### ವಿದ್ಯಾರ್ಥಿ ವೇತನ ಆರಂಭಿಸಲು ಸಲಹೆ

ನಗರಸಭೆವತಿಯಿಂದ ಈಗಾಗಲೆ ಸಿಇಟಿ ಮುಂತಾದ ಪರೀಕ್ಷೆಗಳಿಗೆ ತರಬೇತಿ ಕೊಡುತ್ತಿರುವ ಬಗ್ಗೆ ನೆರೆದಿದ್ದ ನಾಗರೀಕರು ಶ್ಲಾಘಿಸಿದರು. ದಲಿತ ಯುವ ಮುಖಂಡ ವೆಂಕಟೇಶ್ ಮಾತನಾಡಿ, ಈ ಹಿಂದೆ ನಗರಸಭೆವತಿಯಿಂದ ವಿದ್ಯಾರ್ಥಿ ವೇತನ ನೀಡಲಾಗುತ್ತಿತ್ತು. ಈ ವ್ಯವಸ್ಥೆಯನ್ನು ಪುನಾರಂಭಿಸಲು ಸಲಹೆ ಕೊಟ್ಟರು. ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ನಗರಸಭೆವತಿಯಿಂದ ಉಚಿತ ಕಂಪ್ಯೂಟರ್ ತರಬೇತಿ ಕೇಂದ್ರ ಆರಂಭಿಸಲಾಗಿತ್ತು. ಅದನ್ನು ಪುನಃ ಆರಂಭಿಸಬೇಕು. ಅಂತರ್ಜಾತಿ ವಿವಾಹವನ್ನು ಪ್ರೋತ್ಸಾಹಿಸಲು ನಗರಸಭೆವತಿಯಿಂದಲೂ ಆರ್ಥಿಕ ಸಹಾಯ ಘೋಷಿಸುವಂತೆ ಸಲಹೆ ಕೊಟ್ಟರು.ನಿವೃತ್ತ ಸರ್ಕಾರಿ ಅಧಿಕಾರಿ ಲಕ್ಷ್ಮಿಕುಮಾರ್ ಮಾತನಾಡಿ ವಿದೇಶಗಳಿಗೆ ಉನ್ನತ ವ್ಯಾಸಂಗ ಮಾಡಲು ಬಯಸಿದವರಿಗೆ ಸೂಕ್ತವಾಗಿ ಧನ ಸಹಾಯ ಮಾಡಿದರೆ ಪ್ರೋತ್ಸಾಹಿಸಿದಂತಾಗುತ್ತದೆ ಎಂದರು.

### ಘೋಷಣೆಗಳು, ಕಾರ್ಯರೂಪಕ್ಕೆ ಬರಬೇಕು – ಕೆ.ಶೇಷಾದ್ರಿ

**ಎಸ್ಸಿ,ಎಸ್ಟಿ ಸಮುದಾಯದ ನಾಗರೀಕರು ಕೊಟ್ಟ ಸಲಹೆಗಳು, ಮಂಡಿಸಿದ ಬೇಡಿಕೆಗಳನ್ನು ಆಲಿಸಿದ ನಗರಸಭಾಧ್ಯಕ್ಷ ಕೆ.ಶೇಷಾದ್ರಿ ಮಾತನಾಡಿ, ಸಭೆಯಲಿ ವ್ಯಕ್ತವಾದ ಸಲಹೆಗಳು, ಬೇಡಿಕೆಗಳನ್ನು ಸೂಕ್ತವಾಗಿ ಪರಿಶೀಲಿಸಿ ಅಳವಡಿಸಿಕೊಳ್ಳುವ ಭರವಸೆ ಕೊಟ್ಟರು. ಘೋಷಣಗಳು ಕಾರ್ಯರೂಪಕ್ಕೆ ಬರಬೇಕು ಎಂಬುದು ತಮ್ಮ ಕಾಳಜಿ. ದಲಿತರು ಸೇರಿದಂತೆ ದನಿ ಇಲ್ಲದ ಸಮುದಾಯಗಳಿಗೆ ಸ್ಪಂದಿಸುವ ಬದ್ದತೆ ಮತ್ತು ಆಸಕ್ತಿ ಇದೆ ಎಂದು ಭರವಸೆ ಮೂಡಿಸಿದರು. ನಗರಸಭೆಯ ಆಯುಕ್ತ ಡಾ.ಜಯಣ್ಣ ಮಾತನಾಡಿ, ಬಯೋಗ್ಯಾಸ್ ಘಟಕ ಸ್ಥಾಪನೆಗೆ ಪ್ರೋತ್ಸಾಹ ಸೇರಿದಂತೆ ಸ್ವಚ್ಚತೆ ವಿಚಾರದಲ್ಲಿ ಆಯವ್ಯಯದಲ್ಲಿ ಅಚ್ಚರಿ ಕಾದಿದೆ ಎಂದರು.**

### ವಕೀಲರಿಗೆ ಸಹಾಯ ಧನ

ವಕೀಲ ವೃತ್ತಿ ಆರಂಭಿಸುವ ಪರಿಶಿಷ್ಟ ಜಾತಿ, ಪಂಗಡದ ವಕೀಲರಿಗೆ ಕಚೇರಿ ಸ್ಥಾಪಿಸಲು ಹಾಗೂ ಪುಸ್ತಕಗಳನ್ನು ಖರೀದಿಸಲು ಆರ್ಥಿಕ ನೆರವು ನೀಡುವಂತೆ ವಕೀಲ ವಿನಯ್ ಸಲಹೆ ನೀಡಿದರು.

ಸಿದ್ದರಾಮೇಶ್ವರ ಜಯಂತಿಯ ಆಚರಣೆ ಕಾಟಾಚಾರಕ್ಕೆ ನಡೆಯುತ್ತಿದೆ. ನಗರಸಭೆ ಈ ವಿಚಾರದಲ್ಲಿ ಕನಿಷ್ಠ ಐದು ಲಕ್ಷ ರೂಗಳನ್ನು ಮೀಸಲಿಟ್ಟು, ಸಿದ್ದರಾಮೇಶ್ವರರ ಜಯಂತಿ ಆಚರಿಸಬೇಕು. ಭೋವಿ ಸಮುದಾಯದ ಸಾಧಕರನ್ನು ಗುರುತಿಸಿ ಸನ್ಮಾನಿಸಬೇಕು. ರಂಗರಾಯರ ದೊಡ್ಡಿ ಕೆರೆಯಲ್ಲಿ ಏರಿಯ ಮೇಲೆ ತಿಂಗಳಿಗೊಮ್ಮೆ ಸೂಕ್ತ ವೇದಿಕೆ ಕಲ್ಪಿಸಿ ಎಸ್ಸಿಎಸ್ಟಿ ಸಮುದಾಯದ ಕಲಾ ಸೇವಕರು ತಮ್ಮ ಪ್ರತಿಭೆ ಪ್ರದರ್ಶಿಸಲು ಅವಕಶ ಕಲ್ಪಿಸಿಕೊಡಬೇಕು ಎಂದು ಯುವ ಮುಖಂಡ ಕಿರಣ್ ಸಲಹೆ ನೀಡಿದರು. ಮರಗೆಲಸದವರ ಪರಿವಾಗಿ ಮಾತನಾಡಿದ ಗಿರಿರಾಜು, ವೃತ್ತಿಗೆ ಅಗತ್ಯವಾಗಿರುವ ಟೂಲ್ ಕಿಟ್‌ಗಳನ್ನು ನೀಡಬೇಕು ಎಂದು ಮನವಿ ಮಾಡಿದರು. ಬೀದಿ ಬದಿ ವ್ಯಾಪಾರಿಗಳ ಸಂಘದ ಅಧ್ಯಕ್ಷ ಬೈರಲಿಂಗಯ್ಯ, ಕಾರ್ಯದರ್ಶಿ ಮಹದೇವಯ್ಯ, ಗುರುಮಲ್ಲಯ್ಯ, ಕೆಂಗಲ್ಲಯ್ಯ, ಸಿ.ವೆಂಕಟೇಶ್, ಗಂಗಾಧರ್, ವೆಂಕಟೇಸ್ ನಾಗರಕಟ್ಟೆ, ಬೈರಲಿಂಗಯ್ಯ, ಶಿವಶಂಕರ್.ಕೆ, ಕರಿಯಮ್ಮ, ರವಿ ಮಾತನಾಡಿದರು. ಸಭೆಯಲ್ಲಿ ನಗರಸಭಾ ಸದಸ್ಯರು, ಅಧಿಕಾರಿಗಳು ಉಪಸ್ಥಿತರಿದ್ದರು.

### ಪೌರಕಾರ್ಮಿಕರಿಗೂ ಅಧ್ಯಯನ ಪ್ರವಾಸ ಕೈಗೊಳ್ಳಿ– ನಾಗರಾಜ್

**ಪೌರಕಾರ್ಮಿಕರ ಸಂಘದ ರಾಜ್ಯ ಉಪಾಧ್ಯಕ್ಷ ನಾಗರಾಜ್ (ಬೆಂಕಿ) ಮಾತನಾಡಿ, ಸ್ವಚ್ಚ ನಗರಗಳು ಎಂದು ಗುರುತಿಸಿಕೊಂಡಿರುವ ಇಂಧೋರ್ ಮುಂತಾದ ನಗರಗಳಿಗೆ ಸ್ಥಳೀಯ ಪೌರಕಾರ್ಮಿಕರನ್ನು ಅಧ್ಯಯನ ಪ್ರವಾಸಕ್ಕೆ ಕಳುಹಿಸಿಕೊಡಬೇಕು. ಅಂಬೇಡ್ಕರ್ ಅರ್ಥ ಶಾಸ್ತ್ರ ಸಂಶೋಧನಾ ಕೇಂದ್ರಕ್ಕೆ ಇಲ್ಲಿನ ಆಸಕ್ತ ಎಸ್ಸಿ,ಎಸ್ಟಿ ಯುವಕ, ಯುವತಿಯರನ್ನು ಕಳುಹಿಸಿಕೊಟ್ಟು ಅಂಬೇಡ್ಕರ್ ಅವರ ಬಗ್ಗೆ ತಿಳಿದುಕೊಳ್ಳಲು ವ್ಯವಸ್ಥೆ ಕಲ್ಪಿಸಬೇಕು. ಪೌರ ಕಾರ್ಮಿಕರಿಗೆ ಅಪಘಾತ, ಗಂಭೀರ ಶಸ್ತ್ರಚಿಕಿತ್ಸೆಗಳಿಗೆ ಅನುಕೂಲವಾಗುವಂತೆ ಕನಿಷ್ಠ 50 ಸಾವಿರ ರೂ ಧನ ಸಹಾಯ ಕೊಡಬೇಕು ಎಂದು ಸಲಹೆ ಕೊಟ್ಟರು. ಪ್ರತಿಷ್ಠಿತ ಶಾಲೆಗಳಲ್ಲಿ ಪೌರಕಾರ್ಮಿಕರ ಮಕ್ಕಳು ವ್ಯಾಸಂಗ ಮಾಡಲು ಅವಕಾಶವಾಗುವಂತೆ ಶೇ 24.10 ಕಾರ್ಯಕ್ರಮದಡಿ ಶುಲ್ಕ ಭರಿಸಲು ಅವಕಾಶಕ್ಕಾಗಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ಸಲಹೆ ಕೊಟ್ಟರು.**

ಮೊದಲ ಪುಟದಿಂದ

## ಡಿಕೆ ಬ್ರದರ್ಸ್ 'ಪಾಲಿಟಿಕ್ಸ್'

ಬ್ರದರ್ಸ್ ಹೇಳಿದ್ದಾರೆಂದು ಮೂಲಗಳು ತಿಳಿಸಿವೆ. ಸಿದ್ದರಾಮಯ್ಯ ಅವರನ್ನು ಕರೆಸಿ ಮಾತಾಡಿ, ಅಧಿಕಾರ ಹಸ್ತಾಂತರದ ಬಗ್ಗೆ ಸ್ಪಷ್ಟವಾಗಿ ಹೇಳಬೇಕು, ಆಗುತ್ತೋ ಆಗಲ್ವೋ ಅದಾದರೂ ಕ್ಲಿಯರ್ ಮಾಡಿ ಎಂದು ಕೆ.ಸಿ.ವೇಣುಗೋಪಾಲ್ ಅವರನ್ನು ಡಿಕೆ ಬ್ರದರ್ಸ್ ಒತ್ತಾಯ ಮಾಡಿದ್ದಾರೆ. ಸಿದ್ದರಾಮಯ್ಯ ಒಪ್ಪಂದದಂತೆ ನಡೆದುಕೊಳ್ಳಬೇಕು ಎಂದು ಡಿಕೆಶಿ ಮತ್ತು ಡಿ.ಕೆ ಸುರೇಶ್ ಆಗ್ರಹಿಸಿದ್ದಾರೆ ಎನ್ನಲಾಗಿದೆ. ಪಕ್ಷದ ಹಿತಾಸಕ್ತಿಗಳ ವಿರುದ್ಧ ಸಾರ್ವಜನಿಕ ಹೇಳಿಕೆಗಳನ್ನು ನೀಡಿರುವ ಸಿದ್ದರಾಮಯ್ಯ ಅವರ ಮಗ ಯತೀಂದ್ರ ಅವರನ್ನು ತಡೆಯುವಲ್ಲಿ ಹೈಕಮಾಂಡ್ ವಿಫಲವಾಗಿರುವುದಕ್ಕೆ ಡಿ.ಕೆ.ಶಿವಕುಮಾರ್ ಅವರು ಆಕ್ಷೇಪ ವ್ಯಕ್ತಪಡಿಸಿದರು ಎಂದು ತಿಳಿದುಬಂದಿದೆ.

## ಆಸ್ಪತ್ರೆಗಳಲ್ಲಿ ಔಷಧಿ ಖಾಲಿ

ಸಿಗುವು ದಿಲ್ಲ. ಕೆಲವು ಆಸ್ಪತ್ರೆಗಳಲ್ಲಿ ವೈದ್ಯರು ಹೊರಗೆ ಔಷಧಿ ಖರೀದಿಗೆ ಚೀಟಿ ಬರೆದುಕೊಡುತ್ತಿದ್ದಾರೆ. ಕೇಂದ್ರ ಸರ್ಕಾರದ ಜನೌಷಧಿ ಕೇಂದ್ರಗಳನ್ನು ಸ್ಥಗಿತಗೊಳಿಸಲು ಸರ್ಕಾರ ಪ್ರಯತ್ನ ಮಾಡಿತ್ತು. ಈಗ ಜನರು ಜನೌಷಧಿ ಕೇಂದ್ರಗಳಲ್ಲೇ ಔಷಧಿ ಖರೀದಿಸುತ್ತಿದ್ದಾರೆ ಎಂದು ಕಿಡಿಕಾರಿದರು.

ಮೈಸೂರು ಜಿಲ್ಲಾ ಆರ್.ಡಿ.ಪಿ.ಆರ್ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಕಾರ್ಯಕ್ರಮ”

# ಒತ್ತಡ ನಿವಾರಣೆಗೆ ಕ್ರೀಡೆ ಸಹಕಾರಿ: ಯುಕೇಶ್ ಕುಮಾರ್

ಮೈಸೂರು: ಜನರಿಗೆ ತುಂಬಾ ಹತ್ತಿರದಲ್ಲಿದ್ದುಕೊಂಡು ಕೆಲಸ ಮಾಡುವ ಇಲಾಖೆ ನಮ್ಮದು. ಆದ್ದರಿಂದ ಜನರಿಗೂ ನಮ್ಮ ಮೇಲಿನ ನಿರೀಕ್ಷೆ ಹೆಚ್ಚಿರುತ್ತದೆ. ಅದರಂತೆ ಒತ್ತಡವೂ ಇರುತ್ತದೆ. ಅದರ ನಿವಾರಣೆಗಾಗಿ ಆಯೋಜಿಸಿರುವ ಕ್ರೀಡಾಕೂಟದಲ್ಲಿ ಪ್ರತಿಯೊಬ್ಬರೂ ಭಾಗವಹಿಸಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಕ ಅಧಿಕಾರಿ ಎಸ್.ಯುಕೇಶ್ ಕುಮಾರ್ ತಿಳಿಸಿದರು.

ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾಇಲಾಖೆ, ಜಿಲ್ಲಾ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧಿಕಾರಿಗಳು ಹಾಗೂ ನೌಕರರ ಸಹಯೋಗದಲ್ಲಿ ಗುರುವಾರ ಚಾಮುಂಡಿ ವಿಹಾರ ಕ್ರೀಡಾಂಗಣದಲ್ಲಿ ಆಯೋಜಿಸಿದ್ದ "ಮೈಸೂರು ಜಿಲ್ಲಾ ಆರ್.ಡಿ.ಪಿ.ಆರ್ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಕಾರ್ಯಕ್ರಮವನ್ನು" ಉದ್ಘಾಟಿಸಿದ ಬಳಿಕ ಮಾತನಾಡಿದರು. ಆರ್‌ಡಿಪಿಆರ್ ಕುಟುಂಬ ಬಹಳ ದೊಡ್ಡದಿದೆ. ಸರ್ಕಾರದ ಕಾರ್ಯಕ್ರಮಗಳನ್ನು ಜನರಿಗೆ ತಲುಪಿಸುವುದು ನಮ್ಮ ಕರ್ತವ್ಯ ಮತ್ತು ಜವಾಬ್ದಾರಿ. ಪ್ರತಿನಿತ್ಯದ ಕಾರ್ಯದೊತ್ತಡ ಮರೆತು ಕ್ರೀಡೆಯಲ್ಲಿ ಪಾಲ್ಗೊಳ್ಳಿ. ಎಲ್ಲಾ ನೌಕರರು ತಮ್ಮ ಆರೋಗ್ಯ ಮತ್ತು ಕೌಟಂಬಿಕ ಜೀವನದ ಕಡೆಗೆ ಹೆಚ್ಚಿನ ಕಾಳಜಿವಹಿಸಿ ಎಂದು ಸಲಹೆ ನೀಡಿದರು.



ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ನಗರ ಪಾಲಿಕೆ ಆಯುಕ್ತ ಶೇಖ್ ತನ್ವೀರ್ ಆಸೀಫ್, ಸಹಬಾಳ್ವೆ ಮತ್ತು ಸೌಹಾರ್ದಯುತ ಬದುಕಿಗೆ ಕ್ರೀಡೆ ಉಪಯುಕ್ತ. ನಾವು ಮಾಡುವ ಕೆಲಸಕ್ಕೆ ಕ್ರೀಡೆಯು ಹೆಚ್ಚಿನ ಉತ್ಸಾಹ ಮತ್ತು ಸ್ಫೂರ್ತಿ ತಂದುಕೊಡುತ್ತದೆ ಎಂದು ಹೇಳಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ಮಾತನಾಡಿ, ಪ್ರತಿಯೊಬ್ಬರೂ ಉತ್ಸಾಹದಿಂದ ಕ್ರೀಡೆಯಲ್ಲಿ ಭಾಗವಹಿಸಬೇಕು. ಗ್ರಾಮ ಪಂಚಾಯಿತಿಯ ಎಲ್ಲಾ ವಯೋಮಾನದವರು ಪಾಲ್ಗೊಂಡಿರುವುದು ಸಂತೋಷದ ಸಂಗತಿ. ಅವರ ವಯಸ್ಸು ಹಾಗೂ ಫಿಟ್ನೆಸ್‌ಗೆ ತಕ್ಕಂತೆ ಕ್ರೀಡೆಯಲ್ಲಿ ತೊಡಗಿಸಿಕೊಳ್ಳಿ. ಕ್ರೀಡಾ ಚಟುವಟಿಕೆಯಲ್ಲಿ ಭಾಗವಹಿಸದವರು ಕೂಡ ಕ್ರೀಡಾಂಗಣದಲ್ಲಿದ್ದು ಕ್ರೀಡಾಪಟುಗಳಿಗೆ ಉತ್ಸಾಹ ತುಂಬಬೇಕು ಎಂದು ಹೇಳಿದರು.


ಪ್ರಾಸ್ತಾವಿಕವಾಗಿ ಮಾತನಾಡಿದ ಪಿಡಿಒ ಸಂಘದ ಜಿಲ್ಲಾಧ್ಯಕ್ಷ ಕೆ.ರುಕ್ಮಾಂಗದ, ಪ್ರತಿಯೊಬ್ಬ ವ್ಯಕ್ತಿಗೂ ದೈಹಿಕ ಶಕ್ತಿಯ ಜೊತೆಗೆ ಮಾನಸಿಕ ಶಕ್ತಿ ಮುಖ್ಯ. ಅದಕ್ಕೆ ಕ್ರೀಡೆ ಮತ್ತು ಮನರಂಜನೆ ಸಹಕಾರಿ. ಈ ಉದ್ದೇಶದಿಂದ ನಮ್ಮ ಸಿಇಒ ಅವರ ನೇತೃತ್ವದಲ್ಲಿ ಬಹಳ ಅಚ್ಚುಕಟ್ಟಾಗಿ ಕ್ರೀಡಾಕೂಟ ಆಯೋಜಿಸಲಾಗಿದೆ. ಇದರ ಜೊತೆಗೆ ಗ್ರಾಮ ಪಂಚಾಯಿತಿಯಲ್ಲಿ ನಾವೆಲ್ಲರೂ ಹೆಚ್ಚಿನ ಕಾರ್ಯಕ್ಷಮತೆಯಿಂದ ಕೆಲಸ ನಿರ್ವಹಿಸೋಣ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಉಪಕಾರ್ಯದರ್ಶಿಗಳಾದ ಬಿ.ಎಂ.ಸವಿತಾ, ಭೀಮಪ್ಪ ಕೆ.ಲಾಳಿ, ಮುಖ್ಯಲೆಕ್ಕಾಧಿಕಾರಿ ಸಿದ್ದಗಂಗಮ್ಮ, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಕುಮಾರಸ್ವಾಮಿ, ಕಾರ್ಯನಿರ್ವಾಹಕ ಅಧಿಕಾರಿಗಳಾದ ಧರಣೀಶ್, ಪ್ರೇಮ್ ಕುಮಾರ್, ಕುಲದೀಪ್, ರವಿ, ಹೊಂಗಯ್ಯ, ಸಿ.ಕೃಷ್ಣ, ಸುನೀಲ್ ಕುಮಾರ್, ರಂಗಸ್ವಾಮಿ, ಜೆರಾಲ್ಡ್ ರಾಜೇಶ್, ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಭಾಸ್ಕರ್ ನಾಯ್ಕ್, ಕಾರ್ಯಪಾಲಕ ಅಭಿಯಂತರರಾದ ಶೋಭಾ, ರಂಗಸ್ವಾಮಿ ಸೇರಿ ಇತರರು ಹಾಜರಿದ್ದರು.

# ಎಸ್‌ಎಸ್‌ಎಲ್‌ಸಿ ಮಕ್ಕಳಿಗೆ ಭರವಸೆಯ ಬೆಳಕು ಕಾರ್ಯಕ್ರಮ

ಹನೂರು:– 2025–26 ನೇ ಸಾಲಿನಲ್ಲಿ ಓದುತ್ತಿರುವ ಎಸ್ ಎಸ್ ಎಲ್ ಸಿ ಮಕ್ಕಳಿಗೆ ಭರವಸೆಯ ಬೆಳಕು ಕಾರ್ಯಕ್ರಮವನ್ನು ತಾಲೂಕಿನ ಹುಗ್ಯಮ್ ಗ್ರಾಮದ ಲ್ಲಿರುವ ಮೊರಾರ್ಜಿ ದೇಶಾಯಿ ಶಾಲೆಯಲ್ಲಿ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮವನ್ನು ಕರ್ನಾಟಕ ರಾಜ್ಯ ಪ್ರೌಢ ಶಾಲಾ ಸಹ ಶಿಕ್ಷಕರ ಸಂಘ ಹಾಗೂ ಪ್ರೌಢಶಾಲಾ ಮುಖ್ಯ ಶಿಕ್ಷಕರ ಸಂಘ ಹನೂರು ತಾಲೂಕು ವತಿಯಿಂದ ಆಯೋಜನೆ ಮಾಡಲಾಗಿತ್ತು.

ಕಾರ್ಯಕ್ರಮವನ್ನು ಉದ್ಘಾಟನೆ ಮಾಡಿ ಮಾತನಾಡಿದ ಶಾಸಕ ಎಂ ಆರ್ ಮಂಜುನಾಥ್ ರವರು. ಎಸ್ ಎಸ್ ಎಲ್ ಸಿ ಮತ್ತು ಪಿಯುಸಿ ತಮ್ಮ ಜೀವನದಲ್ಲಿ ಪ್ರಮುಖವಾದ ಘಟ್ಟ ಇದುವರೆಗೆ ತಾವೆಲ್ಲ ಓದಿ ಕಲಿತಿರುವ ವಿಷಯಗಳನ್ನು ಮಂಡಿ ಸುವ ಸಮಯ ಬಂದಿದೆ ಹತ್ತನೇ ತರಗತಿ ಬರೆ ಯಲು ಸಜ್ಜಾಗಿರುವ ನಮ್ಮ ಕ್ಷೇತ್ರದ 2288 ಮಕ್ಕಳು ಕೂಡ ಉತ್ತಮ ದರ್ಜೆಯಲ್ಲಿ ಉತ್ತೀರ್ಣರಾಗಬೇಕು ರಾಜ್ಯ ಮಟ್ಟದಲ್ಲಿ ಹೆಸರು ಮಾಡಬೇಕು ಅಂತಹ ಪ್ರಯತ್ನ ಮಾಡಿ ನಿಮ್ಮ ಬದುಕನ್ನು ರೂಪಿಸಿಕೊಳ್ಳುವ ಪ್ರಮುಖವಾದ ಘಟ್ಟ ಎಸ್ ಎಸ್ ಎಲ್ ಸಿ ಆಗಾಗಿ ಒಂದು ಗುರಿಯನ್ನು ಇಟ್ಟುಕೊಂಡು ಪರೀಕ್ಷೆಯನ್ನು




ಎದುರಿಸಿ ಆಗ ನೀವೂ ನಿಮ್ಮ ಗುರಿಯನ್ನು ತಲುಪಬಹುದು.

ನಿಮ್ಮ ತಂದೆ ತಾಯಂದಿರು ನಿಮಗಾಗಿ ಕಷ್ಟ ಪಟ್ಟು ವಿದ್ಯಾಭ್ಯಾಸ ಕೊಡಿಸುತ್ತಿದ್ದಾರೆ ನಮ್ಮ ಮಕ್ಕಳು ಒಳ್ಳೆಯ ವಿದ್ಯಾರ್ಥಿಯಾಗಿ ಬರ್ಬೇಕು ಎಂಬ ಕನಸನ್ನು ಇಟ್ಟುಕೊಂಡಿರುತ್ತಾರೆ ಅವರ ಕನಸನ್ನು ನೀವೂ ನನಸು ಮಾಡಿ ನಿಮ್ಮ ಪೋಷಕರ ಆಸೆಯಂತೆ ಚೆನ್ನಾಗಿ ಪರೀಕ್ಷೆ ಬರೆದು ಉತ್ತಮವಾದ ಅಂಕವನ್ನು ಪಡೆಯಿರಿ.ಕೆಲವೇ ದಿನಗಳು ಮಾತ್ರ ಉಳಿದಿವೆ ಹೆಚ್ಚು ಸಮಯ ಕೊಟ್ಟು ಓದಿ ನಿಮ್ಮೆಲ್ಲರಿಗೂ ಒಳ್ಳೆಯ ದಾಗಲಿ ಎಂದು ಮಕ್ಕಳಿಗೆ ಶುಭ ಹಾರೈಸಿದರು.

ನಮ್ಮ ಕ್ಷೇತ್ರದ ಶಾಸಕರಾದ ಎಂ ಆರ್ ಮಂಜುನಾಥ್ ರವರು ಜನರ ಹೃದಯಕ್ಕೆ ಹತ್ತಿರ ಆಗುವವರು ರಾಜ್ಯದಲ್ಲೇ ಒಂದು ವಿಶೇಷ ಕಾರ್ಯ ಕ್ರಮವನ್ನು ನಮ್ಮ ಹನೂರು ತಾಲೂಕಿನಲ್ಲೇ ಮೊದಲು ಮಾಡುತ್ತಿದ್ದಾರೆ. ನಮ್ಮ ಹನೂರಿನ ತಾಲೂ ಕಿನ ಮಕ್ಕಳು ರಾಜ್ಯದಲ್ಲಿಯೇ ಉತ್ತಮ ಫಲಿತಾಂಶವನ್ನು ತೆಗೆಯಬೇಕು ಎಂದು ಪಟ್ಟು ಹಿಡಿದು ಎಸ್ ಎಸ್ ಎಲ್ ಸಿ ಮಕ್ಕಳಿಗೆ ಭರವಸೆ ತುಂಬುವ ಕಾರ್ಯಕ್ರಮ ಮಾಡುತ್ತಿದ್ದಾರೆ. ನಿಮ್ಮ ಭವಿಷ್ಯಕ್ಕಾಗಿ ಇದೊಂದು ಒಳ್ಳೆಯ ಕಾರ್ಯಕ್ರಮ ವಾಗಿದೆ.

ಈ ವರ್ಷ 10 ನೇ ತರಗತಿ ಪರೀಕ್ಷೆ ಬರೆಯಿತ್ತಿರುವ ಮಕ್ಕಳೇ 5 ವರ್ಷ ನಿದ್ದೆ ಗೆಟ್ಟು ಓದಿ 50 ವರ್ಷ ಸುಖವಾದ ನಿದ್ದೆ ಮಾಡಬಹುದು ಇಲ್ಲ ಈ ಐದು ವರ್ಷ ನೀವೂ ಓದದೇ ನಿದ್ದೆ ಮಾಡುತ್ತ ಮಲಗಿದರೆ ಮುಂದಿನ 50 ವರ್ಷ ನಿಮ್ಮ ಜೀವನದಲ್ಲಿ ಕಷ್ಟ ಪಡಬೇಕಾಗುತ್ತದೆ. ಮಕ್ಕಳೇ ಆಗಾಗಿ ಈ ಸಮಯ ನಿಮಗೆ ತುಂಬಾ ಮುಖ್ಯವಾದದ್ದು ಚೆನ್ನಾಗಿ ಓದಲೇಬೇಕು ನೀವೂ ಎಂದು ಮಕ್ಕಳಿಗೆ ಶಿಕ್ಷಣದ ಅರಿವು ಮೂಡಿಸುತ್ತ ಸುದೀರ್ಘವಾಗಿ ಮಾತನಾಡಿದರು.

ಸಾಹಿತಿ ಹಾಗೂ ಲೇಖಕ ಹನೂರು ಚೆನ್ನಪ್ಪ ಕ್ರೀಡೆಯಲ್ಲಿ ಅಂಗವಿಕಲ ಇಬ್ಬರೂ ಮಕ್ಕಳು ರಾಜ್ಯ ಮಟ್ಟದಲ್ಲಿ ಭಾಗವಹಿಸಿ ರಾಷ್ಟ್ರ ಮಟ್ಟಕ್ಕೆ ಆಯ್ಕೆಯಾಗಿರುವ ಇಬ್ಬರೂ ಮಕ್ಕಳಿಗೆ ಬಹುಮಾನ ವಿತರಣೆ ಮಾಡಿ ಸನ್ಮಾನ ಮಾಡಿ ಶಾಸಕರು ಗೌರವಿಸಿದರು. ಕಳೆದ ವರ್ಷ ಹತ್ತನೇ ತರಗತಿಯಲ್ಲಿ ಅತೀ ಹೆಚ್ಚು ಅಂಕ ಪಡೆದ ಮಕ್ಕಳಿಗೆ ಸನ್ಮಾನಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಬಿಇಓ ಮಹೇಶ್, ಇಸಿಓ ಅಶೋಕ್,ನಲಿ ಕಲಿ ಕೃಷ್ಣ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷರು ಕೃಷ್ಣ ಗೌಡ, ಗುರುಮಲ್ಲಪ್ಪ, ಮುಖ್ಯ ಶಿಕ್ಷಕರು ಶಿವಮಲ್ಲು, ಕೆಂಪರಾಜು, ಮೊರಾರ್ಜಿ ಶಾಲೆಯ ಪ್ರಾಂಶುಪಾಲರಾದ ಲೋಕೇಶ್ ಹಾಗೂ ಶಿಕ್ಷಕರುಗಳು ಮಕ್ಕಳು ಇನ್ನಿತರರಿದ್ದರು.



## ಕೃಷ್ಣ ವಂದನ

ಸ್ನೇಹಾ ಆನಂದ್



### ಹೇ ಕೃಷ್ಣಾ !

ಏನೂ ಬೇಡೆನು ನಾ ನಿನ್ನ ಬಳಿಯಲಿ ಹರಿಯೇ
ಇಟ್ಟು ಬಿಡು ನನ್ನ ಹರಿಭಕ್ತಿಯಲಿ ಸರಿಯೇ!
ಧ್ಯಾನವೆಂಬ ಮಡಿಕೆ ಕೊಡು ಎನಗೆ ಗೋವಿಂದ
ಸುಜ್ಞಾನವನು ಕೊಟ್ಟು ಕಾಪಾಡು ಮುಕ್ಕುಂದ!

ತನುವಿನೊಳ್ ನಿಂತು, ನರನಾಡಿಯೊಳು
ಬೆರೆತು!
ಉಸಿರಿನೊಳ್ ಹಸಿರಾಗಿ, ಕರುಣೆಯ
ತೊರೆಯಾಗಿ,
ನಿನ್ನ ಸೆರೆಯಾಗಿ, ನಿನ್ನ ಮಡಿಲ ಮಗುವಾಗಿ
ನೀನಿಟ್ಟ ಹಾಗಿರುವೆ ಎನ್ನ ದೊರೆಯೇ!

ಕರುವಿನಂತೆಯೇ ಕರೆಯೆ, ಮಮತೆಯನು ನೀ
ಎರೆಯೇ!
ಮನವೆಂಬ ಗುಡಿಯೊಳಗೆ ನೀನಿದ್ದು ಪೊರೆಯೆ!
ಗರುಡನ ಮೇಲೇರಿ ತ್ವರಿತದಲಿ ನೀ ಬಂದೆ
ಅಪ್ಪ ಹೇಮಗಿರೀಶನೆಂಬ ಬಿರುದಿನ ದೊರೆಯೇ!

# ಫೆ.14ರ ಹನುಮಾನ್ ಚಾಲೀಸ್ ಯಶಸ್ವಿಗೆ ಕರೆ

ಮೈಸೂರು: ಹನುಮಾನ್ ಚಾಲೀಸಾ ಪಾರಾಯಣ ಸರ್ವ ಸಂಕಷ್ಟ ಪರಿಹಾರ ಮಾಡುತ್ತದೆ. ಹೀಗಾಗಿ ಫೆ. 14 ರಂದು ಲೋಕ ಕಲ್ಯಾಣಾರ್ಥವಾಗಿ ಗಣಪತಿ ಸಚ್ಚಿದಾನಂದ ಶ್ರೀಗಳು ನಗರದ ಮಹಾರಾಜ ಕಾಲೇಜು ಮೈದಾನದಲ್ಲಿ ಆಯೋಜಿಸಿರುವ ಹನುಮಾನ್ ಚಾಲೀಸಾ ಪರಾಯಣ ಮಹಾ ಯಜ್ಞದಲ್ಲಿ ನಗರದ ಜನತೆ ಶ್ರದ್ಧಾ ಭಕ್ತಿಯಿಂದ ಪಾಲ್ಗೊಳ್ಳುವ ಮೂಲಕ ಯಶಸ್ವಿಗೊಳಿಸಬೇಕೆಂದು ಡಿಟಿಎಸ್ ಪ್ರತಿಷ್ಠಾನದ ಅಧ್ಯಕ್ಷ ಡಿ.ಟಿ. ಪ್ರಕಾಶ್ ಮನವಿ ಮಾಡಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಶ್ರೀಗಳು ಸುಮಾರು 10 ವರ್ಷ ಹಿಂದೆಯೂ ಹನುಮಾನ್ ಚಾಲೀಸಾ ಪಾರಾಯಣ ನಗರದಲ್ಲಿ ಆಯೋಜಿಸಿದ್ದರು. ಅದರಲ್ಲಿ ಪಾಲ್ಗೊಂಡವರಿಗೆ ಸುಕೃತಗಳು ಲಭಿಸಿವೆ. ಹೀಗಾಗಿ ಲೋಕ ಶಾಂತಿ, ಸುಭಿಕ್ಷೆಯಿಂದ ಇರಲೆಂದು ಈ ಬಾರಿಯೂ ಆಯೋಜಿಸಿದ್ದು, ಬೆಳಿಗ್ಗೆ 9 ರಿಂದ ಮಧ್ಯಾಹ್ನ 12.30 ರವರೆಗೆ ನಡೆಯಲಿದೆ. ಹನುಮಂತ ತನ್ನ ಶ್ರದ್ಧಾ ಭಕ್ತಿಯಿಂದ ಶ್ರೀರಾಮನನ್ನು ಸೇವಿಸಿ ಬೃಹತ್ ಶಕ್ತಿ ಹಾಗೂ ಶಕ್ತಿಯುತ ಪುಣ್ಯಫಲ ಪಡೆದಿದ್ದಾನೆ. ಹೀಗಾಗಿ ಇದರ ಪಾರಾಯಣ ಸಕಲರಿಗೂ ಒಳಿತುಂಟು ಮಾಡುತ್ತದೆ ಎಂದು ಮಾಹಿತಿ ನೀಡಿದರು. ಮಾಜಿ ಮೇಯರ್ ಶಿವಕುಮಾರ್, ತಾಲೂಕು ಬ್ರಾಹ್ಮಣರ ಸಂಘದ ಅಧ್ಯಕ್ಷ ಎಸ್.ಆರ್. ಗೋಪಾಲ್‌ರಾವ್, ಭೈರತಿ ಲಿಂಗರಾಜು, ಸಂಜಯ್ ಬಾಬು, ಪುರಸಭೆ ಮಾಜಿ ಸದಸ್ಯ ಬಿ.ವಿ.ಮಂಜುನಾಥ್ ಹಾಜರಿದ್ದ



ವರ್ತಮಾನ
ಜಾಹಿರಾತಿಗೆ ಉತ್ತಮ ಮಾಧ್ಯಮ

# ಭಿತ್ತಿಪತ್ರಕ್ಕೆ ಬೆಂಕಿಹಚ್ಚಿ ಅಕ್ರೋಶ

## ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಸಿಐಟಿಯು ಪ್ರತಿಭಟನೆ

ಚಾಮರಾಜನಗರ, ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಅಂಗನವಾಡಿ ನೌಕರರ ಅಖಿಲ ಭಾರತ ಸಾರ್ವತ್ರಿಕ ಮುಷ್ಕರ ಬೆಂಬಲಿಸಿ ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘದ ಜಿಲ್ಲಾ ಘಟಕ ವತಿಯಿಂದ ನಗರದಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಯಿತು.

ನಗರದ ಚಾಮರಾಜೇಶ್ವರ ದೇವಸ್ಥಾನದ ಮುಂಭಾಗದಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎ.ನಾಗಮಣಿ, ಮುಖಂಡ ರಾಮಕೃಷ್ಣ ಅವರ ನೇತೃತ್ವದಲ್ಲಿ ಸಮಾವೇಶಗೊಂಡ ಪ್ರತಿಭಟನಾನಿರತರು ಅಲ್ಲಿಂದ ಮೆರವಣಿಗೆ ಹೊರಟು ಅಗ್ರಹಾರ ಬೀದಿಯ ಮೂಲಕ ಭುವನೇಶ್ವರಿ ವೃತ್ತಕ್ಕೆ ತೆರಳಿ ಮಾನವ ಸರಪಳಿ ನಿರ್ಮಿಸಿ ಕೆಲಕಾಲ ರಸ್ತೆ ತಡೆ ನಡೆಸಿ, ಕೇಂದ್ರ ಸರ್ಕಾರದ ವಿರುದ್ಧ ಘೋಷಣೆ ಕೂಗಿ,ಜನವಿರೋಧಿ ಕೇಂದ್ರ ಬಜೆಟ್ ಗೆ ಧಿಕ್ಕಾರ ಎಂದು ಬರೆದಿದ್ದ ಭಿತ್ತಿಪತ್ರಕ್ಕೆ ಬೆಂಕಿಹಚ್ಚಿ ಅಕ್ರೋಶ ವ್ಯಕ್ತಪಡಿಸಿದರು. ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎ.ನಾಗಮಣಿ ಮಾತನಾಡಿ, ಶಿಕ್ಷಣ ಇಲಾಖೆ ಎಲ್ ಕೆಜಿ, ಯುಕೆಜಿ ನಡೆಸುವುದನ್ನು ನಿಲ್ಲಿಸಿ, ಅಂಗನವಾಡಿ ಕೇಂದ್ರಗಳಲ್ಲಿಯೇ ನಡೆಸಬೇಕು. ಮತ್ತು ಅಗತ್ಯವಿರುವ ಬಜೆಟ್ ಕೊಡಬೇಕು.

ಅಂಗನವಾಡಿ ನೌಕರರಿಗೆ ದ್ರೋಹ ಬಗೆದ 4 ಕಾರ್ಮಿಕ ಸಂಹಿತೆಗಳು ರದ್ದುಪಡಿಸಬೇಕು ಶಾಸನ ಬದ್ಧ ಸವಲತ್ತುಗಳನ್ನು ನೀಡದ "ಶ್ರಮಶಕ್ತಿ ನೀತಿ" 2025 ಬೇಡವೇ ಬೇಡ,. ಅಂಗನವಾಡಿ ನೌಕರರಿಗೂ ಮುಟ್ಟಿನ ರಜೆ ನೀಡಬೇಕು.456 ಲಕ್ಷ ಸ್ಕಿಮ್ ಕಾರ್ಮಿಕರ ಸೇವಾ ಷರತ್ತುಗಳ ಸುಧಾರಣೆಗೆ ಪ್ರತ್ಯೇಕ ವೇತನ ಆಯೋಗ ರಚಿಸಬೇಕು ಎಂದು ಒತ್ತಾಯಿಸಿದರು. ಐಸಿಡಿಎಸ್ ಯೋಜನೆಯನ್ನು ಖಾಯಂ ಮಾಡಬೇಕು, ಖಾಯಂ ಮಾಡುವ ತನಕ ಪ್ರತ್ಯೇಕ ನಿರ್ದೇಶಾನಾಲಯವನ್ನು ರಚಿಸಬೇಕು.

2018 ಫಲಾನುಭವಿಗಳ ಘಟಕ ವೆಚ್ಚ ಹೆಚ್ಚಳ ಮಾಡಿಲ್ಲ, ಕೂಡಲೇ ಘಟಕ ವೆಚ್ಚ ಹೆಚ್ಚಳ ಮಾಡಬೇಕು ಮತ್ತು ಸ್ಥಳೀಯ ಆಹಾರ–ಪದಾರ್ಥಗಳನ್ನು




### ಕೇಂದ್ರ ಸರ್ಕಾರ ವೇತನ ಹೆಚ್ಚಳ ಮಾಡಲಿಲ್ಲ

**2018 ರಿಂದ ಅಂಗನವಾಡಿ ನೌಕರರಿಗೆ ಕೇಂದ್ರ ಸರ್ಕಾರ ವೇತನ ಹೆಚ್ಚಳ ಮಾಡಲಿಲ್ಲ, ಇಂದಿಗೂ ಅಂಗನವಾಡಿ ಕಾರ್ಯಕರ್ತೆಗೆ 2700 ರೂ., ಸಹಾಯಕಿಗೆ 1350 ರೂಗಳನ್ನು ಮಾತ್ರವೇ ನೀಡುತ್ತಿದೆ. ಆದ್ದರಿಂದ ಕೇಂದ್ರ ಸರ್ಕಾರ ಕೂಡಲೇ ಕನಿಷ್ಠ ವೇತನವನ್ನಾದರೂ ಜಾರಿ ಮಾಡಬೇಕು FRS ನ್ನು ರದ್ದು ಮಾಡಬೇಕು ಎಲ್ಲಾ ಅಂಗನವಾಡಿ ಕೇಂದ್ರಗಳಲ್ಲಿ ವೈಫೈ ವ್ಯವಸ್ಥೆ ನೀಡಬೇಕು. ಅಂಗನವಾಡಿ ನೌಕರರನ್ನು ಚುನಾವಣಾ ಕೆಲಸಗಳಿಂದ ಬಿಡುಗಡೆಗೊಳಿಸಬೇಕು ಎಂದು ಆಗ್ರಹಿಸಿದರು.**

**ಚುನಾವಣಾಧಿಕಾರಿಗಳು ಅಂಗನವಾಡಿ ಕಾರ್ಯಕರ್ತರ ಮೇಲೆ ಶಿಸ್ತುಕ್ರಮ ಜರುಗಿಸಬಾರದು. ಖಾಸಗಿ ಅಂಗನವಾಡಿ ವಿಚಾರಗಳಲ್ಲಿ ನೌಕರರ ಬಂದನವಾದಗ ವಿಚಾರಣೆ ನಡೆಸದೆ ಏಕಮುಖವಾಗಿ ಕೆಲಸದಿಂದ ವಜಾ ಮಾಡುವುದನ್ನು ನಿಲ್ಲಿಸಬೇಕು. ಅಂಗನವಾಡಿ ನೌಕರರನ್ನು 3 ಮತ್ತು 4ನೇ ದರ್ಜೆಯ ನೌಕರರನ್ನಾಗಿ ಪರಿಗಣಿಸಬೇಕು. ಅಂಗನವಾಡಿ ನೌಕರರನ್ನು ಖಾಯಂ ಮಾಡುವ ತನಕ 26 ಸಾವಿರ ಕನಿಷ್ಠ ವೇತನ ಹೆಚ್ಚಿಸಬೇಕು. ಎಂದು ಆಗ್ರಹಿಸಿದರು.**

ನೀಡಬೇಕು. ಪ್ರತಿಭಟನೆಯಲ್ಲಿ ಗುಂಡ್ಲುಪೇಟೆ ತಾಲೂಕು ಅಧ್ಯಕ್ಷೆ ಗುರುಮಲ್ಲಮ್ಮ, ಕಾರ್ಯದರ್ಶಿ ದೇವಮಣಿ, ಚಾಮರಾಜನಗರ ತಾಲೂಕು ಕಾರ್ಯದರ್ಶಿಶಾಹಿದಾಬಾನು, ಖಜಾಂಚಿ ಗುರುಲಿಂಗಮ್ಮ, ಸಂತೇಮರಹಳ್ಳಿ ಅಧ್ಯಕ್ಷ ಪಾರ್ವತಮ್ಮ, ಕಾರ್ಯದರ್ಶಿ ತೊಳಸಮ್ಮ ಕೊಳ್ಳೇಗಾಲ ತಾಲೂಕು ಅಧ್ಯಕ್ಷೆ ಶಾಂತಮ್ಮ ಯಳಂದೂರು ತಾಲೂಕು ಅಧ್ಯಕ್ಷೆ ಮೀನಾಕ್ಷಿ, ಬಿಸಿಯೂಟ ಜಿಲ್ಲಾಧ್ಯಕ್ಷೆ, ಶಿವಮ್ಮ ಭಾಗವಹಿಸಿದ್ದರು.

# ಕೆ.ಆರ್.ಪೇಟೆಯಲ್ಲಿ ವಿಶೇಷ ಚೇತನರ ನೂತನ ಸಂಘಟನೆ ಉದ್ಘಾಟನೆ



ಕೆ.ಆರ್.ಪೇಟೆ, ವಿಶೇಷ ಚೇತನರು ಸಾಮಾನ್ಯ ಜನರಂತೆಯೇ ಸಾಧನೆ ಮಾಡಲು ಸಾಮರ್ಥ್ಯ ಹೊಂದಿದ್ದಾರೆ. ಸಾಮಾನ್ಯ ಮನುಷ್ಯರಲ್ಲಿಯೂ ಒಂದಲ್ಲ ಒಂದು ನ್ಯೂನತೆಗಳು ಇದ್ದೇ ಇರುತ್ತವೆ ಹಾಗಾಗಿ ವಿಶೇಷ ಚೇತನರು ತಮ್ಮಲ್ಲಿನ ಕೀಳರಿಮೆಯನ್ನು ದೂರ ಮಾಡಿ, ತಮಗೆ ಸಿಗುವ ಅವಕಾಶಗಳನ್ನು ಸದ್ಬಳಕೆ ಮಾಡಿಕೊಂಡು ಸಾಧನೆ ಮಾಡಬೇಕು. ಸರ್ಕಾರದಿಂದ ಸಿಗುವ ಸೌಲಭ್ಯಗಳನ್ನು ನಮ್ಮ ತಾಲ್ಲೂಕಿನ ಅರ್ಹ ವಿಶೇಷ ಚೇತನರಿಗೆ ಕೊಡಿಸಲು ನನ್ನ ಶಕ್ತಿ ಮೀರಿ ಶ್ರಮಿಸುತ್ತೇನೆ ಎಂದು ಶಾಸಕ ಹೆಚ್.ಟಿ.ಮಂಜು ತಿಳಿಸಿದರು.

ಅವರು ಕೆ.ಆರ್.ಪೇಟೆ ತಾಲ್ಲೂಕು ವಿಶೇಷ ಚೇತನರ ಕ್ಷೇಮಾಭಿವೃದ್ಧಿ ಸಂಘವನ್ನು ಪಟ್ಟಣದ ಅಂಚೆಕಚೇರಿ ಮುಂಭಾಗದ ಕಟ್ಟಡದಲ್ಲಿ ನೂತನವಾಗಿ ಆರಂಭಿಸಿರುವ ಕಚೇರಿ ಆವರಣದಲ್ಲಿ ಉದ್ಘಾಟಿಸಿ ಮಾತನಾಡಿದರು. ವಿಶೇಷ ಚೇತನರು ದೈಹಿಕ ಮತ್ತು ಮಾನಸಿಕ ಸವಾಲುಗಳನ್ನು ಹೊಂದಿದ್ದರೂ ಅಸಾಧಾರಣ ಪ್ರತಿಭೆ ಮತ್ತು ಛಲದಿಂದ ಸಾಧನೆ ಮಾಡುವ ವ್ಯಕ್ತಿಗಳಾಗಿದ್ದಾರೆ. ಅವರಿಗೆ ಅನುಕಂಪಕ್ಕಿಂತ ಅವಕಾಶಗಳನ್ನು ಮತ್ತು ಸಮಾನ ಹಕ್ಕುಗಳ ಅವಶ್ಯಕತೆ ಇದೆ. ವಿಶೇಷ ಚೇತನರ ಅಭಿವೃದ್ಧಿಗೆ ಸರ್ಕಾರರಿ ಯೋಜನೆಗಳು ಅರ್ಹರಿಗೆ ತಲುಪಿಸಬೇಕು ಎಂದು ಧ್ಯೇಯೋದ್ದೇಶದೊಂದಿಗೆ ನೂತನವಾಗಿ ನೊಂದಾಯಿಸಿ ಅಸ್ತಿತ್ವಕ್ಕೆ ಬಂದಿರುವ ಕೆ.ಆರ್.ಪೇಟೆ ತಾಲ್ಲೂಕು ವಿಶೇಷ ಚೇತನರ ಕ್ಷೇಮಾಭಿವೃದ್ಧಿ ಸಂಘವು ಯಶಸ್ವಿಯಾಗಿ ತನ್ನ ಗುರಿಯನ್ನು ಸಾಧಿಸಲಿ. ಸಂಘದ ನೂತನ ಅಧ್ಯಕ್ಷರಾದ ಎಂ.ಸೋಮು ಅವರು ಸ್ವತಃ ವಿಶೇಷ ಚೇತನ ವ್ಯಕ್ತಿಯಾಗಿದ್ದರು ಉನ್ನತ ಶಿಕ್ಷಣ ಪಡೆದು ಉಪನ್ಯಾಸಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಇವರನ್ನೇ ಆದರ್ಶವಾಗಿಟ್ಟುಕೊಂಡು ಮುನ್ನಡೆಯಬೇಕು ಎಂದರು. ನಿಮ್ಮ ಸಂಘದ ಜೊತೆ ನಾನು ಸದಾ ಇರುತ್ತೇನೆ. ನಿಮ್ಮ ಯಾವುದೇ ಕುಂದು–ಕೊರತೆಗಳಿದ್ದರೂ ನನ್ನ ಗಮನಕ್ಕೆ ತಂದರೆ ಅದನ್ನು ಬಗೆಹರಿಸಿಕೊಡುತ್ತೇನೆ ಎಂದು ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಕೆ.ಸುಷ್ಮ, ತಾಲ್ಲೂಕು ಮಹಿಳಾ ಮತ್ತು ಮಕ್ಕಳ ಕಲ್ಯಾಣಾಧಿಕಾರಿ ವಿದ್ಯಾವತಿ, ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಅಜಿತ್, ಆರೋಗ್ಯ ನಿರೀಕ್ಷಕರಾದ ಧರ್ಮೇಂದ್ರ, ಎಸ್.ಸತೀಶ್, ತಾಲ್ಲೂಕು ಟಿಎಪಿಸಿಎಂಎಸ್ ನಿರ್ದೇಶಕರಾದ ಎಂ.ಮೋಹನ್, ದಿಲೀಪ್‌ಕುಮಾರ್, ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಡಾ.ವಿ.ಜಗದೀಶ್, ಬಿ.ಇ.ಆರ್.ಟಿ ಸಂಪನ್ಮೂಲ ವ್ಯಕ್ತಿಗಳಾದ ಎಂ.ಡಿ.ಯೋಗೇಂದ್ರ, ರಾಜಶೇಖರ್, ಮುಖಂಡರಾದ ಬ್ಯಾಂಕ್ ಪರಮೇಶ್ವರ್, ತಾಲ್ಲೂಕು ವಿಶೇಷ ಚೇತನರ ಕ್ಷೇಮಾಭಿವೃದ್ಧಿ ಸಂಘದ ಉಪಾಧ್ಯಕ್ಷ ಅಗ್ರಹಾರಬಾಚಹಳ್ಳಿ ಜವರೇಗೌಡ, ಅಭಿಲಾಷ, ಕಾರ್ಯದರ್ಶಿ ಸಿ.ಎನ್.ಭವ್ಯ, ಖಜಾಂಚಿ ಮಡುವಿನಕೋಡಿ ಎಂ.ಎಸ್.ಗಂಗಾಧರ್, ನಿರ್ದೇಶಕರುಗಳಾದ ದ್ರುವನಾರಾಯಣ್, ಕುಮಾರಶೆಟ್ಟಿ, ಸಿ.ಟಿ.ರಾಮೇಗೌಡ, ವರ್ಧನ್‌ಕುಮಾರ್, ಕೃಷ್ಣಶೆಟ್ಟಿ, ಎಂ.ಕೆ.ಶ್ರೀನಿವಾಸ್, ಭಾಗ್ಯಮ್ಮ, ಹರ್ಷ, ಶಿವರಾಮೇಗೌಡ, ಪುಟ್ಟರಾಜು, ಅರುಣ್‌ಕುಮಾರ್, ರಂಗಸ್ವಾಮಿ, ದರ್ಶನ್, ಮರಿಯಪ್ಪ, ಹರ್ಷಿತ, ರಾಧಾ, ಹರಿಪ್ರಿಯ, ದೀಪಕಾ, ಸಂಘದ ಕಾನೂನು ಸಲಹೆಗಾರ ಪ್ರಭಾಕರ್ ಸೇರಿದಂತೆ ತಾಲ್ಲೂಕಿನ ವಿವಿಧ ಭಾಗಗಳಿಂದ ನೂರಾರು ವಿಶೇಷ ಚೇತನರು ಅತ್ಯುತ್ಸಾಹದಿಂದ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಪುರಸಭಾ ಮಾಜಿ ಸದಸ್ಯ ಕೆ.ಆರ್.ನೀಲಕಂಠ ಸ್ವಾಗತಿಸಿ ನಿರೂಪಿಸಿದರು. ಸಂಘದ ಕಾರ್ಯದರ್ಶಿ ಸಿ.ಎನ್.ಭವ್ಯ ವಂದಿಸಿದರು.

# ಅಪರಾಧಿಗೆ 4 ವರ್ಷ ಕಠಿಣ ಶಿಕ್ಷೆ, ದಂಡ

ಮೈಸೂರು: ಗಾಂಜಾ ಮಾರಾಟ: ಅಪರಾಧಿಗೆ 4 ವರ್ಷಗಳ ಕಠಿಣ ಶಿಕ್ಷೆ ಮತ್ತು ದಂಡ ವಿಧಿಸಿ ಮೈಸೂರಿನ 7ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಆದೇಶಿಸಿದೆ.

ಮಹಮದ್ ಮುಷೀರ್ ಬಿನ್ ಮಹಮದ್ ಮುಸ್ತಾಕ್ ಶಿಕ್ಷೆಗೆ ಗುರಿಯಾದ ಆರೋಪಿಯಾಗಿದ್ದಾರೆ. 2023 ರ ಸೆ.17ರ ಸಂ.4 ಗಂಟೆ ಸಂಧರ್ಭದಲ್ಲಿ ಸಾತಗಳ್ಳಿ 'ಎ' ಜೋನ್ ಪಶ್ಚಿಮದ ಕಡೆಯಿಂದ ವರ್ಧಮಾನ ನಗರದ ಕಡೆ ಹೋಗುವ ರಸ್ತೆಯಲ್ಲಿ ಆರೋಪಿ ಮಹಮದ್ ಮುಷೀರ್ ಬಿನ್ ಮಹಮದ್ ಮುಸ್ತಾಕ್ ಬಿಳಿ ಬಣ್ಣದ ಹೋಂಡಾ ಆಕ್ಟಿವಾ ಸ್ಕೂಟರ್ ಸೀಟಿನ ಕೆಳಬದಿಯಲ್ಲಿ ಕ್ಯಾರಿ ಬಾಗ್ ಒಳಗಡೆ ಪೇಪರ್ ನಿಂದ ಪ್ಯಾಕ್ ಮಾಡಿದ್ದ 1 ಕೆ.ಜಿ. 555 ಗ್ರಾಂ ಒಣ ಗಾಂಜಾ ಸೊಪ್ಪನ್ನು ಇಟ್ಟುಕೊಂಟು ಸಾಗಾಣಿಕೆ ಮಾಡುತ್ತಿದ್ದಾಗ ಸೆನ್ ಕ್ರೈಂ ಪೊಲೀಸ್ ನಿರೀಕ್ಷಕ ಪುರುಷೋತ್ತಮ ಮತ್ತು ಸಿಬ್ಬಂದಿಯವರು ಆತನನ್ನು ವಶಕ್ಕೆ ಪಡೆದುಕೊಂಡು ಆತನ ಬಳಿಯಿದ್ದ ಗಾಂಜಾ ಸೊಪ್ಪು ಮತ್ತು ಸ್ಕೂಟರ್‌ನ್ನು ವಶಪಡಿಸಿಕೊಂಡಿದ್ದರು. ನಂತರ ಗಾಂಜಾ ಸೊಪ್ಪನ್ನು ನ್ಯಾಯಾಲಯದಲ್ಲಿ ಇನ್ವೆಂಟರಿ ಮಾಡಿಸಿ, ನಂತರ ಆರ್.ಎಫ್.ಎಸ್.ಎಲ್ ಗೆ ಪರೀಕ್ಷೆಗಾಗಿ ಸಲ್ಲಿಸಿದ್ದು, ತಜ್ಞರು ಗಾಂಜಾ ಸೊಪ್ಪು ಎಂದು ವರದಿ ನೀಡಿರುವುದು ತನಿಖೆಯಿಂದ ದೃಢಪಟ್ಟ ಮೇರೆಗೆ ಆರೋಪಿಯ ವಿರುದ್ಧ ಟಿ.ಮಾರುತಿ ತನಿಖಾಧಿಕಾರಿ ದೋಷಾರೋಪಣಾ ಪತ್ರ ಸಲ್ಲಿಸಿದ್ದರು. ಸದರಿ ಪ್ರಕರಣದಲ್ಲಿ ವಿಚಾರಣೆ ನಡೆಸಿದ ಮೈಸೂರಿನ 7ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶ ಎಂ.ರಮೇಶ ಅಭಿಯೋಜನೆಯು ಹಾಜರುಪಡಿಸಿದ ಸಾಕ್ಷ್ಯಾಧಾರಗಳನ್ನು ಪರಿಶೀಲಿಸಿ, ಆಪಾದಿತನಿಗೆ 20(ಬಿ) (ಬಿ) ಬಿ ಎನ್.ಡಿ.ಪಿ.ಎಸ್. ಕಾಯ್ದೆ ಅಡಿಯ ಅಪರಾಧಕ್ಕೆ 4 ವರ್ಷಗಳ ಕಠಿಣ ಶಿಕ್ಷೆ ಮತ್ತು 40 ಸಾವಿರ ರೂ ದಂಡವನ್ನು ವಿಧಿಸಿ ತೀರ್ಪು ನೀಡಿದೆ. ದಂಡ ಪಾವತಿಸಲು ತಪ್ಪಿದ್ದಲ್ಲಿ ಮುಂದುವರೆದು 6 ತಿಂಗಳ ಸಾದಾ ಕಾರಾವಾಸ ಶಿಕ್ಷೆ ಅನುಭವಿಸುವಂತೆ ತೀರ್ಪು ನೀಡಿದೆ. ಸರ್ಕಾರಿ ಅಭಿಯೋಜಕ ಎನ್.ಬಿ.ವಿಜಯಲಕ್ಷ್ಮಿ ಸರ್ಕಾರದ ಪರ ವಾದ ಮಂಡಿಸಿದ್ದರು.



# ಕಾನೂನು ಕಾಲೇಜಿಗೆ ಪುಸ್ತಕ ಕೊಡುಗೆ


ಚಾಮರಾಜನಗರ, ನಂಜನಗೂಡು ವಿಧಾನಸಭಾ ಕ್ಷೇತ್ರದ ಶಾಸಕರಾದ ದರ್ಶನ್‌ಧ್ರುವನಾರಾಯಣ್ ಅವರು ನಗರದ ಕಾನೂನು ಕಾಲೇಜು ಗ್ರಂಥಾಲಯಕ್ಕೆ 2 ಲಕ್ಷ ರೂ.ಮೌಲ್ಯದ ಪುಸ್ತಕಗಳನ್ನು ಕೊಡುಗೆಯಾಗಿ ನೀಡಿದ್ದಾರೆ.

ಚಾಮರಾಜನಗರ ಕಲಾವಿದ ರಾಮಸಮುದ್ರ ರಾಜಪ್ಪ ಅವರು ಪುಸ್ತಕಗಳನ್ನು ಕಾಲೇಜಿನ ಸಹಾಯಕ ಪ್ರಾಧ್ಯಾಪಕಿ ಎಂ.ಅಶ್ವಿನಿ ಅವರ ಮೂಲಕ ಕಾಲೇಜಿಗೆ ನೀಡಲಾಯಿತು. ಪುಸ್ತಕಗಳನ್ನು ಸ್ವೀಕರಿಸಿದ ಸಹಾಯಕ ಪ್ರಾಧ್ಯಾಪಕಿ ಎಂ.ಅಶ್ವಿನಿ ಮಾತನಾಡಿ, ಚಾಮರಾಜನಗರ ಮಾಜಿ ಸಂಸದ ದಿವಂಗತ ಆರ್.ಧ್ರುವನಾರಾಯಣ್ ಅವರ ಪುತ್ರರಾದ ನಂಜನಗೂಡು ವಿಧಾನಸಭಾ ಕ್ಷೇತ್ರದ ಶಾಸಕರಾದ ದರ್ಶನ್‌ಧ್ರುವನಾರಾಯಣ್ ಅವರು ಕಾಲೇಜು ಪ್ರಾರಂಭೋತ್ಸವದಲ್ಲಿ ಭಾಗವಹಿಸಿದ ಸಂದರ್ಭದಲ್ಲಿ ಗ್ರಂಥಾಲಯಕ್ಕೆ ಪುಸ್ತಕಗಳನ್ನು ಕೊಡಿಸುವಂತೆ ಕಾಲೇಜು ವತಿಯಿಂದ ಮನವಿ ಮಾಡಲಾಯಿತು. ಮನವಿಗೆ ಸ್ಪಂದಿಸಿ ಅವರು ಇಂದು 2 ಲಕ್ಷ ರೂ. ವೆಚ್ಚದ ಮೌಲ್ಯದ ಪುಸ್ತಕಗಳನ್ನು ಕೊಡುಗೆಯಾಗಿ




ನೀಡಿದ್ದಾರೆ. ಅವರಿಗೆ. ಕಾಲೇಜು, ವಿದ್ಯಾರ್ಥಿಗಳ ವತಿಯಿಂದ ಹೃದಯಪೂರ್ವಕ ಅಭಿನಂದಿಸಲಾಗುವುದು ಎಂದರು. ಕಲಾವಿದ ರಾಮಸಮುದ್ರ ರಾಜಪ್ಪ ಮಾತನಾಡಿ, ಮಾಜಿ ಸಂಸದ ದಿವಂಗತ ಆರ್.ಧ್ರುವನಾರಾಯಣ ಅವರು ಹೋರಾಟದ ಫಲವಾಗಿ ಜಿಲ್ಲೆಯಲ್ಲಿ ಕಾನೂನು ಕಾಲೇಜು ಆಗಿದ್ದು, ಅವರು ಪುತ್ರ ಶಾಸಕರಾದ ದರ್ಶನ್‌ಧ್ರುವ ನಾರಾಯಣ್ ಅವರು ಕೂಡ ಕಾಲೇಜಿಗೆ 2 ಲಕ್ಷ ರೂ. ಮೌಲ್ಯದ ಪುಸ್ತಕಗಳನ್ನು ನೀಡುವ ಮೂಲಕ ತಂದೆ ಹಾದಿಯಲ್ಲಿ ಸಾಗುತ್ತಿದ್ದಾರೆ' ಎಂದರು ಈ ಸಂದರ್ಭದಲ್ಲಿ ದ್ವಿತೀಯ ದರ್ಜೆ ಸಹಾಯಕ ಆರ್.ಸ್ವಾಮಿ, ಮುಖಂಡ ನಾಗೇಂದ್ರ, ಹಾಜರಿದ್ದರು.

# ರಸ್ತೆ ಗುಂಡಿ ಮುಚ್ಚುವಂತೆ ಒತ್ತಾಯ



ಗುಂಡ್ಲುಪೇಟೆ: ಪಟ್ಟಣ ಪುರಸಭೆ ವ್ಯಾಪ್ತಿಯ ನೀರಿನ ಗುಂಡಿ ಹಾಗೂ ಪೈಪ್ ಅಳವಡಿಕೆ ಸಂದರ್ಭ ತೆಗೆದಿದ್ದ ರಸ್ತೆ ಗುಂಡಿ ಮುಚ್ಚುವಂತೆ ಒತ್ತಾಯಿಸಿ ನಮ್ಮ ಕರ್ನಾಟಕ ಸೇನೆ ವತಿಯಿಂದ ಪುರಸಭೆ ಮುಖ್ಯಾಧಿಕಾರಿಗೆ ಮನವಿ ಸಲ್ಲಿಸಲಾ ಯಿತು. ಪಟ್ಟಣದ ಪುರಸಭೆ ಕಚೇರಿ ಆವರಣದ ಮುಂದೆ ಜಮಾವಣೆಗೊಂಡ ನಮ್ಮ ಕರ್ನಾಟಕ ಸೇನೆ ಪದಾಧಿಕಾರಿಗಳು ಅಧಿಕಾರಿಗಳ ವಿರುದ್ಧ ಅಸಮಾಧಾನ ಹೊರಹಾಕಿದರು. ನಮ್ಮ ಕರ್ನಾಟಕ ಸೇನೆ ಜಿಲ್ಲಾಧ್ಯಕ್ಷ ಸುರೇಶ್ ನಾಯಕ ಮಾತನಾಡಿ, ಗುಂಡ್ಲುಪೇಟೆ ಪಟ್ಟಣಾದ್ಯಂತ ಹಲವು ವರ್ಷಗಳಿಂದಲೂ ಮನೆ ಮುಂದಿನ ನೀರಿನ ಗುಂಡಿ ಮುಚ್ಚದೆ ಬಿಡಲಾಗಿದೆ ಎಂದು ಕಿಡಿಕಾರಿದರು. ಪಟ್ಟಣಕ್ಕೆ ಎಕ್ಸ್ ಪ್ರೆಸ್ ಲೈನ್ ಕುಡಿಯುವ ನೀರಿನ ಪೈಪ್ ಅಳವಡಿಕೆ ವೇಳೆ ರಸ್ತೆಗಳನು ಅಗೆಯಲಾಗಿದೆ. ಇದು ಬೃಹದಾಕಾರವಾಗಿ ಮಾರ್ಪಟ್ಟಿದೆ. ಮಳೆ ಬಂದ ಸಂದರ್ಭದಲ್ಲಿ ಗುಂಡಿಗಳಲ್ಲಿ ನೀರು ನಿಂತು ಓಡಾಟಕ್ಕೆ ತೀವ್ರ ತೊಂದರೆ ಉಂಟಾಗುತ್ತಿದೆ ಎಂದರು.


ಮನವಿ ಸ್ವೀಕರಿಸಿ ಮಾತನಾಡಿದ ಪುರಸಭೆ ಮುಖ್ಯಾಧಿಕಾರಿ ಶರವಣ, ಪರಿಶೀಲನೆ ನಡೆಸಿ ಕ್ರಮ ವಹಿಸಲಾಗುವುದು ಎಂದು ಭರವಸೆ ನೀಡಿದರು. ಈ ಸಂದರ್ಭದಲ್ಲಿ ನಮ್ಮ ಕರ್ನಾಟಕ ಸೇನೆ ಸಂಘದ ತಾಲೂಕು ಅಧ್ಯಕ್ಷಶ್ರೀನಿವಾಸನಾಯಕ, ಉಪಾಧ್ಯಕ್ಷ ಕೃಷ್ಣ ಜಿಲ್ಲಾ ಉಪಾಧ್ಯಕ್ಷನಾಗರಾಜು, ಮಾಧುನಾಯಕ, ಮಂಜು, ಕೃಷ್ಣ ಹರೀಶ್ ಗೌಡ, ಮನು ಮತ್ತಿತರರು ಇದ್ದರು

## ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರ ಸಂಘದಿಂದ ಪ್ರತಿಭಟನೆ

# ಕಬಿನಿ ನಾಲೆಯ ಕೆರೆ ಕಟ್ಟೆಗೆ ನೀರು ಬಿಡಿ

ಮೈಸೂರು:ಕಬಿನಿ ನಾಲೆ, ಕೆರೆ ಕಟ್ಟೆಗಳಿಗೆ ನೀರು ಬಿಡಲು ಒತ್ತಾಯಿಸಿ ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರ ಸಂಘದ ಮುಖಂಡರು ಬುಧವಾರ ಕಾಡಾ ಕಚೇರಿ ಮುಂಭಾಗ ಪ್ರತಿಭಟನೆ ನಡೆಸಲಾಯಿತು.

ಗನ್ ಹೌಸ್ ವೃತ್ತದ ಬಳಿಯ ಕುವೆಂಪು ಉದ್ಯಾನದಲ್ಲಿ ಜಮಾಯಿಸಿದ ಪ್ರತಿಭಟನಾಕಾರರು ಜನಪ್ರತಿನಿಧಿಗಳ ವಿರುದ್ಧ ಘೋಷಣೆ ಕೂಗುತ್ತಾ ಕಾಡಾ ಕಚೇರಿಗೆ ತೆರಳಿ ಮುತ್ತಿಗೆ ಹಾಕಲು ಯತ್ನಿಸಿದರು. ಅವರನ್ನು ಪೊಲೀಸರು ತಡೆದರು. ಈ ವೇಳೆ ಸಂಘದ ರಾಜ್ಯಾಧ್ಯಕ್ಷ ಹಳ್ಳಿ ಕೆರೆಹುಂಡಿ ಭಾಗ್ಯರಾಜ್ ಮಾತನಾಡಿ, ಮೈಸೂರು ಮತ್ತು ಚಾಮರಾಜನಗರ ಜಿಲ್ಲಾ ವ್ಯಾಪ್ತಿಯ ಕಬಿನಿ ವ್ಯಾಪ್ತಿಯ ನಾಲೆಗಳಿಗೆ ಹಾಗೂ ಹುಲ್ಲಳ್ಳಿ, ರಾಂಪುರ ನಾಳೆಗಳಿಗೆ ನೀರು ಬಿಡುವಲ್ಲಿ ಸರ್ಕಾರ ಮತ್ತು ಜಿಲ್ಲಾಡಳಿತ ವಿಫಲವಾಗಿದೆ. ಜಿಲ್ಲಾ ಉಸ್ತುವಾರಿ ಸಚಿವರು ಕೇವಲ ಮುಖ್ಯಮಂತ್ರಿಗಳ ಹಿಂಬಾಲಕರಾಗಿ ತಿರುಗಾಡಲು ಪ್ರಾರಂಭಿಸಿದ್ದು, ಜಿಲ್ಲೆಯ ರೈತರ ಸಮಸ್ಯೆಗಳ ಬಗ್ಗೆ ಗಮನಹರಿಸುವಲ್ಲಿ ವಿಫಲರಾಗಿದ್ದಾರೆ ಎಂದು ಆರೋಪಿಸಿದರು. ಕಬಿನಿ ನಾಲೆ ದುರಸ್ತಿ ಹಾಗೂ ಅದರ ವ್ಯಾಪ್ತಿಯಲ್ಲಿ ಬರುವ ಕಾಮಗಾರಿಗಳ ಗುಣಮಟ್ಟವನ್ನು




ಅಧಿಕಾರಿಗಳು ಕಾಪಾಡಬೇಕು ತಕ್ಷಣ ಜಿಲ್ಲಾ ಉಸ್ತುವಾರಿ ಸಚಿವರು ನೀರಾವರಿ ಸಲಹಾ ಸಮಿತಿ ಸಭೆ ಮಾಡಿ ಕೆರೆ, ಕಟ್ಟೆಗಳಿಗೆ ಮತ್ತು ನಾಲೆಗಳಿಗೆ ನೀರು ಬಿಡಲು ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ ಜಿಲ್ಲಾ ಉಸ್ತುವಾರಿ ಸಚಿವರ ವಿರುದ್ಧ ಉಗ್ರ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು' ಎಂದು ಎಚ್ಚರಿಕೆ ನೀಡಿದರು.

ಕಾವೇರಿ ನೀರಾವರಿ ನಿಗಮದ ಮುಖ್ಯ ಎಂಜಿನಿಯರ್ ಫೆ. 15ರಿಂದ ನಾಲೆ ಹಾಗೂ ಕೆರೆಕಟ್ಟೆಗೆ ನೀರು ಹರಿಸುತ್ತೇವೆ ಎಂದು ಲಿಖಿತ ಭರವಸೆ ನೀಡಿದ ಬಳಿಕ ಪ್ರತಿಭಟನೆ ವಾಪಸ್ ಪಡೆಯಲಾಯಿತು. ಪ್ರತಿಭಟನೆಯಲ್ಲಿ ಕೆರೆಹುಂಡಿ ರಾಜಣ್ಣ, ಜಿಲ್ಲಾಧ್ಯಕ್ಷ ವಳಗೆರೆ ಗಣೇಶ್, ಹೆಚ್.ಗುಂಡ್ಲ ಚಿದಂಬರ, ಗಣೇಶ್, ಮುದ್ದಹಳ್ಳಿ ಮಧು, ಸುಜ್ಜಲೂರು ಜಯಸ್ವಾಮಿ, ಬಿದರಳ್ಳಿ ಮಾದಪ್ಪ, ದೇವಿರಮ್ಮನಹಳ್ಳಿ ಸಿದ್ದಬಸಪ್ಪ, ಶ್ರೀಕಂಠ ಸ್ವಾಮಿ, ದೇವಿರಮ್ಮನಹಳ್ಳಿ ಹುಂಡಿ ನವೀನ್, ಶ್ಯಾನಾಡ್ರಹಳ್ಳಿ ಬಸವರಾಜು, ನಾಗರಾಜಪ್ಪ ಅಂಡುವಿನಹಳ್ಳಿ, ಮಹೇಶ್ ಕುರಹಟ್ಟಿ, ರಾಜೇಶ್, ಪುನೀತ್, ಕಸುವಿನಹಳ್ಳಿ ಗುರು, ಮೊಳಕುಂಡಿ ಸೋಮ, ಮಾದಾಪುರ ಪುನೀತ್ ಪಾಲ್ಗೊಂಡಿದ್ದರು.

ವರ್ತಮಾನ
ಶುಕ್ರವಾರ
ಫೆಬ್ರವರಿ 13, 2026

# ರಸ್ತೆ ಅಭಿವೃದ್ಧಿಗೆ 5 ಕೋಟಿ ರೂ.: ಎ.ಆರ್.ಕೃಷ್ಣಮೂರ್ತಿ

ಚಾಮರಾಜನಗರ, ಬಹಳ ವರ್ಷಗಳಿಂದ ನೆನೆಗುದಿಗೆ ಬಿದ್ದಿದ್ದ ಆಲೂರು ಹೊಮ್ಮ ದಿಂದ ಕಂದಹಳ್ಳಿ ಮಹದೇಶ್ವರ ದೇವಸ್ಥಾನದ ವರಗಿನ ಸಂಪರ್ಕ ಕಲ್ಪಿಸುವ ರಸ್ತೆ ಅಭಿವೃದ್ಧಿಗೆ ಮುಖ್ಯಮಂತ್ರಿಗಳ ಅನುದಾನದಡಿಯಲ್ಲಿ 5 ಕೋಟಿ ರೂ. ಮಂಜೂರಾಗಿದ್ದು, ಟೆಂಡರ್ ಪ್ರಕ್ರಿಯೆಯಲ್ಲಿದ್ದು, ಸದ್ಯದಲ್ಲಿಯೇ ರಸ್ತೆ ಅಭಿವೃದ್ಧಿ ಕಾಮಗಾರಿ ಪ್ರಾರಂಭವಾಗಲಿದೆ ಎಂದು ಕೊಳ್ಳೇಗಾಲ ಕ್ಷೇತ್ರದ ಶಾಸಕ ಎ.ಆರ್.ಕೃಷ್ಣಮೂರ್ತಿ ತಿಳಿಸಿದರು.



ತಾಲೂಕಿನ ಹೊಮ್ಮ ಗ್ರಾಮದಲ್ಲಿ ಪರಿಶಿಷ್ಟ ಜಾತಿಯ ಬೀದಿಯಲ್ಲಿ ಸಿಮೆಂಟ್ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಗುದ್ದಲಿಪೂಜೆ ನೆರವೇರಿಸಿ ಅವರು ಮಾತನಾಡಿದರು.ನಾನು ಕ್ಷೇತ್ರದ ಶಾಸಕನಾದ ಬಳಿಕ ಕ್ಷೇತ್ರದಲ್ಲಿ ಸಾಕಷ್ಟು ಅಭಿವೃದ್ಧಿ ಕಾರ್ಯಕ್ರಮಗಳು ನಡೆಯುತ್ತಿದೆ. ಕ್ಷೇತ್ರದ 7 ಗ್ರಾಮಗಳಲ್ಲಿ ಸಿಮೆಂಟ್ ರಸ್ತೆ ನಿರ್ಮಾಣ ಮಾಡಲು ಮಲೆನಾಡು ಅಭಿವೃದ್ಧಿ ಯೋಜನೆಯಡಿ ತಲಾ 5 ಲಕ್ಷ ರೂ. ಬಿಡುಗಡೆಯಾಗಿದೆ. ಆದರಂತೆ ಗ್ರಾಮದಲ್ಲಿ ರಸ್ತೆ ಅಭಿವೃದ್ಧಿಗೆ ಚಾಲನೆ ನೀಡಿದ್ದೇನೆ. ಗ್ರಾಮಕ್ಕೆ ಸೇರಿರುವ ಬಸವರಾಜಪುರದಲ್ಲಿ ರಸ್ತೆ, ಚರಂಡಿ, ಸಿ.ಸಿ. ರಸ್ತೆ ನಿರ್ಮಾಣಕ್ಕೆ 30 ಲಕ್ಷ ರೂ. ಬಿಡುಗಡೆಯಾಗಿದೆ. ಅಲ್ಲದೇ ಅಲೂರಿನಿಂದ ಹೊಮ್ಮಕ್ಕೆ ಬರುವ ರಸ್ತೆ ಮಾರ್ಗವು ತೀರಾ ಶಿಥಿಲವಾಗಿದ್ದು, ಈ ರಸ್ತೆಯನ್ನು ಅಭಿವೃದ್ಧಿಸಲು 5 ಕೋಟಿ ರೂ. ನೀಡಲಾಗಿದೆ. ಸುಮಾರು ಕಳೆದ 20 ವರ್ಷಗಳಿಂದ ಈ ರಸ್ತೆ ಅಭಿವೃದ್ಧಿಗೆ ಯಾರು ಮನಸ್ಸು ಮಾಡಿರಲಿಲ್ಲ. ನನ್ನ ಅವಧಿಯಲ್ಲಿ ಈ ರಸ್ತೆ ಅಭಿವೃದ್ಧಿಯಾಗುತ್ತಿದೆ ಎಂದು ಎ.ಆರ್.ಕೃಷ್ಣಮುರ್ತಿ ತಿಳಿಸಿದರು.

ಹೊಮ್ಮ ಗ್ರಾಮದ ಪರಿಮಿತಿಯಲ್ಲಿ 20 ಲಕ್ಷ ರೂ. ಅನುದಾನ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕ್ಷೇತ್ರದ ಅಭಿವೃದ್ಧಿಗೆ ವಿಶೇಷ ಅಸಕ್ತಿ ವಹಿಸಿ 25 ಕೋಟಿ ಗೂ ಹೆಚ್ಚು ಅನುದಾನವನ್ನು ನೀಡಿದ್ದಾರೆ. ಈ ಅನುದಾನದಲ್ಲಿ ಸಮುದಾಯಭವನ ಅಭಿವೃದ್ದಿಗೆ ನೀಡಲಾಗಿತ್ತು. ಈ ಬಾರಿ ರಸ್ತೆಗಳ ಅಭಿವೃದ್ಧಿಗೆ ಬಳಕೆ ಮಾಡಿಕೊಳ್ಳಲಾಗಿದೆ. ಅವರಿಗೆ ಕ್ಷೇತ್ರದ ಜನತೆಯ ಪರವಾಗಿ ಹೃದಯ ಪೂರ್ವಕ ಕೃತಜ್ಞತೆಯನ್ನು ಸಲ್ಲಿಸುವುದಾಗಿ ಕೃಷ್ಣಮೂರ್ತಿ ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಯ ಸಮಿತಿಯ ಅಧ್ಯಕ್ಷ ಎಚ್.ವಿ. ಚಂದ್ರು, ಮುಖಂಡರಾದ ಕಂದಹಳ್ಳ ನಂಜುಂಡಸ್ವಾಮಿ, ಎಪಿಎಂಸಿ ನಿರ್ದೇಶಕ ಹೊಮ್ಮ ರವಿಶಂಕರಮೂರ್ತಿ, ಗ್ರಾ.ಪಂ. ಮಾಜಿ ಅಧ್ಯಕ್ಷ ರಾಮು, ಜಿಲ್ಲಾ ಪ್ರಗತಿ ಪರಿಶೀಲನಾ ಸಮಿತಿಯ ಸದಸ್ಯ ಬೂದಂಬಳ್ಳಿ ಶಂಕರ್, ಗೌಡಿಕೆ ಮಹದೇವಸ್ವಾಮಿ, ಆಶ್ವಥ್, ರಾಜೇಶ್, ವೆಂಕಟೇಶ್, ಮಯೂರ, ಕುಮಾರ್ ಇತರರು ಹಾಜರಿದ್ದರು.

# ಉತ್ತಮ ಕ್ರೀಡೆಗಳಿಂದ ಅರೋಗ್ಯವಂತ ಸಮಾಜ

ಕೆ.ಆರ್.ಪೇಟೆ, ಕ್ರೀಡೆಗಳಿಂದ ದೈಹಿಕ ಹಾಗೂ ಮಾನಸಿಕ ಆರೋಗ್ಯ ವೃದ್ದಿಸುತ್ತದೆ. ಅದರಲ್ಲೂ ಒಳಾಂಗಣ ಕ್ರೀಡೆಗಳಿಂದ ಹವಾಮಾನದ ತೊಂದರೆಗಳಿಲ್ಲದೆ ಸಮತಟ್ಟಾದ ಜಾಗದಲ್ಲಿ ಆಟವಾಡುವುದರಿಂದ ಯಾವುದೇ ಅಪಾಯವಿಲ್ಲದೆ ಸುರಕ್ಷಿತವಾಗಿ ಒಳಾಂಗಣ ಕ್ರೀಡೆಗಳಿಂದ ಉತ್ತಮ ಆರೋಗ್ಯ ಪಡೆದುಕೊಳ್ಳಬಹುದು ಎಂದು ಶಾಸಕರಾದ ಹೆಚ್.ಟಿ.ಮಂಜು ಅವರು ಹೇಳಿದರು.



ಕೆ.ಆರ್.ಪೇಟೆ ಪಟ್ಟಣದ ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣದ ಮುಂಭಾಗದಲ್ಲಿರುವ ಶಂಕರ್ ಸ್ಪೋಟ್ಸ್ ಅಕಾಡೆಮಿಯ ಶಂಕರ್ ಒಳಾಂಗಣ ಕ್ರೀಡಾಂಣದಲ್ಲಿ ಆಯೋಜಿಸಿದ್ದ ಕೆ.ಆರ್,ಪೇಟೆ ಪ್ರೀಮಿಯರ್ ಲೀಗ್ ನಾಲ್ಕನೇ ಆವೃತ್ತಿಯ ಶಟಲ್ ಬ್ಯಾಡ್ಮಿಂಟನ್ ಟೂರ್ನಿಯನ್ನು ಜ್ಯೋತಿ ಬೆಳಗಿಸಿ ಉದ್ಘಾಟಿಸಿ ತಾವೂ ಸಹ ಷಟಲ್ ಬ್ಯಾಡ್ಮಿಂಟನ್ ಆಟ ಆಡುವ ಮೂಲಕ ಚಾಲನೆ ನೀಡಿ ಮಾತನಾಡಿದರು. ಆರ್.ಟಿ.ಓ ಮಲ್ಲಿಕಾರ್ಜುನ್, ತಾಲ್ಲೂಕು ಪಂಚಾಯತ್ ಮಾಜಿ ಅಧ್ಯಕ್ಷ ಕಿಕ್ಕೇರಿ ಸುರೇಶ್, ಮುಖಂಡರಾದ ಮನ್‌ಮುಲ್ ನಿರ್ದೇಶಕರುಗಳಾದ ಡಾಲು ರವಿ, ಎಂ.ಬಿ.ಹರೀಶ್, ಡಿಸಿಸಿ ಬ್ಯಾಂಕ್ ನಿರ್ದೇಶಕ ಶೀಳನೆರೆ ಅಂಬರೀಶ್, ಟಿಎಪಿಸಿಎಂಎಸ್ ನಿರ್ದೇಶಕ ಮಲ್ಲೇನಹಳ್ಳಿ ಮೋಹನ್, ಪುರಸಭೆ ಮಾಜಿ ಅಧ್ಯಕ್ಷ ಕೆ.ಬಿ.ಮಹೇಶ್‌ಕುಮಾರ್, ಕಿಕ್ಕೇರಿ ಸೊಸೈಟಿ ಮಾಜಿ ಅಧ್ಯಕ್ಷ ಸಾಸಲು ಈರಪ್ಪ, ಡಾಬಾ ಮಂಜು, ಮಾಜಿ ಪುರಸಭಾ ಸದಸ್ಯರಾದ ಬಿ.ಜಿ.ಗಿರೀಶ್, ಮಾಜಿ ಪುರಸಭಾ ಸದಸ್ಯರಾದ ಗಿರೀಶ್, ವಿಶ್ವನಾಥ್, ಸೌಭಾಗ್ಯ ಉಮೇಶ್, ಸಲಾವುದ್ದೀನ್, ದೊದ್ದನಕಟ್ಟೆ ಮಂಜುನಾಥ್, ಬಸ್ ಯೋಗೇಶ್, ಪ್ರಾಂಶುಪಾಲ ಕೆ.ಪ್ರಸನ್ನಕುಮಾರ್, ವಕೀಲ ಪ್ರಸನ್ನ, ತರಬೇತುದಾರರಾದ ಕೆ.ಟಿ.ಶಂಕರ್ ಮತ್ತು ದೀಪಾ ಶಂಕರ್ ಹಾಗೂ ಶಂಕರ್ ಸ್ಪೋಟ್ಸ್ ಅಕಾಡೆಮಿಯ ಹಿರಿಯ-ಕಿರಿಯ ಕ್ರೀಡಾಪಟುಗಳು ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು. ಶಾಸಕ ಹೆಚ್.ಟಿ.ಮಂಜು, ಆರ್.ಟಿ.ಓ.ಮಲ್ಲಿಕಾರ್ಜುನ್, ಕಿಕ್ಕೇರಿ ಸುರೇಶ್, ಡಾಲು ರವಿ, ಎಂ.ಬಿ.ಹರೀಶ್, ಎಸ್. ಅಂಬರೀಶ್, ಮಲ್ಲೇನಹಳ್ಳಿ ಮೋಹನ್, ಉದ್ಯಮಿ ಪುರ ವಿಶ್ಬನಾಥ್, ಪುರಸಭೆ ಮಾಜಿ ಅಧ್ಯಕ್ಷ ಕೆ.ಬಿ.ಮಹೇಶ್ ಕುಮಾರ್ ಅವರನ್ನು ಸನ್ಮಾನಿಸಿಸಲಾಯಿತು.

### ಬಂಡೀಪುರದಲ್ಲಿ ಅಂತಾರಾಷ್ಟ್ರೀಯ ಬಿಗ್ ಕ್ಯಾಟ್ಸ್ ಶೃಂಗಸಭೆ ಮುಕ್ತಾಯ

# ಸಭೆ ಆಯೋಜನೆಗೆ ರೈತರ ಆಕ್ರೋಶ

**ಬಂಡೀಪುರದಲ್ಲಿ ಅಂತಾರಾಷ್ಟ್ರೀಯ ಬಿಗ್ ಕ್ಯಾಟ್ಸ್ ಶೃಂಗಸಭೆ ಮುಕ್ತಾಯಗೊಂಡಿದ್ದು, ಸಭೆಯಲ್ಲಿ ಭಾಗಿಯಾಗಿದ್ದ 23 ದೇಶಗಳ 39 ಪ್ರತಿನಿಧಿಗಳು ಅರಣ್ಯ ಇಲಾಖೆ ಸಿಬ್ಬಂದಿಗಳ ಜೊತೆ ಸಂವಾದ ನಡೆಸಿದರು.**




ಚಾಮರಾಜನಗರ: ಕೇಂದ್ರ ಸರ್ಕಾರದ ತಾಂತ್ರಿಕ ಮತ್ತು ಆರ್ಥಿಕ ಸಹಕಾರ ಯೋಜನೆಯಡಿ ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ ಬಂಡೀಪುರದಲ್ಲಿ ಆಯೋಜಿಸಿದ್ದ 3 ದಿನಗಳ ಅಂತಾರಾಷ್ಟ್ರೀಯ ಬಿಗ್ ಕ್ಯಾಟ್ಸ್ ಅಲೆಯನ್ಸ್ ಶೃಂಗಸಭೆಯು ಬುಧವಾರ ಮುಕ್ತಾಯಗೊಂಡಿತು.

ದೊಡ್ಡ ಬೆಕ್ಕುಗಳ ಸಂರಕ್ಷಣೆಗೆ ಮಾರ್ಗಸೂಚಿಗಳು, ಕಾಡಾನೆ ಮತ್ತು ಮಾನವ ಸಂಘರ್ಷ ನಿರ್ವಹಣೆ, ದೊಡ್ಡ ಬೆಕ್ಕು ಪ್ರಭೇದ ಹಾಗೂ ಅರಣ್ಯ ಸಂರಕ್ಷಣೆಯಲ್ಲಿ ಸಮುದಾಯದ ಪಾತ್ರ, ಪರಿಸರ ವ್ಯವಸ್ಥೆಯ ಪುನಃಸ್ಥಾಪನೆ ಮತ್ತು ಆವಾಸಸ್ಥಾನ ನಿರ್ವಹಣೆ, ವನ್ಯಜೀವಿ ಸಂರಕ್ಷಣೆಗೆ ಕಾನೂನುಗಳು ವಿಷಯಗಳ ಬಗ್ಗೆ ಹಿರಿಯ ಅರಣ್ಯಾಧಿಕಾರಿಗಳು ಮತ್ತು ವನ್ಯಜೀವಿ ತಜ್ಞರು ವಿಚಾರ ಮಂಡಿಸಿದರು.

**ಸಭೆ ಆಯೋಜನೆಗೆ ರೈತರ ಆಕ್ರೋಶ**

ಶೃಂಗಸಭೆಯಲ್ಲಿ ಭಾಗಿಯಾಗಿದ್ದ 23 ದೇಶಗಳ 39 ಪ್ರತಿನಿಧಿಗಳು ಬಂಡೀಪುರದ ಹುಲಿ ಸಂರಕ್ಷಿತ ಪ್ರದೇಶದ ವಿವಿಧ ಸ್ಥಳಗಳಿಗೆ ಭೇಟಿ ನೀಡಿ ಕಳ್ಳಬೇಟೆ ತಡೆ ಕೇಂದ್ರ, ರಕ್ಷಣಾ ತಂತ್ರಗಳು, ನೀರಿನ ತೊಟ್ಟಿಗಳು, ಸೌರ - ಚಾಲಿತ ಬೋರ್‌ವೆಲ್‌ಗಳು, ಕಳೆಗಿಡ ಲಂಟಾನಾ ತೆರವುಗೊಳಿಸಿ ಹುಲ್ಲುಗಾವಲು ಪುನರ್ ಸ್ಥಾಪನೆಯ ಸ್ಥಳಗಳನ್ನು ವಿದೇಶಿ ಪ್ರತಿನಿಧಿಗಳು ವೀಕ್ಷಿಸಿ ಅರಣ್ಯ ಇಲಾಖೆ ಸಿಬ್ಬಂದಿಗಳ ಜೊತೆ ಸಂವಾದ ನಡೆಸಿದರು. ಬಂಡೀಪುರದಲ್ಲಿ ಶೃಂಗಸಭೆ ಮುಕ್ತಾಯಗೊಂಡಿದ್ದು, ಇನ್ನೆರಡು ದಿನ ನಾಗರಹೊಳೆಯಲ್ಲಿ ನಡೆಯಲಿದೆ.

**ಶೃಂಗಸಭೆ ವಿರುದ್ಧ ರೈತರ ಆಕ್ರೋಶ**

ಬಂಡೀಪುರದ ಹುಲಿ ಸಂರಕ್ಷಿತ ಪ್ರದೇಶದಲ್ಲಿ ನಡೆಯುತ್ತಿರುವ ಬಿಗ್ ಕ್ಯಾಟ್ಸ್ ಶೃಂಗಸಭೆ ವಿರೋಧಿಸಿ ಗುಂಡ್ಲುಪೇಟೆಯಲ್ಲಿ ಸಾಮೂಹಿಕ ನಾಯಕತ್ವದ ಕರ್ನಾಟಕ ರಾಜ್ಯ ರೈತ ಸಂಘದ ಪದಾಧಿಕಾರಿಗಳು ಪ್ರತಿಭಟನೆ ನಡೆಸಿದರು. ಹಳೇ ಪ್ರವಾಸಿ ಮಂದಿರದ ಮುಂದೆ ಜಮಾಯಿಸಿದ ಸಾಮೂಹಿಕ ನಾಯಕತ್ವದ ಕರ್ನಾಟಕ ರಾಜ್ಯ ರೈತ ಸಂಘದ ಪದಾಧಿಕಾರಿಗಳು ಕೇಂದ್ರ ಸರ್ಕಾರ ಹಾಗೂ ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಧಿಕ್ಕಾರದ ಘೋಷಣೆ ಕೂಗಿ ಆಕ್ರೋಶ ಹೊರ ಹಾಕಿದರು. ಈ ವೇಳೆ ರೈತ ಮುಖಂಡ ಹೊನ್ನೂರು ಪ್ರಕಾಶ್ ಮಾತನಾಡಿ, ಪ್ರಕೃತಿ ಸಂಪತ್ತು ಬಂಡೀಪುರ ಅರಣ್ಯವನ್ನು ಕೇಂದ್ರ ಸರ್ಕಾರ ಜಾಗತಿಕ ಬಿಗ್ ಕ್ಯಾಟ್ ಸಮ್ಮೇಳನದ ಹೆಸರಿನಲ್ಲಿ ಖಾಸಗೀಕರಣ ಮಾಡಲು ಮೊದಲ ಹೆಜ್ಜೆಯಾಗಿ ಕಾರ್ಯಾಗಾರ ಆಯೋಜಿಸಿರುವುದು ಖಂಡನೀಯ. 24 ದೇಶಗಳೊಂದಿಗೆ ಒಪ್ಪಂದಕ್ಕೆ ಸಹಿ ಪಡೆದಿರುವ ಕೇಂದ್ರ ಸರ್ಕಾರದ ನಡೆ ಅವೈಜ್ಞಾನಿಕ. ಆದ್ದರಿಂದ ವಿದೇಶಗಳಿಂದ ಕಾರ್ಯಾಗಾರಕ್ಕೆ ಆಗಮಿಸಿರುವ ಪ್ರಮುಖರಿಬ್ಬರ ಭೇಟಿಗೆ ಅವಕಾಶ ನೀಡಬೇಕು ಎಂದು ಒತ್ತಾಯಿಸಿದರು.

ರೈತ ಮುಖಂಡ ಮಂಜು ಕಿರಣ್ ಮಾತನಾಡಿ, ಪಾಶ್ಚಿಮಾತ್ಯ ರಾಷ್ಟ್ರದ ಪ್ರತಿನಿಧಿಗಳು ಅರಣ್ಯ ಸಂರಕ್ಷಣೆ ಮಾಡುವ ನೆಪದಲ್ಲಿ ನಮ್ಮ ಕಾಡನ್ನು ತೋರಿಸಿ ಹಣ ಮಾಡುತಿದ್ದಾರೆ. ಮುಂದಿನ ದಿನಗಳಲ್ಲಿ ಬಂಡೀಪುರ ಅರಣ್ಯಕ್ಕೆ ಕಾಂಪೌಂಡ್ ನಿರ್ಮಿಸಿ ಹಣ ವಸೂಲಿ ಮಾಡುವ ದಿನ ದೂರವಿಲ್ಲ ಎಂದು ಕಿಡಿಕಾರಿದರು. ಕೇಂದ್ರ ಸರ್ಕಾರದ ಆದೇಶದಂತೆ ಬಿಗ್ ಕ್ಯಾಟ್ ಶೃಂಗ ಸಭೆ ಕಾರ್ಯಕ್ರಮ ನಡೆಯುತ್ತಿದ್ದು, ನಿಮ್ಮ ಅಹವಾಲುಗಳನ್ನು ನನಗೆ ಅಥವಾ ತಹಶೀಲ್ದಾರ್ ನೀಡಿದರೆ ಇದಕ್ಕೆ ಸಂಬಂಧಿಸಿದವರನ್ನು ಮಾಹಿತಿ ನೀಡುತ್ತೇನೆ. ಆದರೆ, ಶೃಂಗಸಭೆ ನಡೆಯುತ್ತಿರುವ ಸ್ಥಳಕ್ಕೆ ತೆರಳಲು ಅವಕಾಶ ನೀಡುವುದಿಲ್ಲ ಎಂದು ಡಿವೈಎಸ್ಪಿ ಸ್ನೇಹರಾಜ್ ತಿಳಿಸಿದರು. ಈ ವೇಳೆ ರೈತರು ಮತ್ತು ಪೊಲೀಸರ ನಡುವೆ ವಾಗ್ವಾದ ನಡೆಯಿತು. ಪೊಲೀಸರ ಮಾತಿಗೂ ಬಗ್ಗದ ರೈತರು, ರಾಷ್ಟ್ರೀಯ ಹೆದ್ದಾರಿಯಲ್ಲಿ ಧರಣಿಗೆ ಮುಂದಾದರು. ಈ ವೇಳೆ ಪ್ರತಿಭಟನಾಕಾರರನ್ನು ಮುಂಜಾಗ್ರತಾ ಕ್ರಮವಾಗಿ ಪೊಲೀಸರು ವಶಕ್ಕೆ ಪಡೆದು ತೆರಕಣಾಂಬಿ ಪೊಲೀಸ್ ಠಾಣೆಗೆ ಕರೆದೊಯ್ದರು.

# ಕಾವೇರಿ ದಾಟಿ ಬರುತ್ತಿರುವ ಭಕ್ತಸಾಗರ

## ಮಲೆ ಮಹದೇಶ್ವರ ಶಿವರಾತ್ರಿ ಜಾತ್ರೆಗೆ ದಿನಗಣನೆ

ಚಾಮರಾಜನಗರ, ಪ್ರಸಿದ್ಧ ಯಾತ್ರಾಸ್ಥಳವಾದ ಜಿಲ್ಲೆಯ ಹನೂರು ತಾಲೂಕಿನ ಮಲೆ ಮಹದೇಶ್ವರ ಬೆಟ್ಟದಲ್ಲಿ ಮಹಾ ಶಿವರಾತ್ರಿ ಜಾತ್ರಾ ಮಹೋತ್ಸವ ಫೆಬ್ರವರಿ 14ರಿಂದ ಆರಂಭಗೊಳ್ಳಲಿದ್ದು, ಭಕ್ತಸಾಗರವೇ ಹರಿದುಬರುತ್ತಿದೆ.





ಭಕ್ತರು ಕಾಲ್ನಡಿಗೆಯಲ್ಲಿ ಕ್ಷೇತ್ರಕ್ಕೆ ಬರುವುದು ಹರಕೆ ಹಾಗೂ ವಾಡಿಕೆಯಾಗಿದೆ. ರಾಮನಗರ, ಚನ್ನಪಟ್ಟಣ, ಮಾಗಡಿ ಹಾಗೂ ಬೆಂಗಳೂರು ತಾಲೂಕುಗಳಿಂದ ಸಹಸ್ರಾರು ಮಂದಿ ಪಾದಯಾತ್ರೆ ಮೂಲಕ ಕಾವೇರಿ ನದಿ ದಾಟಿಕೊಂಡು ಬರುತ್ತಿದ್ದಾರೆ. ಮೈಸೂರು, ಮಂಡ್ಯ ಭಾಗಗಳಿಂದಲೂ ಸಾವಿರಾರು ಭಕ್ತರು ಕಾಲ್ನಡಿಗೆಯಲ್ಲಿ ಆಗಮಿಸುತ್ತಿದ್ದಾರೆ.

ಪಾದಯಾತ್ರಿಕರಿಗೆ ಯಾವುದೇ ತೊಂದರೆಯಾಗದಂತೆ ಚಾಮರಾಜನಗರ ಜಿಲ್ಲಾಡಳಿತ ವತಿಯಿಂದ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದೆ.

ಪೊಲೀಸ್ ಇಲಾಖೆ, ಅರಣ್ಯ ಇಲಾಖೆ, ಎಸ್‌ಡಿಆರ್‌ಎಫ್ ತಂಡ, ಕಂದಾಯ ಇಲಾಖೆ ಹಾಗೂ ಅಗ್ನಿಶಾಮಕ ದಳದ ಸಿಬ್ಬಂದಿ ಕಾವೇರಿ ನದಿ ದಾಟುವ ಸ್ಥಳವಾದ ಬಸವ ನಕಡ ಎಂಬಲ್ಲೇ ಮೊಕ್ಕಾಂ ಹೂಡಿ, ಪಾದಯಾತ್ರಿಕರಿಗೆ ಸಕಲ ಸಹಕಾರ ನೀಡುತ್ತಿದ್ದಾರೆ.

**ಕುಡಿಯುವ ನೀರು, ಬೆಳಕಿನ ವ್ಯವಸ್ಥೆ**

ಪಾದಯಾತ್ರಿಕರಿಗೆ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ ಶಾಗ್ಯ, ಬಂಡಳ್ಳಿ ಎಲ್ಲೆಮಾಳ, ಕೌದಳ್ಳಿ ಹಾಗೂ ಮಲೆಮಹದೇಶ್ವರ ಬೆಟ್ಟ ಗ್ರಾಮ ಪಂಚಾಯತ್ ವ್ಯಾಪ್ತಿಯ ಹಲವು ಗ್ರಾಮಗಳಲ್ಲಿ ಕುಡಿಯುವ ನೀರಿನ ಸೌಲಭ್ಯ ಹಾಗೂ ಅಗತ್ಯವಿರುವ ಕಡೆ ಬೆಳಕಿನ ವ್ಯವಸ್ಥೆ ಕಲ್ಪಿಸಲಾಗಿದೆ.

### ನಿರಂತರ ಜಾಗೃತಿ

**ಕಾವೇರಿ ನದಿ ದಾಟಿದ ನಂತರ ಬಸವನಕಡ ಸ್ಥಳಕ್ಕೆ ಲಕ್ಷಾಂತರ ಮಂದಿ ಭಕ್ತಾದಿಗಳು ಆಗಮಿಸುವ ಹಿನ್ನೆಲೆಯಲ್ಲಿ ಪೊಲೀಸರು ಮೈಕ್ ಮೂಲಕ ಯಾತ್ರಿಕರಿಗೆ ಜಾಗೃತಿ ಮೂಡಿಸುತ್ತಿದ್ದಾರೆ. ಪಾದಯಾತ್ರಿಕರು ಅಗತ್ಯ ಸುರಕ್ಷತಾ ಕ್ರಮಗಳನ್ನು ಪಾಲನೆ ಮಾಡಬೇಕು. ಚಿನ್ನಾಭರಣ, ಮಾಂಗಲ್ಯ ಸರ ಹಾಗೂ ಇನ್ನಿತರ ಬೆಲೆಬಾಳುವ ವಸ್ತುಗಳ ಬಗ್ಗೆ ನಿಗಾ ವಹಿಸಬೇಕು. ರಸ್ತೆಯ ಮಧ್ಯಭಾಗದಲ್ಲಿ ಚಲಿಸದೆ ರಸ್ತೆ ಬದಿಯ ಫುಟ್‌ಪಾತ್‌ನಲ್ಲಿ ಸಾಲಾಗಿ ತೆರಳಬೇಕು. ಕಾಲುದಾರಿ ಬಿಟ್ಟು ಅರಣ್ಯದೊಳಗಡೆ ವಿಶ್ರಾಂತಿಗೆ ತೆರಳಬಾರದು. ಬೆಳಕಿನ ವೇಳೆ ಮಾತ್ರ ಪಾದಯಾತ್ರೆ ಮಾಡಬೇಕು. ವನ್ಯಪ್ರಾಣಿಗಳು ಕಂಡರೆ ಫೋಟೋ ತೆಗೆಯಲು ಹೋಗಬಾರದು. ಅರಣ್ಯ ಪ್ರದೇಶದಲ್ಲಿ ಮೊಬೈಲ್ ಹಾಗೂ ಏರ್?ಫೋನ್ ಬಳಸಬಾರದು ಎಂದು ತಿಳಿಸುತ್ತಿದ್ದಾರೆ.**

### ಚಿರತೆ ಭಯದ ನಡುವೆಯೂ ಕಾಲ್ನಡಿಗೆ

**ಮಂಗಳವಾರವಷ್ಟೇ ಚಿರತೆಯೊಂದು ಬಾಲಕನ ಮೇಲೆ ಎಗರಿತ್ತು. ಚಿರತೆ ಭೀತಿ ನಡುವೆಯೂ ಕ್ಷೇತ್ರಕ್ಕೆ ಬರುವ ಪಾದಯಾತ್ರಿಕರ ಸಂಖ್ಯೆ ಹೆಚ್ಚಿದೆ. ಅರಣ್ಯ ಇಲಾಖೆ ಕೂಡ ಭಕ್ತರ ಸುರಕ್ಷತೆ ಮೇಲೆ ನಿಗಾ ವಹಿಸಿದೆ. ಚಿರತೆ ಸೆರೆಗೂ ಕಾರ್ಯಾಚರಣೆ ನಡೆದಿದೆ.**

### ದ್ವಿಚಕ್ರ, ತ್ರಿಚಕ್ರ ವಾಹನಕ್ಕೆ ನಿಬಂಧ

**ಜಾತ್ರಾ ಮಹೋತ್ಸವ ಪ್ರಯುಕ್ತ ಐದು ದಿನಗಳ ಕಾಲ ಮಲೆಮಹದೇಶ್ವರ ಬೆಟ್ಟಕ್ಕೆ ಸಾವಿರಾರು ವಾಹನಗಳು ಹಾಗೂ 350ಕ್ಕೂ ಹೆಚ್ಚು ಕೆಎಸ್‌ಆರ್‌ಟಿಸಿ ಬಸ್‌ಗಳು ಸಂಚರಿಸಲಿವೆ. ಹೀಗಾಗಿ, ಸುಗಮ ಸಂಚಾರಕ್ಕೆ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ ಫೆಬ್ರವರಿ 13ರ ಬೆಳಗ್ಗೆ 6 ಗಂಟೆಯಿಂದ ಫೆ.18ರ ಸಂಜೆ 6 ಗಂಟೆಯವರೆಗೆ ದ್ವಿಚಕ್ರ ಹಾಗೂ ತ್ರಿಚಕ್ರ ವಾಹನಗಳ ಸಂಚಾರಕ್ಕೆ ನಿರ್ಬಂಧ ವಿಧಿಸಿ ಜಿಲ್ಲಾಧಿಕಾರಿ ಶ್ರೀರೂಪಾ ಆದೇಶಿಸಿದ್ದಾರೆ.**

### ಚಿರತೆ ದಾಳಿ ಸ್ಥಳಕ್ಕೆ ಶಾಸಕ ಭೇಟಿ

**ಮಲೆಮಹದೇಶ್ವರ ಬೆಟ್ಟದ ತಪ್ಪಲಾದ ತಾಳುಬೆಟ್ಟ ಮಾರ್ಗದಲ್ಲಿ ಬಾಲಕನ ಮೇಲೆ ಚಿರತೆ ದಾಳಿ ನಡೆಸಿದ ಸ್ಥಳಕ್ಕೆ ಶಾಸಕ ಎಂ.ಆರ್.ಮಂಜುನಾಥ್ ಭೇಟಿ ನೀಡಿ ಅಧಿಕಾರಿಗಳಿಂದ ಮಾಹಿತಿ ಪಡೆದರು. ಬಳಿಕ ಮಾತನಾಡಿದ ಅವರು, ಮುಂದೆ ಇಂತಹ ಘಟನೆ ಮರುಕಳಿಸಿದಂತೆ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳಬೇಕು. ತಾಳುಬೆಟ್ಟದಿಂದ ಮಲೆಮಹದೇಶ್ವರ ಬೆಟ್ಟದವರೆಗೆ ಸುರಕ್ಷತೆಗಾಗಿ ಹೆಚ್ಚಿನ ಸಿಬ್ಬಂದಿ ನಿಯೋಜಿಸಿ ಎಂದು ಅಧಿಕಾರಿಗಳಿಗೆ ಸೂಚಿಸಿದರು.**

**ಪಾದಯಾತ್ರಿಕರಿಗೆ ಕುಡಿಯುವ ನೀರು ಸೇರಿದಂತೆ ಮೂಲಸೌಕರ್ಯಕ್ಕೆ ಅಗತ್ಯ ಕ್ರಮ ಕೈಗೊಳ್ಳಬೇಕು. ಯಾತ್ರಿಕರಿಗೆ ಜಾಗೃತಿ ಮೂಡಿಸಿ, ಎಲ್ಲಾ ಇಲಾಖೆಗಳು ಸಮನ್ವಯದಿಂದ ಕಾರ್ಯ ನಿರ್ವಹಿಸಿ ಸುರಕ್ಷತೆಗೆ ಶ್ರಮ ವಹಿಸಬೇಕು. ಚಿರತೆ ದಾಳಿ ಪ್ರಕರಣ ಈ ಬಾರಿ ಮಾತ್ರ ಆಗಿದೆ. ಇನ್ಮುಂದೆ ಈ ರೀತಿ ಘಟನೆ ಆಗದಂತೆ ಎಚ್ಚರ ವಹಿಸಿ ಎಂದರು. ಚಾಮರಾಜನಗರ ಸಿಸಿಎಫ್ ಮಾಲತಿ ಪ್ರಿಯಾ, ಮಲೆಮಹದೇಶ್ವರ ವನ್ಯಜೀವಿಧಾಮದ ಡಿಸಿಎಫ್ ಭಾಸ್ಕರ್ ಸೇರಿದಂತೆ ಇತರರು ಹಾಜರಿದ್ದರು.**



# ವಿವಿ ಅತಿಥಿ ಉಪನ್ಯಾಸಕರ ತರಬೇತಿಗೆ ಚಾಲನೆ

ಮೈಸೂರು: ನಗರದ ಮಾನಸಗಂಗೋತ್ರಿಯ ಮಾಳವೀಯ ಮಿಷನ್ ಶಿಕ್ಷಕರ ತರಬೇತಿ ಕೇಂದ್ರದಲ್ಲಿ(ಎಂಎಂಟಿಟಿಸಿ) ರೂಸಾ 2.0 ಪ್ರಾಯೋಜಿತದಲ್ಲಿ ಮೈಸೂರು ವಿವಿಯ ಅತಿಥಿ ಉಪನ್ಯಾಸಕರಿಗೆ 'ಪರಿಣಾಮಕಾರಿ ಬೋಧನೆಗೆ ಅಗತ್ಯವಾದ ಕೌಶಲಗಳು ಕುರಿತ 2 ದಿನಗಳ ವಿಚಾರಸಂಕಿರಣಕ್ಕೆ ಗುರುವಾರ ಚಾಲನೆ ದೊರೆಯಿತು.

ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್ ಮಾತನಾಡಿ, ಶಿಕ್ಷಕ ವೃತ್ತಿಯಲ್ಲಿ ಸಿಗುವ ತೃಪ್ತಿ ಮತ್ತಾ್ಯವ ವೃತ್ತಿಯಲ್ಲೂ ಸಿಗದು. ಅದೊಂದು ಶ್ರೇಷ್ಠ ವೃತ್ತಿ. ಆರ್ಥಿಕವಾಗಿ ಹೆಚ್ಚು ಅನುಕೂಲವಿಲ್ಲವಾದರೂ ಮನಸ್ಸಿನಲ್ಲಿ ಹೃದಯ ವಿಶಾಲತೆಯ ಶ್ರೀಮಂತರು. ಈ ವಿಶಾಲತೆಯನ್ನು ಪ್ರತಿಯೊಬ್ಬರಲ್ಲೂ ಬಿತ್ತುವುದೇ ಶಿಕ್ಷಣದ ಮೂಲ ಉದ್ದೇಶವಾಗಿದೆ. ಎಂಎಂಟಿಟಿಸಿ ನಿರ್ದೇಶಕರಾದ ಪ್ರೊ.ಎಚ್.ಪಿ.ಜ್ಯೋತಿ, ಸಂಯೋಜಕ ಡಾ.ಎಲ್.ನಂಜುಂಡಸ್ವಾಮಿ ಇನ್ನಿತರರು ಉಪಸ್ಥಿತರಿದ್ದರು.




# ವಿದ್ಯುತ್ ಖಾಸಗೀಕರಣ ವಿರೋಧಿಸಿ ಪ್ರತಿಭಟನೆ

ಚಾಮರಾಜನಗರ, ವಿದ್ಯುತ್ ಖಾಸಗೀಕರಣ ವಿರೋಧಿಸಿ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನೌಕರರ ಸಂಘದ ಆಶ್ರಯದಲ್ಲಿ ನೌಕರರು, ಅಧಿಕಾರಿಗಳು ನಗರದಲ್ಲಿ ಗುರುವಾರ ಪ್ರತಿಭಟನೆ ನಡೆಸಿದರು.



ನಗರದ ಸೆಸ್ಕ್ ಕಚೇರಿಯ ಮುಂಭಾಗ ಜಮಾಯಿಸಿದ ಅಧಿಕಾರಿಗಳು ಹಾಗೂ ನೌಕರರು, 'ವಿದ್ಯುತ್ ಕಾಯ್ದೆಗೆ ತಿದ್ದುಪಡಿ ಬೇಡ, ವಿದ್ಯುತ್ ಕ್ಷೇತ್ರದಲ್ಲಿ ಖಾಸಗೀಕರಣ ಬೇಡ, ಕಾರ್ಮಿಕರ ಒಗ್ಗಟ್ಟು ಚಿರಾಯುವಾಗಲಿ' ಎಂಬ ಘೋಷಣೆಗಳನ್ನು ಕೂಗಿದರು.

ನೌಕರರ ಸಂಘದ ಉಪಾಧ್ಯಕ್ಷ ಎನ್. ಮಹೇಶ್ ಅವರು ಮಾತನಾಡಿ, ಕೇಂದ್ರ ಸರ್ಕಾರ'ವಿದ್ಯುತ್ ಕ್ಷೇತ್ರವನ್ನು ಖಾಸಗೀಕರಣ ಮಾಡಲು ಹೊರಟಿರುವುದರ ವಿರುದ್ಧ ಆಲ್ ಇಂಡಿಯಾ ಇಂಜಿನಿಯರ್ ಒಕ್ಕೂಟ, ಸಂಘ, ಸಂಸ್ಥೆಗಳ ಒಂದು ದಿನದ ಮುಷ್ಕರ ಮಾಡಿರುವುದನ್ನು ಬೆಂಬಲಿಸಿ ನಾವು ಇಂದು ಪ್ರತಿಭಟನೆ ಮಾಡುತ್ತಿದ್ದೇವೆ. ವಿದ್ಯುತ್ ಸುಧಾರಣೆ ಕಾಯ್ದೆ 2026 ಗ್ರಾಹಕರಿಗೆ, ನೌಕರರ ವರ್ಗದವರಿಗೆ ಮಾರಕವಾಗಲಿದ್ದು, ಇದು ಕಾರ್ಮಿಕ ವಿರೋಧಿ ನೀತಿಯಾಗಿದೆ. ರೈತರು, ಜನಸಾಮಾನ್ಯರಿಗೆ ಹೊರೆಯಾಗಲಿದೆ. ಕೃಷಿ ಉದ್ದೇಶಕ್ಕೆ ರೈತರಿಗೆ ನೀಡುತ್ತಿರುವ ಉಚಿತ ವಿದ್ಯುತ್‌ಗೆ ತೊಂದರೆ ಉಂಟಾಗುವ ಸಾಧ್ಯತೆ ಇದೆ. ಬಡವರಿಗೆ ನೀಡುತ್ತಿರುವ ಭಾಗ್ಯಜ್ಯೋತಿ, ಕುಟೀರ ಜ್ಯೋತಿ ಉಚಿತ ವಿದ್ಯುತ್‌ಗೆ ಕಡಿವಾಣ ಬೀಳುವ ಸಾಧ್ಯತೆ' ಎಂದು ಕಳವಳ ವ್ಯಕ್ತಪಡಿಸಿದರು. ವಿದ್ಯುತ್ ಕ್ಷೇತ್ರದಲ್ಲಿ ಕೆಲಸ ನಿರ್ವಹಿಸುತ್ತಿರುವ 60 ಸಾವಿರಕ್ಕೂ ಹೆಚ್ಚು ನೌಕರರು ಹಾಗೂ ಈ ಸಂಸ್ಥೆ ಕಟ್ಟಿ ಬೆಳಸಿದ 40 ಸಾವಿರ ಪಿಂಚಣಿದಾರರಿಗೆ ತೊಂದರೆಯಾಗಲಿದೆ. ಆದ್ದರಿಂದ ಕೇಂದ್ರ ಸರ್ಕಾರ ಯಾವುದೇ ಕಾರಣಕ್ಕೂ ವಿದ್ಯುತ್ ಖಾಸಗೀಕರಣ ಮಾಡಬಾರದು' ಆಗ್ರಹಿಸಿದರು ಕಾರ್ಯನಿರ್ವಾಹಕ ಇಂಜಿನಿಯರ್ ಪ್ರದೀಪ್, ಎಇಇ ಮಹೇಶ್, ನೌಕರರ ಸಂಘದ ಅಧ್ಯಕ್ಷ ಮುರುಳೀಕೃಷ್ಣಸ್ವಾಮಿ, ಕಾರ್ಯದರ್ಶಿ ಸಿದ್ದರಾಜಪ್ಪ, ಎಸ್ ಸಿ ಎಸ್ ಟಿ ಕಲ್ಯಾಣ ಸಂಸ್ಥೆ ಕೇಂದ್ರ ಸಮಿತಿ ಸದಸ್ಯ ಮಂಜುನಾಥ್, ಅಧ್ಯಕ್ಷ ಪ್ರಶಾಂತ್, ಕಾರ್ಯದರ್ಶಿ ಸೋಮೇಶ್ವರ, ಎಲ್ಲ ಸಂಘ- ಸಂಸ್ಥೆಗಳ ಪದಾಧಿಕಾರಿಗಳು, ನೌಕರರ ಬಾಂಧವರು ಭಾಗವಹಿಸಿದ್ದರು.

# ವಿದ್ಯುತ್ ತಿದ್ದುಪಡಿ ಕಾಯ್ದೆಗೆ ವಿರೋಧ




ಗುಂಡ್ಲುಪೇಟೆ:-ಕೇಂದ್ರ ಸರ್ಕಾರದ ಕಾರ್ಮಿಕ ವಿರೋಧಿ ವಿದ್ಯುತ್ ತಿದ್ದುಪಡಿ ಕಾಯ್ದೆ ಹಾಗೂ ಖಾಸಗೀಕರಣ ವಿರೋಧಿಸಿ ಕರ್ನಾಟಕ ವಿದ್ಯುತ್ ಮಂಡಳಿಯ ನೌಕರರ ಸಂಘಗಳ ಒಕ್ಕೂಟದ ಕರೆಯ ಮೇರೆಗೆ ಇಲ್ಲಿನ ಚೆಸ್ಕಾಂ ಕಚೇರಿ ಎದುರು ಸಾಂಕೇತಿಕವಾಗಿ ಪ್ರತಿಭಟನೆ ನಡೆಸಲಾಯಿತು.

ಪಟ್ಟಣದ ಸಹಾಯಕ ಕಾರ್ಯಪಾಲಕ ಅಭಿಯಂತರರ ಕಚೇರಿ ಎಂದರು ಕೇಂದ್ರ ಸರ್ಕಾರ ದ ವಿರುದ್ಧ ದಿಕ್ಕಾರ ಕೂಗಿ ಪ್ರತಿಭಟನೆ ನಡೆಸಿದರು. ನಂತರ ನೌಕರರ ಸಂಘದ ಅಧ್ಯಕ್ಷ ಶರಣಬಸಪ್ಪ ಚಿನ್ನಾಪುರ ಮಾತನಾಡಿ, ಕೇಂದ್ರ ಸರ್ಕಾರದ ತಿದ್ದುಪಡಿ ಕಾಯ್ದೆ ವಿರುದ್ಧ ಅಸಮಾಧಾನ ಇದೆ ಕಾಯ್ದೆ ವಾಪಸ್ ಪಡೆಯಬೇಕು ಇದರಿಂದ ನೌಕರರಿಗೆ ತೂಂದರೆ ಆಗಲಿದೆ ಯಾವುದೇ ಕಾರಣಕ್ಕೂ ಖಾಸಗೀಕರಣ ಬೇಡವೇ ಬೇಡ ಎಂದರು

ವಿದ್ಯುತ್ ಕ್ಷೇತ್ರವನ್ನು ಖಾಸಗೀಕರಣಗೊಳಿಸುವುದರಿಂದ ನೌಕರರು ಸಂಕಷ್ಟಕ್ಕೆ ಒಳಗಾಗಲಿದ್ದಾರೆ. ಸಂಘಟನೆಯ ಮೂಲಕ ಒಗ್ಗಟ್ಟಾಗಿ ಯಾವುದೇ ಕಾರಣಕ್ಕೂ ವಿದ್ಯುತ್ ಕ್ಷೇತ್ರವನ್ನು ಖಾಸಗೀಕರಣ ಮಾಡಲು ಅವಕಾಶ ನೀಡಬಾರದು ಎಂದು ತಿಳಿಸಿದರುಸಹಾಯಕ ಕಾರ್ಯ ಪಾಲಕ ಅಭಿಯಂತರರು ಸಂಧ್ಯಾ ಮತ್ತುಟೌನ್ ಶಾಖೆಯ ಸಹಾಯಕ ಇಂಜಿನಿಯರ್ ಹರ್ಷವರ್ಧನ್ ಮಾಡ್ರಹಳ್ಳಿ ಶಾಖೆಯ ಶಾಖಾಧಿಕಾರಿ ನಾಗೇಂದ್ರ ಹಂಗಳ ಶಾಖೆಯ ಶಾಖಧಿಕಾರಿ ಮನುರವರು ಬೊಮ್ಮಲಾಪುರ ಶಾಖಾಧಿಕಾರಿ ಸೋಮಣ್ಣ ಹಾಗೂ ಸಂಘದ ನಿರ್ದೇಶಕರುಗಳು ಎಲ್ಲಾ ಉಪ ವಿಭಾಗದ ನೌಕರರು ಹಾಜರಿದ್ದರು

# ಅರಣ್ಯ ಹಕ್ಕು ಅನುಷ್ಠಾನಕ್ಕೆ ಕಾರ್ಯಾಗಾರ

ಮೈಸೂರು: ಅರಣ್ಯದಂಚಿನಲ್ಲಿರುವ ಆದಿವಾಸಿಗಳಿಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಿಕೊಡಲು ಅರಣ್ಯ ಹಕ್ಕು ಕಾಯ್ದೆ ನಿಯಮದಂತೆ ಹಕ್ಕುಪತ್ರಗಳನ್ನು ನೀಡಲು ಎಲ್ಲಾ ಇಲಾಖೆಗಳು ಜಂಟಿಯಾಗಿ ಕಾಯ್ದೆಯ ಬಗ್ಗೆ ತಿಳಿದುಕೊಂಡು ನಿಯಮಾನುಸಾರ ಅನುಷ್ಠಾನಗೊಳಿಸಬೇಕು ಎಂದು ಉಪ ಅರಣ್ಯ ಸಂರಕ್ಷಣಾಧಿಕಾರಿ ಪರಮೇಶ್ ತಿಳಿಸಿದರು.



ಜಿಲ್ಲಾ ಪಂಚಾಯತ್ ಮೈಸೂರು ಮತ್ತು ಪರಿಶಿಷ್ಠ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯಲ್ಲಿ ನಡೆದ ಅರಣ್ಯ ಹಕ್ಕು ಅನುಷ್ಠಾನಕ್ಕೆ ಸಂಬಂಧಿಸಿದ ಅಧಿಕಾರಿ ಸಿಬ್ಬಂದಿಗಳಿಗೆ ಒಂದು ದಿನದ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದರು. ಸರಗೂರು ತಾಲ್ಲೂಕು ತಹಸೀಲ್ದಾರ್ ಮೋಹನ್‌ಕುಮಾರಿ ಮಾತನಾಡಿ ಸರಗೂರು ಹಾಗೂ ಹೆಚ್.ಡಿ. ಕೋಟೆ ತಾಲ್ಲೂಕುಗಳಲ್ಲಿ ಹೆಚ್ಚು ಅರಣ್ಯ ವಾಸಿಗಳು ವಾಸವಿದ್ದು ಹುಲಿ ದಾಳಿಗೆ ಆಗಾಗ್ಗೆ ಒಳಗಾಗುತ್ತಿದ್ದು ಆ ಜನರಿಗೆ ರಕ್ಷಣೆ ನೀಡಲು ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಿಕೊಡಲು ಅರಣ್ಯ ಹಕ್ಕು ಕಾಯ್ದೆ ನಿಯಮವನ್ನು ಗ್ರಾಮಮಟ್ಟದಿಂದ ಅನುಷ್ಠಾನಗೊಳಿಸಬೇಕು ಎಂದರು.

ಪರಿಶಿಷ್ಠ ವರ್ಗಗಳ ಕಲ್ಯಾಣ ಇಲಾಖೆಯ ಯೋಜನಾ ಸಮನ್ವಯ ಅಧಿಕಾರಿ ಎಂ.ಕೆ. ಮಲ್ಲೇಶ್ ಮಾತನಾಡಿ ಮೈಸೂರು ಜಿಲ್ಲೆಯ ಡಿ.ಬಿ. ಕುಪ್ಪೆ ಗ್ರಾಮ ಪಂಚಾಯ್ತಿಯಲ್ಲಿ ಅರಣ್ಯ ಹಕ್ಕು ಕ್ಲೇಮುಗಳು ಬಾಕಿ ಇದ್ದು ಸದರಿ ಕ್ಲೇಮುಗಳನ್ನು ಇತ್ಯರ್ಥಪಡಿಸಬಲು ಯಾವ ದಾಖಲೆಗಳು ಅಗತ್ಯ ಇವೆ. ಪಿ.ಡಿ.ಓ. ಗಳು ಹಾಗೂ ಅರಣ್ಯ ಇಲಾಖೆ ಅಧಿಕಾರಿಗಳ ಕಾರ್ಯಗಳು ಏನು ಎಂಬುದರ ಬಗ್ಗೆ ತಿಳಿಸಿದರು. ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯ ಉಪ ನಿರ್ದೇಶಕಿ ಹೆಚ್.ಎಸ್. ಗಿರಿಜಾಂಬ ಅಧ್ಯಕ್ಷತೆ ವಹಿಸಿ ಮಾತನಾಡಿ ಪಿಡಿಓಗಳು ಹಾಗೂ ಅರಣ್ಯ ಇಲಾಖೆಯ ಅಧಿಕಾರಿಗಳಿಗೆ ಇಂತಹ ತರಬೇತಿಗಳ ಅವಶ್ಯಕತೆ ಇದ್ದು ಇದರಿಂದ ಬುಡಕಟ್ಟು ಜನರಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಅನುಕೂಲವಾಗುತ್ತದೆ ಎಂದರು. ಸಮಾರಂಭದಲ್ಲಿ ಹುಣಸೂರು ತಹಸೀಲ್ದಾರ್ ಮಂಜುನಾಥ್, ಮಳವಳ್ಳಿ ತಹಸೀಲ್ದಾರ್ ಲೋಕೇಶ್, ಪಾಂಡವಪುರ ತಹಸೀ ಲ್ದಾರ್ ಪ್ರಕಾಶ್, ಭೂದಾಖಲೆಗಳ ಜಂಟಿ ನಿರ್ದೇಶಕ ರಾದ ವಿರೂಪಾಕ್ಷ, ರಮ್ಯ, ಇಓ ಪ್ರೇಮ್ ಕುಮಾರ್, ಸಂಪನ್ಮೂಲ ವ್ಯಕ್ತಿಗಳಾದ ವೈ. ಗಿರಿರಾವ್, ಪ್ರಿಯಾಂಕ್, ಕೃಷ್ಣಮೂರ್ತಿ, ದಿನೇಶ್ ಹಾಜರಿದ್ದರು.

## ಸಂಕ್ಷಿಪ್ತ ಸುದ್ದಿ

### ಫೆ.14ರ ಹನುಮಾನ್ ಚಾಲೀಸ್ ಯಶಸ್ವಿಗೆ ಕರೆ

**ಮೈಸೂರು:** ಹನುಮಾನ್ ಚಾಲೀಸಾ ಪಾರಾಯಣ ಸರ್ವ ಸಂಕಷ್ಟ ಪರಿಹಾರ ಮಾಡುತ್ತದೆ. ಹೀಗಾಗಿ ಫೆ. 14 ರಂದು ಲೋಕ ಕಲ್ಯಾಣಾರ್ಥವಾಗಿ ಗಣಪತಿ ಸಚ್ಚಿದಾನಂದ ಶ್ರೀಗಳು ನಗರದ ಮಹಾರಾಜ ಕಾಲೇಜು ಮೈದಾನದಲ್ಲಿ ಆಯೋಜಿಸಿರುವ ಹನುಮಾನ್ ಚಾಲೀಸಾ ಪರಾಯಣ ಮಹಾ ಯಜ್ಞದಲ್ಲಿ ನಗರದ ಜನತೆ ಶ್ರದ್ಧಾ ಭಕ್ತಿಯಿಂದ ಪಾಲ್ಗೊಳ್ಳುವ ಮೂಲಕ ಯಶಸ್ವಿಗೊಳಿಸಬೇಕೆಂದು ಡಿಟಿಎಸ್ ಪ್ರತಿಷ್ಠಾನದ ಅಧ್ಯಕ್ಷ ಡಿ.ಟಿ. ಪ್ರಕಾಶ್ ಮನವಿ ಮಾಡಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಶ್ರೀಗಳು ಸುಮಾರು 10 ವರ್ಷ ಹಿಂದೆಯೂ ಹನುಮಾನ್ ಚಾಲೀಸಾ ಪಾರಾಯಣ ನಗರದಲ್ಲಿ ಆಯೋಜಿಸಿದ್ದರು. ಅದರಲ್ಲಿ ಪಾಲ್ಗೊಂಡವರಿಗೆ ಸುಕೃತಗಳು ಲಭಿಸಿವೆ. ಹೀಗಾಗಿ ಲೋಕ ಶಾಂತಿ, ಸುಭಿಕ್ಷೆಯಿಂದ ಇರಲೆಂದು ಈ ಬಾರಿಯೂ ಆಯೋಜಿಸಿದ್ದು, ಬೆಳಿಗ್ಗೆ 9 ರಿಂದ ಮಧ್ಯಾಹ್ನ 12.30 ರವರೆಗೆ ನಡೆಯಲಿದೆ. ಹನುಮಂತ ತನ್ನ ಶ್ರದ್ಧಾ ಭಕ್ತಿಯಿಂದ ಶ್ರೀರಾಮನನ್ನು ಸೇವಿಸಿ ಬೃಹತ್ ಶಕ್ತಿ ಹಾಗೂ ಶಕ್ತಿಯುತ ಪುಣ್ಯಫಲ ಪಡೆದಿದ್ದಾನೆ. ಹೀಗಾಗಿ ಇದರ ಪಾರಾಯಣ ಸಕಲರಿಗೂ ಒಳಿತುಂಟು ಮಾಡುತ್ತದೆ ಎಂದು ಮಾಹಿತಿ ನೀಡಿದರು. ಮಾಜಿ ಮೇಯರ್ ಶಿವಕುಮಾರ್, ತಾಲೂಕು ಬ್ರಾಹ್ಮಣರ ಸಂಘದ ಅಧ್ಯಕ್ಷ ಎಸ್.ಆರ್. ಗೋಪಾಲ್‌ರಾವ್, ಭೈರತಿ ಲಿಂಗರಾಜು, ಸಂಜಯ್ ಬಾಬು, ಪುರಸಭೆ ಮಾಜಿ ಸದಸ್ಯ ಬಿ.ವಿ.ಮಂಜುನಾಥ್ ಹಾಜರಿದ್ದರು.

### ಭಕ್ತಿ ಸಾಧನ ಕಾರ್ಯಕ್ರಮ

**ಮೈಸೂರು:** ರಾಜರಾಜೇಶ್ವರಿ ಬಡಾವಣೆಯಲ್ಲಿನ ಶ್ರೀ ಗುರು ಧನ್ನೂರ್ ಪ್ರತಿಷ್ಠಾನದ ವತಿಯಿಂದ ಹೆಬ್ಬಾಳ್‌ನಲ್ಲಿನ ಸ್ಕ್ಯಾನ್ ರೇ ಟೆಕ್ನಾಲಜೀಸ್ ಸಭಾಂಗಣದಲ್ಲಿ ಫೆ. 14 ರಂದು ಸಂಜೆ 4 ರಿಂದ 6.30 ರವರೆಗೆ ಭಕ್ತಿ ಸಾಧನ–ಭಕ್ತಿಯ ಮೂಲಕ ರಾಷ್ಟ್ರೀಯ ಭಾವೈಕ್ಯತೆ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಫೌಂಡೇಷನ್ ಕಾರ್ಯದರ್ಶಿ ಕೆ.ಪಿ.ಲಕ್ಷ್ಮಿ ವಲ್ಲಭ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಪ್ರಸ್ತುತ ಯಾಂತ್ರಿಕ ಜೀವನ ಶೈಲಿಯಲ್ಲಿ ಮುಳುಗಿ ಹೋಗಿರುವ ಯುವ ಸಮೂಹ, ವಿದ್ಯಾರ್ಥಿಗಳು ಹಾಗೂ ಜನಸಾಮಾನ್ಯರಿಗೆ ಆಧ್ಯಾತ್ಮ ಹಾಗೂ ಭಕ್ತಿ ಭಾವ ಮೂಡಿಸುವ ಯತ್ನ ಇದಾಗಿದೆ. ವಿದುಷಿ ದ್ಯುತಿ ಜಹಗಿರ್ದಾರ್ ಅವರಿಂದ ಅಭಂಗ ಶೈಲಿಯ ಭಜನಾ ಪ್ರಸ್ತುತಿ, ಪಂ. ರಮೇಶ್ ಧನ್ನೂರ ಅವರ ಶಿಷ್ಯರಿಂದ ಶಾಸ್ತ್ರೀಯ ಸಂಗೀತ ಕಾರ್ಯಕ್ರಮವಿದೆ. ಎಲ್ಲರಿಗೂ ಉಚಿತ ಪ್ರವೇಶವಿದೆ ಎಂದು ಮಾಹಿತಿ ನೀಡಿದರು. ಆತ್ಮಾರಾಂ ನಾಯಕ್, ಎಂ.ನರಹರಿ ಭಟ್, ಸುಜಯೇಂದ್ರ, ಪುನೀತ್ ಹಾಜರಿದ್ದರು.

### ಫೆ.14ಕ್ಕೆ ಲಯನ್ಸ್ ಸಮ್ಮಿಲನ

**ಮೈಸೂರು:** ಲಯನ್ಸ್ ಇಂಟರ್ ನ್ಯಾಷನಲ್ ಜಿಲ್ಲೆ 317 ಜಿ ವತಿಯಿಂದ ಪ್ರಾದೇಶಿಕ ಸಮ್ಮಿಲನ ಕಾರ್ಯಕ್ರಮ ಫೆ.14ರ ಬೆಳಗ್ಗೆ 8ಕ್ಕೆ ವಿಶ್ವೇಶ್ವರ ನಗರದ ಎಂಬಿಸಿಟಿ ಸಭಾಂಗಣದಲ್ಲಿ ನಡೆಯಲಿದೆ ಎಂದು ಅಧ್ಯಕ್ಷತೆ ವಹಿಸಲಿರುವ ಲಯನ್ ಸತೀಶ್ ತಿಳಿಸಿದರು. ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಲಯನ್ ಎನ್.ಮೋಹನ್ ಕುಮಾರ್, ಲಯನ್ ಡಾ.ಎನ್. ಕೃಷ್ಣೇಗೌಡ ಅತಿಥಿಗಳಾಗಿರುವರು. ಡಾ.ಆರ್.ಸುಮಾ ಎಳವಿನ ಬಳುಕೇ ಅರಿವಿನ ಬೆಳಕು ಶೀರ್ಷಿಕೆ ಅಡಿಯಲ್ಲಿ ಮಕ್ಕಳ ಶಿಕ್ಷಣ ಕುರಿತು ಮಾತನಾಡುವರು, ಇದೇ ವೇಳೆ 27 ಮಂದಿ ವಿಶೇಷ ಚೇತನರಿಗೆ ಕೃತಕ ಕಾಲು, ವ್ಹೀಲ್ ಚೇರ್, ವಾಕಿಂಗ್ ಸ್ಟಿಕ್ ನೀಡಲಾಗುವುದೆಂದರು. ಪದಾಧಿಕಾರಿಗಳಾದ ಎನ್. ಮಹದೇವಸ್ವಾಮಿ, ಹೇಮಂತ್ ಬನ್ಸಾಲಿ ಹಾಜರಿದ್ದರು.

### ಬಿ.ಗುಪ್ತ ಮಿಸ್ ಪ್ಲಸ್ ಸೈಜ್ ಇಂಡಿಯಾ ಗೆಲುವು

**ಮೈಸೂರು:** ಚಂಡೀಗಢದ ಟ್ರೆಂಟಿಸಿಟಿ ಪ್ರದೇಶದಲ್ಲಿ ನಡೆದ ಮಾವೆನ್ ಮಿಸ್ ಪ್ಲಸ್ ಸೈಜ್ ಇಂಡಿಯಾ ಅಂತಿಮ ಸುತ್ತಿನಲ್ಲಿ ತಾವು ವಿಜೇತರಾಗಿರುವುದಾಗಿ ನಗರದ ಅಂಜಲಿ ಬಿ.ಗುಪ್ತಾ ತಿಳಿಸಿದರು. ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ತಾವು ನಗರದ ವೈಫಲ್ಟೋನಿ ಪ್ರೇವೈಟ್ ಲಿಮಿಟೆಡ್ ಮಾಲೀಕರಾಗಿದ್ದು, ಕ್ರೀಡಾ ಪಟುವೂ ಆಗಿರುವುದಾಗಿ ತಿಳಿಸಿದರು. ಸ್ಪರ್ಧೆಯ ಅಂತಿಮ ಸುತ್ತಿನಲ್ಲಿ ದೇಶಾದ್ಯಂತದಿಂದ ಸುಮಾರು 50 ಮಂದಿ ಪಾಲ್ಗೊಂಡು 15 ಮಂದಿ ಕೊನೆ ಸುತ್ತು ಪ್ರವೇಶಿಸಿದರು. ಈ ವೇಳೆ ನಡೆದ ಕಠಿಣ ಪ್ರಶ್ನೋತ್ತರ ಸುತ್ತಿನಲ್ಲಿಯೂ ಉತ್ತಮ ಸಾಮರ್ಥ್ಯ ತೋರಿದ ಕಾರಣ ತಾವು ರಾಷ್ಟ್ರೀಯ ವಿಜೇತರಾಗಿ ಹೊರ ಹೊಮ್ಮಿ ಕಿರೀಟ ತಮ್ಮದಾಗಿಸಿಕೊಂಡಿದ್ದಾರೆ ವಿವರಿಸಿದರು.



# ಕುರುಬಾರಹಳ್ಳಿ ಕೆರೆಗೆ ಅಕ್ರಮ ಕೌಂಪೌಂಡ್?
# ಹಿಂದಿರುವ ಪ್ರಭಾವಿ ಯಾರು: ಶ್ರೀವತ್ಸ





**ಮೈಸೂರು:** ನಗರದ ಚಾಮುಂಡಿಬೆಟ್ಟ ತಪ್ಪಲಿನರುವ ಕೆ.ಸಿ.ಬಡಾವಣೆಯ ರಾಜಕಾಲುವೆ ಸಮೀಪದ ಕೆರೆ ಜಾಗದಲ್ಲಿ ನಿರ್ಮಿಸಿರುವ ಕೌಂಪೌಂಡ್ ನಿರ್ಮಾಣದ ಹಿಂದಿರುವ ಪ್ರಭಾವಿ ವ್ಯಕ್ತಿ ಯಾರು ಎಂಬುದನ್ನು ಸರ್ಕಾರ ಸ್ಪಷ್ಟಪಡಿಸಬೇಕೆಂದು ಶಾಸಕ ಶ್ರೀವತ್ಸ ಆಗ್ರಹಿಸಿದರು.

> “ಸರ್ಕಾರಿ ಜಾಗ ಉಳಿಯಬೇಕೆಂಬುದು ನಮ್ಮ ಉದ್ದೇಶ. ಆದ್ದರಿಂದಲೇ ಶಿವರಾತ್ರಿ ಹಬ್ಬ ಮುಗಿಯುವ ಮುನ್ನ ಕಾಂಪೌಂಡ್ ತೆರವು ಮಾಡಬೇಕು. ಇಲ್ಲವಾದರೆ ನಾವೇ ಸಾಮೂಹಿಕವಾಗಿ ಕಾಂಪೌಂಡ್ ಹೊಡೆದು ಹಾಕುತ್ತೇವೆ.
>
> **ಶ್ರೀವತ್ಸ, ಶಾಸಕ**

ಸ್ಥಳೀಯರೊಂದಿಗೆ ಕೆ.ಸಿ.ಬಡಾವಣೆಗೆ ಭೇಟಿ ನೀಡಿದ ಅವರು, ಸ್ಥಳದಲ್ಲೇ ಸುದ್ದಿಗೋಷ್ಠಿ ನಡೆಸಿ ಒತ್ತುವರಿ ತೆರವು ಮಾಡುವಂತೆ ಒತ್ತಾಯಿಸಿದ ಅವರು, ಮೈಸೂರು ತಾಲೂಕು ಕಸಬಾ ಹೋಬಳಿ ಕುರುಬಾರಹಳ್ಳಿ ಸರ್ವೇ ನಂ.4ರ ವ್ಯಾಪ್ತಿಯ 22 ಗುಂಟೆ ಕೆರೆಯ ಜಾಗದಲ್ಲಿ ಕಾಂಪೌಂಡ್ ನಿರ್ಮಿಸಲಾಗಿದೆ. ಈ ಬಗ್ಗೆ ಕೆ.ಸಿ.ಬಡಾವಣೆ ನಿವಾಸಿಗಳ ಸಂಘದವರು ಹಾಗೂ ನಾಗರಿಕರು ಮಾಹಿತಿ ನೀಡಿದ್ದರು. ಇದನ್ನು ವಿಧಾನಸಭೆ ಅಧಿವೇಶನದ ವೇಳೆ ಕಂದಾಯ ಸಚಿವ ಕೃಷ್ಣಭೈರೇಗೌಡ ಅವರಿಗೆ ಗಮನ ಸೆಳೆಯುವ ಪ್ರಶ್ನೆ ಕೇಳಿದ್ದೆ. ಅವರು ಉತ್ತರ ನೀಡಿದ್ದು, ಕೆರೆ ಎಂಬುದನ್ನು ಒಪ್ಪಿಕೊಂಡಿದ್ದಾರೆ. ಆದರೆ, ಒತ್ತುವರಿ ತೆರವು ಮಾಡುವ ಬದಲು ಹಾರಿಕೆ ಉತ್ತರ ನೀಡಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದರು.

**ನಕ್ಷೆಯಲ್ಲೂ ಕೆರೆ ಉಲ್ಲೇಖ:** ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ 2016ರಲ್ಲಿ ರಚಿಸಿದ ನಗರ ಮಹಾ ಯೋಜನೆ(ಸಿಡಿಪಿ)ಯಲ್ಲಿ ಕೆರೆಯ ಉಲ್ಲೇಖವಿದೆ. ಅದರ ಹಿಂದೆ 1931ರಲ್ಲಿ ರಚಿಸಿರುವ ನಕ್ಷೆಯಲ್ಲೂ ಕೆರೆ ಎಂದೇ ಉಲ್ಲೇಖಿಸಲಾಗಿದೆ. ಹೀಗಿದ್ದರೂ ಕೆರೆಯ ಜಾಗಕ್ಕೆ ಮಣ್ಣು ಮುಚ್ಚಿ, ಕಾಂಪೌಂಡ್ ನಿರ್ಮಿಸಲಾಗಿದೆ. ಯಾರೂ ಪ್ರವೇಶ ಮಾಡಬಾರದು ಎಂಬ ಫಲಕವನ್ನು ನ್ಯಾಯಾಲಯದ ಆದೇಶದ ನಂಬರ್ ಸಮೇತ ಹಾಕಲಾಗಿದೆ. ಕೆರೆಯ ಜಾಗದಲ್ಲಿ ಕಾಂಪೌಂಡ್ ಹಾಕಲು ಯಾವ ಕೋರ್ಟ್ ಅನುಮತಿ ನೀಡುತ್ತದೆ, ಒಂದು ವೇಳೆ ತಡೆಯಾಜ್ಞೆ ನೀಡಿದ್ದರೂ ಅಧಿಕಾರಿಗಳು ತೆರವು ಮಾಡಲು ಯಾಕೆ ಕ್ರಮ ಕೈಗೊಂಡಿಲ್ಲ. ಮೈಸೂರು ಜಿಲ್ಲೆಯ ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವ ಡಾ.ಮಹದೇವಪ್ಪರನ್ನೂ ಮೀರಿದ ಪ್ರಭಾವಿ ಯಾರು? ಸರ್ಕಾರಿ ಜಾಗವನ್ನು ಉಳಿಸುವ ನಿಟ್ಟಿನಲ್ಲಿ ಡಾ.ಯತೀಂದ್ರ ಸಿದ್ದರಾಮಯ್ಯ ಪಾತ್ರ ಏನೂ ಇಲ್ಲವೇ ಎಂದು ಮಾರ್ಮಿಕವಾಗಿ ನುಡಿದರು.

ಮಾಜಿ ಮೇಯರ್ ಶಿವಕುಮಾರ್, ಬಿಜೆಪಿ ಕೃಷ್ಣರಾಜ ಕ್ಷೇತ್ರದ ಅಧ್ಯಕ್ಷ ಗೋಪಾಲರಾಜೇ ಅರಸ್, ಬಿಜೆಪಿ ನಗರ ವಕ್ತಾರ ಮೋಹನ್ ಕುಮಾರ್, ಮುಡಾ ನಿವೃತ್ತ ನೌಕರ ನಟರಾಜ್, ಮುಡಾ ಮಾಜಿ ಸದಸ್ಯ ವಿಶ್ವೇಶ್ವರಯ್ಯ, ಮುಖಂಡ ವಿಶ್ವನಾಥಯ್ಯ ಮುಂತಾದವರಿದ್ದರು.

## ಮಧು ಮಾದೇಗೌಡರಿಗೆ ಅನೂಕೂಲಕ್ಕೆ ಕಾನೂನು ಉಲ್ಲಂಘನೆ

**ಮೈಸೂರು:** ವಿಧಾನ ಪರಿಷತ್ತು ಸದಸ್ಯ ಮಧು ಜಿ.ಮಾದೇಗೌಡ ಅವರಿಗೆ ಅನುಕೂಲ ಮಾಡಿಕೊಡುವ ಉದ್ದೇಶದಿಂದ ಮೈಸೂರು ಅಭಿವೃದ್ಧಿ ಪ್ರಾಧಿಕಾರದ ಆಯುಕ್ತ ಕೆ.ಆರ್.ರಕ್ಷಿತ್ ಕಾನೂನು ಉಲ್ಲಂಘಿಸಿದ್ದಾರೆ ಎಂದು ಶಾಸಕ ಟಿ.ಎಸ್.ಶ್ರೀವತ್ಸ ಗಂಭೀರ ಆರೋಪ ಮಾಡಿದರು.

ಮುಡಾದ ಹೆಸರು ಮಾತ್ರ ಬದಲಾಗಿದೆ, ಆದರೆ ಹಿಂದಿನ ಅಕ್ರಮ ಚಟುವಟಿಕೆಗಳೆಲ್ಲವೂ ಯಥಾವತ್ತಾಗಿ ನಡೆಯುತ್ತಿವೆ. 07–11–2024ರ ಮುಡಾ ಸಭೆಯಲ್ಲಿ ನಾನೂ ಸದಸ್ಯನಾಗಿದ್ದು, ವಿಷಯ ಸಂಖ್ಯೆ 130ರಲ್ಲಿ 47.55 ಎಕರೆ ‘ವಿಶೇಷ ಕೃಷಿ ವಲಯ’ದ ಭೂ ಪರಿವರ್ತನೆಯ ಪ್ರಸ್ತಾಪ ಮಾಡಲಾಗಿತ್ತು. ನಾನು ಆಕ್ಷೇಪಣೆ ಸಲ್ಲಿಸಿದ ಹಿನ್ನೆಲೆಯಲ್ಲಿ ವಿಷಯವನ್ನು ಮುಂದೂಡಲಾಗಿತ್ತು. ಎಂಡಿಎ ಅಸ್ತಿತ್ವಕ್ಕೆ ಬಂದ ನಂತರ ಮೊದಲ ಸಭೆಯನ್ನು 08–08–2025ರಂದು ಜಿಲ್ಲಾಧಿಕಾರಿ ಲಕ್ಷ್ಮಿಕಾಂತ ರೆಡ್ಡಿ ಅಧ್ಯಕ್ಷತೆಯಲ್ಲಿ ನಡೆಸಿದ್ದು, ಮುಂದೂಡಿದ್ದ ವಿಷಯಕ್ಕೆ ಅನುಮೋದನೆ ನೀಡಲಾಗಿದೆ. 2016ರಲ್ಲಿ ರಚಿಸಿದ ಸಿಡಿಪಿಯಲ್ಲಿ 47.55 ಎಕರೆ ಜಾಗವನ್ನು ವಿಶೇಷ ಕೃಷಿ ವಲಯವಾಗಿ ಮೀಸಲು ಇರಿಸಲಾಗಿದೆ. ಇದರಲ್ಲಿ ಒಂದು ಹೆಕ್ಟೇರ್‌ಗಿಂತಲೂ ಹೆಚ್ಚಿನ ಭೂಮಿಯನ್ನು ವಸತಿ ಅಥವಾ ವಾಣಿಜ್ಯ ಉದ್ದೇಶಕ್ಕೆ ಭೂ ಪರಿವರ್ತನೆ ಮಾಡುವಂತಿಲ್ಲ. ಆದರೆ ಎಂಎಲ್ಸಿ ಮಧು ಜಿ.ಮಾದೇಗೌಡ ಅವರಿಗೆ 4.27 ಎಕರೆ ಜಾಗದಲ್ಲಿ ಬಡಾವಣೆ ನಿರ್ಮಿಸಲು ಅನುಕೂಲ ಮಾಡಿಕೊಡುವ ಉದ್ದೇಶದಿಂದ 47.55 ಎಕರೆ ಜಾಗದ ಭೂ ಉಪಯೋಗ ಬದಲಾವಣೆಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಮುಡಾ ಆಯುಕ್ತರಿಗೂ ಮಧು ಜಿ.ಮಾದೇಗೌಡ ಅವರಿಗೂ ಇರುವ ಸಂಬಂಧವೇನು? ಜಿಲ್ಲಾಧಿಕಾರಿ ಲಕ್ಷ್ಮಿಕಾಂತ ರೆಡ್ಡಿ ಸೂಚನೆ ಮೇರೆಗೆ ಅಧಿಕಾರಿಗಳು ನಿರ್ಣಯ ಮಾಡಿದ್ದಾರೆಯೋ ಅಥವಾ ನಗರಾಭಿವೃದ್ಧಿ ಇಲಾಖೆ ಜಂಟಿ ನಿರ್ದೇಶಕರು ಬೆಂಗಳೂರನಿಂದ ಹೊತ್ತು ತಂದಿದ್ದ ಸಂದೇಶದ ಆಧಾರದ ಮೇಲೆ ಪ್ರಸ್ತಾವನೆ ಸಲ್ಲಿಕೆ ಆಗಿದೆಯೋ ಗೊತ್ತಿಲ್ಲ. ಆದರೆ ಇದಕ್ಕೆಲ್ಲ ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ಅವರೇ ನೇರ ಹೊಣೆಗಾರರು ಎಂದು ಆರೋಪಿಸಿದರು.




## ಓಂ ನಮಃ ಶಿವಾಯ

**ಓಂ ನಮಃ ಶಿವಾಯ**
**ನಾಗೇಂದ್ರಹಾರಾಯ ತ್ರಿಲೋಚನಾಯ**
**ಭಸ್ಮಾಂಗರಾಗಾಯ ಮಹೇಶ್ವರಾಯ**
**ನಿತ್ಯಾಯ ಶುದ್ಧಾಯ ದಿಗಂಬರಾಯ**
**ತಸ್ಮೈನಕಾರಾಯ ನಮಃ ಶಿವಾಯ.**



**| ಗಿರಿಜಾ.ಎಸ್. ದೇಶಪಾಂಡೆ. ಬೆಂಗಳೂರು.**

ಶಿವನಿಗೆ ಒಂದು ಕೈಯಲ್ಲಿ ತ್ರಿಶೂಲ,ಇನ್ನೊಂದು ಕೈಯಲ್ಲಿ ಡಮರು,ಕೊರಳಲ್ಲಿ ಹಾವು,ಶಿರದಲ್ಲಿ ಚಂದ್ರ,ಜಟೆಯಲ್ಲಿ ಗಂಗೆ,ಮೈಯೆಲ್ಲ ಭಸ್ಮ.ಭಗವಾನ್ ಶಿವನ ರೂಪವೇ ವಿಶಿಷ್ಟ ಹಾಗೂ ವಿಶೇಷವಾಗಿದೆ.ಯಾರೂ ಇಲ್ಲದವನನ್ನು ಬೋಲೇನಾಥನೆಂದು ಹೇಳಲಾಗುತ್ತದೆ.

ಮಹಾದೇವನು ಗಂಗೆಯನ್ನು ಧರಿಸಿದ ಕಾರಣ ಪುರಾಣ ಕಥೆಗಳ ಪ್ರಕಾರ ಭಗೀರಥನು ತನ್ನ ಪೂರ್ವಜರನ್ನು ಜೀವನ ಮತ್ತು ಸಾವಿನ ದೋಷದಿಂದ ಮುಕ್ತಗೊಳಿಸಲು ಗಂಗೆಯನ್ನು ಭೂಮಿಗೆ ತರಬೇಕೆಂದು ಕಠಣ ತಪಸ್ಸು ಮಾಡಿದನು.ಭಗೀರಥನ ತಪಸ್ಸಿನಿಂದ ತಾಯಿ ಗಂಗೆ ಭೂಮಿಗೆ ಬರಲು ಒಪ್ಪಿದಳು.ಆಗ ಗಂಗೆಯು ನಾನು ಭೂಮಿಗೆ ಬಂದರೆ ತನ್ನ ರಭಸ ನಿಯಂತ್ರಿಸಲು ಸಾಧ್ಯವಿಲ್ಲ ಭೂಮಿಯಲ್ಲಿ ಪ್ರವಾಹ ಉಂಟಾಗಬಹುದು ಎಂದು ಹೇಳುತ್ತಾಳೆ.ಆಗ ಬಗೀರಥನು ಶಿವನನ್ನು ಕುರಿತು ತಪಸ್ಸು ಮಾಡಿದಾಗ ಶಿವನು ಒಲಿದಾಗ ಶಿವನ ಬಳಿ ತನ್ನ ಮನದಾಸೆ ಹೇಳುತ್ತಾನೆ.ಗಂಗೆ ಭೂಮಿಗೆ ಪ್ರವೇಶಿಸಿದ ಕೂಡಲೇ ಆಕೆ ತನ್ನ ಅಹಂಕಾರದಿಂದ ಪ್ರವಾಹ ಸೃಷ್ಟಿಸಿದಳು.ಶಿವನು ಗಂಗೆಯ ಅಹಂಕಾರ ಮುರಿಯಲು ತನ್ನ ಜಟೆಯಲ್ಲಿ ಗಂಗೆಯನ್ನು ಬಂಧಿಸಿದನು.ನಂತರ ಗಂಗೆಗೆ ತನ್ನ ತಪ್ಪಿನ ಅರಿವಾಗಿ ಶಿವನ ಬಳಿ ಕ್ಷಮೆ ಕೇಳಿ ಶಿವಬಂಧನದಿಂದ ಮುಕ್ತಿ ಪಡೆದಳು.

**ಚಂದ್ರ ಆಭರಣ:** ಶಿವನು ತನ್ನ ತಲೆಯ ಮೇಲೆ ಚಂದ್ರನನ್ನು ಧರಿಸಲು ಕಾರಣ ಶಿವಪುರಾಣದ ದಂತಕಥೆಯ ಪ್ರಕಾರ ಮಹಾರಾಜ ದಕ್ಷನಿಗೆ 27 ಜನ ಹೆಣ್ಣುಮಕ್ಕಳು.27 ಜನರನ್ನು ಚಂದ್ರನಿಗೆಕೊಟ್ಟುಮದುವೆ ಮಾಡಿದನು.27 ಜನರಲ್ಲಿ ಚಂದ್ರನಿಗೆ ರೋಹಿಣಿಯನ್ನು ಕಂಡರೆ ಬಹಳ ಪ್ರೀತಿ.ಇದರಿಂದ ದುಃಖಿತರಾದ ಉಳಿದ ಪತ್ನಿಯರು ತಂದೆಗೆ ದೂರು ಹೇಳಲು ಕೋಪಗೊಂಡ ದಕ್ಷ ಚಂದ್ರನಿಗೆ ಕ್ಷಯರೋಗ ಬರುವಂತೆ ಶಾಪನೀಡುತ್ತಾನೆ.ದಕ್ಷನ ಶಾಪದಿಂದ ಮುಕ್ತಿ ಹೊಂದಲು ಚಂದ್ರನು ಶಿವನನ್ನು ಪೂಜಿಸಲು ಅವನ ಭಕ್ತಿಗೆ ಮೆಚ್ಚಿದ ಶಿವ ನಿನ್ನ ಶಾಪದಿಂದ ಸಂಪೂರ್ಣ ಮುಕ್ತನನ್ನಾಗಿ ಮಾಡಲು ಸಾಧ್ಯವಿಲ್ಲಬದಲಾಗಿ ಶಾಪದ ಪ್ರಭಾವ ಕಡಿಮೆಮಾಡಬಹುದು ಎನ್ನಲು ಅದಕ್ಕೆ ಒಪ್ಪಿದ ಚಂದ್ರ 15 ದಿನ ಕ್ಷಯರೋಗದಲ್ಲಿ 15 ದಿನ ಹೊಳೆಯುವಂತೆ ಮಾಡುತ್ತಾನೆ.ಮತ್ತು ಚಂದ್ರನನ್ನು ತನ್ನ ಜಟೆಯಲ್ಲಿ ಹಿಡಿದಿಟ್ಟುಕೊಳ್ಳುತ್ತಾನೆ.



**ಶಿವ ತ್ರಿಶೂಲಧಾರಿ:** ಪುರಾಣದ ಪ್ರಕಾರ ಶಿವನ ಕೈಯಲ್ಲಿ ತ್ರಿಶೂಲದ ಉಲ್ಲೇಖವಿದೆ.ಶಿವನೊಂದಿಗೆ ತಮಾ,ಅರ್ಜ,ಮತ್ತು ಅಸರ ಮೂರು ಗುಣಗಳು ಹೊರಹೊಮ್ಮಿದವು.ಈ ಮೂರು ಗುಣಗಳೇ ತ್ರಿಶೂಲ ರೂಪಕ್ಕೆ ಬದಲಾಯಿತು ಎಂದು ಹೇಳಲಾಗುತ್ತದೆ.ಈ ಗುಣಗಳಲ್ಲಿ ಸಾಮರಸ್ಯ ಕಾಪಾಡಿಕೊಳ್ಳುವದು ಅಗತ್ಯವಾದ್ದರಿಂದ ಶಿವನು ಮೂರು ಗುಣಗಳನ್ನು ತ್ರಿಶೂಲ ರೂಪದಲ್ಲಿ ತನ್ನ ಕೈಯಲ್ಲಿ ಹಿಡಿದಿದ್ದಾನೆ.

**ಡಮರುಗದ ವಿಶೇಷ**

ಶಿವನು ವಿಶ್ವದಲ್ಲಿ ಸಾಮರಸ್ಯ ಕಾಪಾಡಲು ಅಸರ,ತೇಜ,ತಮೋ ಎಲ್ಲ ಸದ್ಗುಣ ರೂಪ ಪಡೆದುಕೊಂಡನು.ಅದೇ ರೀತಿ ವಿಶ್ವವನ್ನು ಸಮತೋಲನಗೊಳಿಸಲು ಡಮರುಗ ಧರಿಸಿದ್ದಾನೆ.ಬೋಲೇನಾಥನು ನೃತ್ಯವನ್ನು ಪ್ರದರ್ಶಿಸಿದಾಗ ಡಮರುಗವನ್ನು 14 ಬಾರಿ ನುಡಿಸಿದನು. ಡಮರುಗದ ಶಬ್ದದಿಂದ ಸಂಗೀತದ ಧ್ವನಿ,ತಾಳ ಹುಟ್ಟಿಕೊಂಡಿತು ಎಂಬ ನಂಬಿಕೆಯಿದೆ.

**ಶಿವ ಸರ್ಪಧಾರಿ**

ಪುರಾಣದ ಪ್ರಕಾರ ನಾಗರಾಜ ಶಿವನ ಭಕ್ತ.ಅವನು ಯಾವಾಗಲೂ ಶಿವನ ಧ್ಯಾನದಲ್ಲಿ ಲೀನನಾಗಿರುತ್ತಿದ್ದನು.ಸಾಗರ ಮಥಿಸುವ ಕೆಲಸ ನಾಗರಾಜ ವಾಸುಕಿ ಮಾಡಿದನು.ಅವರ ಭಕ್ತಿ ನೋಡಿದ ಶಿವನು ತನ್ನ ಕುತ್ತಿಗೆಗೆ ಸುತ್ತಿಕೊಳ್ಳುವಂತೆ ವರ ನೀಡಿದನು.ಈ ರೀತಿಯಾದ ನಾಗರಾಜವಾಸುಕಿ ಕೂ ಅಮರರಾದರು.

**ಭಸ್ಮಧಾರಿ**

ಹಾವು,ಚಂದ್ರ,ತ್ರಿಶೂಲ,ಗಂಗೆ,ಧರಿಸಿದಂತೆ ಶಿವನು ದೇಹದ ಮೇಲೆ ಭಸ್ಮಧರಿಸಿರುವನು.ಶಿವನು ಸಾವಿನ ಅಧಿಪತಿ.ನಮ್ಮ ದೇಹ ನಶ್ವರವಾಗಿದೆ.ಭಸ್ಮವು ಮಣ್ಣಿನಲ್ಲಿ ಮಣ್ಣಾಗಿ ಹೋಗುತ್ತದೆ. ಎನ್ನುವ ಸಂದೇಶ ಜಗತ್ತಿಗೆ ನೀಡಿದ್ದಾನೆ.ಪ್ರತಿಯೊಬ್ಬರೂ ದೇಹದ ಬಗ್ಗೆ,ಸೌಂದರ್ಯದ ಬಗ್ಗೆ ಅಹಂಕಾರ ಪಡಬಾರದು ಎಂಬ ನೀತಿ ಹೇಳುತ್ತದೆ.ಶಿವರಾತ್ರಿ ಶಿವನನ್ನು ಪೂಜಿಸಿ ಅವನ ಆಶೀರ್ವಾದ ಪಡೆಯೋಣ.ಓಂ ನಮಃ ಶಿವಾಯ.

## ಭಾರತ್ ಮುಷ್ಕರ: ಮೈಸೂರಿನಲ್ಲೂ ಕಾರ್ಮಿಕ ಸಂಘಟನೆಗಳ ಬೆಂಬಲ




**ಮೈಸೂರು:** ಒಕ್ಕೂಟ ಸರ್ಕಾರ ತಂದಿರುವ ಜನವಿರೋಧಿ ಮಸೂದೆಗಳನ್ನು ಹಿಂಪಡೆಯುವಂತೆ ದೇಶವ್ಯಾಪಿ ಕರೆ ನೀಡಿದ್ದ ಭಾರತ್ ಮುಷ್ಕರ ಬೆಂಬಲಿಸಿ ಮೈಸೂರಿನಲ್ಲೂ ವಿವಿಧ ಕಾರ್ಮಿಕ ಸಂಘಟನೆಗಳ ನೇತೃತ್ವದಲ್ಲಿ ಪ್ರತಿಭಟಿಸಲಾಯಿತು.

ಕಾರ್ಮಿಕ ಸಂಘಟನೆಗಳ ಜಂಟಿ ಸಮಿತಿ ವತಿಯಿಂದ ಮುಷ್ಕರ ನಡೆಯಿತು. ಗಾಂಧಿ ವೃತ್ತದಲ್ಲಿ ಸಮಾವೇಶಗೊಂಡ ಕಾರ್ಮಿಕರು ಓಲ್ಡ್ ಬ್ಯಾಂಕ್ ರಸ್ತೆ ಮಾರ್ಗವಾಗಿ ಸಾಗಿ ನ್ಯೂ ಸಯ್ಯಾಜಿರಾವ್ ರಸ್ತೆ, ಇರ್ವಿನ್ ರಸ್ತೆ, ಅಶೋಕ ರಸ್ತೆ ಮೂಲಕ ಪ್ರತಿಭಟನಾ ಮೆರವಣಿಗೆ ನಡೆಸಿದರು. ಕೇಂದ್ರ ಸರ್ಕಾರದ ವಿರುದ್ಧ ವಿವಿಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. 4 ಲೇಬರ್ ಕೋಡ್ ರದ್ದುಗೊಳಿಸಬೇಕು. ನರೇಗಾ ಯೋಜನೆಯನ್ನು ಪುನರ್ ಸ್ಥಾಪಿಸಿ, ವಿಬಿ ಜಿ ರಾಮ್ ಜಿ ಕಾಯಿದೆ ರದ್ದುಗೊಳಿಸಬೇಕು. ಭೂ ಸ್ವಾಧೀನ ಕಾಯಿದೆಯನ್ನು ಹಿಂಪಡೆಯಬೇಕು. ರಾಜ್ಯ ಸರ್ಕಾರ ಭೂ ಸುಧಾರಣೆ, ಎಪಿಎಂಸಿ, ಜಾನುವಾರು ಸಂರಕ್ಷಣಾ ತಿದ್ದುಪಡಿ ಕಾಯಿದೆ ಹಿಂಪಡೆಯಬೇಕು. ವಿದ್ಯುಚ್ಛಕ್ತಿ ಖಾಸಗೀಕರಣ ಮಾಡಬಾರದು. ಬೀಜ ಮಸೂದೆ ಕಾಯಿದೆಯನ್ನು ಹಿಂಪಡೆಯಬೇಕು. ವಿಮಾ ತಿದ್ದುಪಡಿ ಕಾಯಿದೆ ಶಾಂತಿ ಕಾಯ್ದೆ ರದ್ದುಗೊಳಿಸಬೇಕು. ರಾಜ್ಯ ಸರ್ಕಾರದ ಕಾರ್ಮಿಕ ಸಂಹಿತೆಗಳನ್ನು ವಾಪಸ್ ಪಡೆಯಬೇಕು. ಕನಿಷ್ಠ ವೇತನ ಸಲಹಾ ಮಂಡಳಿ ಸಲ್ಲಿಸಿರುವ ಶಿಫಾರಸ್ಸನ್ನು ಅಂತಿಮ ಅಧಿಸೂಚನೆಯಾಗಿ ಹೊರಡಿಸಬೇಕು ಎಂದು ಸರ್ಕಾರವನ್ನು ಆಗ್ರಹಿಸಿದರು.

## ಶಿವರಾತ್ರಿ ಹಬ್ಬದ ಆಚರಣೆಯ ಮಹತ್ವ

ಹಿಂದುಗಳ ಪ್ರಮುಖ ಹಬ್ಬಗಳಲ್ಲಿ ಮಹಾಶಿವರಾತ್ರಿಯೂ ಒಂದು

ಈ ಹಬ್ಬವನ್ನು ಮಾಘ ಮಾಸದ ಬಹುಳ ಕೃಷ್ಣ ಪಕ್ಷದ ಚತುರ್ದಶಿಯಂದು ಆಚರಿಸುತ್ತೇವೆ

ಭಾರತೀಯ ಸನಾತನ ಪರಂಪರೆಯಲ್ಲಿ ಧಾರ್ಮಿಕ ಹಬ್ಬಗಳು ಆಚರಣೆಗಳು ಅನಾದಿಕಾಲದಿಂದಲೂ ಪ್ರಾಮುಖ್ಯತೆ ಪಡೆದಿದೆ ಶಿವರಾತ್ರಿಯ ದಿನ ಉಪವಾಸ ಮಾಡಿ ಜಾಗರಣೆ ಮಾಡಿ ನಾಲ್ಕು ಆಯಮಗಳಲ್ಲಿ ಶಿವನ ಪೂಜೆಯನ್ನು ಮಾಡುತ್ತೇವೆ ಶಿವನಿಗೆ ಪ್ರಮುಖವಾಗಿ ತಂಬಿಟ್ಟನ್ನು ಮಾಡಿ ನೈವೇದ್ಯ ಮಾಡುತ್ತವೆ ಪಾನಕ ಕೋಸಂಬರಿ, ಮಜ್ಜಿಗೆಯನ್ನು ಸೇವಿಸುತ್ತೇವೆ.

ಮಹಾಶಿವರಾತ್ರಿಯ ದಿನ ಕೋಟಿ ಕೋಟಿ ಜನರು ಶಿವನನ್ನು ಪೂಜಿಸುತ್ತೇವೆ ಓಂ ನಮಃ ಶಿವಾಯ ಓಂ ನಮಃ ಶಿವಾಯ ಹರಹರ ಮಹಾದೇವ ಎಂದು ಹೇಳುತ್ತಾ ಭಜನೆ ಮಾಡುತ್ತೇವೆ

ಶಿವನನ್ನು ನಂಬಿದವರಿಗೆ ಭಯವಿಲ್ಲಸಾಮಾನ್ಯವಾಗಿ ಎಲ್ಲಾ ಹಬ್ಬಗಳನ್ನು ಹಗಲಿನ ವೇಳೆ ಆಚರಿಸುತ್ತೇವೆ ಆದರೆ ಶಿವರಾತ್ರಿ ಮಾತ್ರ ರಾತ್ರಿಯ ವೇಳೆ ಅಭಿಷೇಕ ಶಿವನ ಪೂಜೆ ಭಜನೆ ಮಾಡುತ್ತೇವೆ ರಾತ್ರಿ ಎಂದರೆ ಕತ್ತಲು ಕತ್ತಲು ಎಂದರೆ ಅಜ್ಞಾನ ಅಜ್ಞಾನವನ್ನು ಕಳೆದು ಸುಜ್ಞಾನವನ್ನು ಬೆಳಗಿಸು ಎಂದು ಶಿವನನ್ನು ಬೇಡುವ ಶುಭದಿನವೇ ಶಿವರಾತ್ರಿ.

ಶಿವನಿಗೆ ಅತಿ ಶ್ರೇಷ್ಠವಾಗಿರುವ ಬಿಲ್ವಪತ್ರೆ ತುಳಸಿ ಅರ್ಪಿಸಿ ಪೂಜೆ ಮಾಡುತ್ತೇವೆ ತುಳಸಿ ಬಿಲ್ವಪತ್ರೆಯನ್ನು ಶಿವನಿಗೆ ಅರ್ಪಿಸಿ ಶಿವನನ್ನು ಪೂಜಿಸಿದರೆ ಪಾಪಗಳು ನಾಶವಾಗುತ್ತವೆ ಎಂಬ ಪ್ರತೀತಿ ಇದೆ

ಜಾಲಾರದ ಹೂವು ಮುತ್ತುಗದ ಹೂವುಸಹ ಶಿವನಿಗೆ ಪ್ರಿಯವಾದ ಹೂವುಗಳು. ಶಿವರಾತ್ರಿ ಶಿವನಿಗೆ ಅತ್ಯಂತ ಪ್ರಿಯವಾದ ದಿನ

ಶಿವ ಪಾರ್ವತಿಯರು ವಿವಾಹವಾದ ಶುಭದಿನ. ಈ ಶುಭದಿನದಂದು ಶಿವ ಪಾರ್ವತಿಯರು ತ್ರೀಯುಗಿ ನಾರಾಯಣ ಎಂಬ ಕ್ಷೇತ್ರದಲ್ಲಿ ಮದುವೆಯಾದರು ಹಿಮಾಲಯದ ಪರ್ವತ ಶ್ರೇಣಿಗಳಲ್ಲಿಯಜ್ಞ ಎನ್ನುವ ಪರ್ವತದ ಮೇಲೆ ತ್ರಿಯುಗಿನಾರಾಯಣ ಕ್ಷೇತ್ರವಿರುವುದು ಇದು ಸಂಪೂರ್ಣ ಹಿಮದಿಂದ ಆವೃತವಾದ ಪ್ರದೇಶ ಇಲ್ಲಿ ಒಂದು ಹೋಮ ಕುಂಡವಿದೆ ಈ ಹೋಮ ಕುಂಡದಲ್ಲಿ ಮೂರು ಯುಗಗಳಿಂದ ಇಂದಿಗೂ ಅಗ್ನಿ ಪ್ರಜ್ವಲಿಸುತ್ತಲಿದೆ ಯಜ್ಞ ಕುಂಡಕ್ಕೆ ಅರಿಶಿನಕುಂಕುಮ ಗಂಧದ ಚಕ್ಕೆ ಪಂಚ ಧಾನ್ಯಗಳನ್ನು ಹಾಕಿ ಪೂಜೆ ಹೋಮ ಮಾಡಿಸುತ್ತಾರೆ.



ಶಿವರಾತ್ರಿಯ ದಿನ ಪಾರ್ವತಿ ದೇವಿ ರಾತ್ರಿಯೆಲ್ಲಾ ಶಿವನನ್ನು ಧ್ಯಾನಿಸುತ್ತಾ ತಪಸ್ಸು ಮಾಡಿ ಶಿವನನ್ನು ಒಲಿಸಿಕೊಂಡು ಮೆಚ್ಚಿ ವಿವಾಹದಳೆಂಬ ಮಾಹಿತಿ ಇದೆ ಶಿವ ರುದ್ರತಾಂಡವ ಮಾಡಿದ ರಾತ್ರಿಯೂ ಶಿವರಾತ್ರಿ.

ಶಿವ ಲಿಂಗರೂಪಿಯಾಗಿ ದರ್ಶನ ನೀಡಿದ ದಿನ ಶಿವರಾತ್ರಿ. ದೇವತೆಗಳು ಅಸುರರ ನಡುವೆ ಸಮುದ್ರ ಮಂಥನ ನಡೆದು ವಿಷ ಉದ್ಭವಿಸಿದಾಗ ಅದನ್ನು ಶಿವ ಕುಡಿದ ಆ ವಿಷ ಗಂಟಲಿನೊಳಗಿನಿಂದ ಇಳಿಯದಂತೆ ಪಾರ್ವತಿ ತಡೆದದ್ದು ಈ ಶಿವರಾತ್ರಿಯ ದಿನ ಎಂದು ಶಿವ ಪುರಾಣದಲ್ಲಿ ಕಥೆ ಇದೆ.

ಶಿವರಾತ್ರಿಯಂದು ಉಪವಾಸ ಮಾಡಿ ಶಿವನ ದೇವಾಲಯಗಳಲ್ಲಿ ಬಿಲ್ವಾರ್ಚನೆ, ರುದ್ರಾಭಿಷೇಕ ಶಿವನ ದರ್ಶನ ಮಾಡಿ ಜಾಗರಣೆ ಮಾಡುತ್ತೇವೆ. ಸಾಯಂಕಾಲ 6:00 ಯಿಂದ ಬೆಳಗ್ಗೆ 6:00 ವರೆಗೆ ರುದ್ರ ಪಠಣ ಮಾಡುತ್ತಾ ಶಿವನ ಪೂಜೆ ಮಾಡುತ್ತೇವೆ. ಪ್ರತಿ ಮೂರು ಗಂಟೆಗೆ ಒಮ್ಮೆ ಮಂಗಳಾರತಿ ಮಾಡುತ್ತಾರೆ ನಾಲ್ಕು ಆಯಾಮಗಳಲ್ಲಿ ಶಿವನ ಪೂಜೆ ಮಾಡುತ್ತಾರೆ ಮೊದಲನೇ ಆಯಾಮದಲ್ಲಿ ಹಾಲು ಎರಡನೇ ಆಯಾಮದಲ್ಲಿ ಮೊಸರು, ಮೂರನೇ ಆಯಮದಲ್ಲಿ ತುಪ್ಪ ಹಾಗೂ ನಾಲ್ಕನೇ ಆಯಾಮದಲ್ಲಿ ಜೇನುತುಪ್ಪ ಗಳಿಂದ ಶಿವನಿಗೆ ಅಭಿಷೇಕ ಮಾಡುತ್ತಾರೆ ಶಿವನ ಬಗ್ಗೆ ಹೇಳಬೇಕಾದ ಕಥೆ ಇನ್ನೆಷ್ಟೋ ಇದೆ

**| ಸುಮ ಬೆಳೆಗೆರೆ**



ಸಿನಿಮಾ ವರದಿ: ಬಿ.ಜಿ.ರವಿಕುಮಾರ್



## ಶ್ರೀ ಕಾಕಾ ನಿರ್ದೇಶನ ಹಾಗೂ ನಟನೆಯ 'ಅನಂತ ಪಯಣ' ಚಿತ್ರದ ಚಿತ್ರೀಕರಣ ಪೂರ್ಣ

ಕನ್ನಡದಲ್ಲಿ ಈಗ ಕಂಟೆಂಟ್ ಓರಿಯಂಟೆಡ್ ಚಿತ್ರಗಳೆ ಹೆಚ್ಚಾಗಿ ಬರುತ್ತಿದೆ. ಹೊಸತಂಡದ ಹೊಸಪ್ರಯತ್ನವನ್ನು ಜನರು ಮೆಚ್ಚಿಕೊಳ್ಳುತ್ತಿದ್ದಾರೆ. ಅಂತಹುದೇ ಹೊಸತಂಡದ ಹೊಸ ಪ್ರಯತ್ನ "ಅನಂತ ಪಯಣ". ನೃತ್ಯ ಕಲಾವಿದನಾಗಿ, ಸಹ ನಿರ್ದೇಶಕನಾಗಿ ಕಾರ್ಯ ನಿರ್ವಹಿಸಿ ಅನುಭವವಿರುವ ಶ್ರೀ ಕಾಕಾ," ಅನಂತ ಪಯಣ"ದ ಮೂಲಕ ನಾಯಕನಾಗಿ ಹಾಗೂ ನಿರ್ದೇಶಕನಾಗಿ ಚಿತ್ರರಂಗಕ್ಕೆ ಪದಾರ್ಪಣೆ ಮಾಡಿದ್ದಾರೆ. ಎಸ್ ಕೆ ಫಿಲಂಸ್ ಫ್ಯಾಕ್ಟರಿ ಲಾಂಛನದಲ್ಲಿ ಸಂತೋಷ್ ಅಶೋಕ್ ಹೆಗಡೆ ಈ ಚಿತ್ರವನ್ನು ನಿರ್ಮಿಸುತ್ತಿದ್ದಾರೆ.

"ಅನಂತ ಪಯಣ", ಇದು ಸಂಚಾರಿ ಕುರುಬರ ಕುರಿತಾದ ಕಥಾಹಂದರ ಹೊಂದಿರುವ ಚಿತ್ರ. "ಸಂಚಾರಿ ಕುರುಬರು" ಸ್ಥಿರವಾದ ಮನೆ ಹೊಂದಿರದೆ, ಋತುಮಾನಕ್ಕೆ ಅನುಗುಣವಾಗಿ ಕುರಿಗಳೊಂದಿಗೆ ನೂರಾರು ಕಿಲೋಮೀಟರ್ ಸಂಚರಿಸುತ್ತಾರೆ. ಕನ್ನಡದಲ್ಲಿ ತೀರ ಅಪರೂಪ ಎನ್ನಬಹುದಾದ ಕಥೆ ಇದು. ಈ ಚಿತ್ರಕ್ಕೆ ನಾನೇ ಕಥೆ ಬರೆದು ನಿರ್ದೇಶನ ಮಾಡಿದ್ದೇನೆ. ಜೊತೆಗೆ ನಾಯಕನಾಗಿಯೂ ನಟಿಸಿದ್ದೇನೆ. ಈಗಾಗಲೇ ಚಿತ್ರೀಕರಣ ಮುಗಿಸಿರುವ ಈ ಚಿತ್ರಕ್ಕೆ ರೀರೆಕಾರ್ಡಿಂಗ್ ನಡೆಯುತ್ತಿದೆ. ಬೆಳಗಾವಿ, ಬೆಂಗಳೂರು ಹಾಗೂ ಮಹಾರಾಷ್ಟ್ರದಲ್ಲಿ ಚಿತ್ರೀಕರಣ ನಡೆದಿದೆ. ನಾನು ಕುರಿಗಾಹಿಯ ಪಾತ್ರವನ್ನು ನಿರ್ವಹಿಸಿದ್ದೇನೆ. ಈ ಚಿತ್ರದಲ್ಲಿ ಮೂರು ಸಾಹಸ ಸನ್ನಿವೇಶಗಳು ಹಾಗೂ ಐದು ಹಾಡುಗಳು ಸಹ ಇದೆ. ಆಕಾಶ ಪರ್ವ ಸಂಗೀತ ಸಂಯೋಜನೆ ಮಾಡುತ್ತಿದ್ದಾರೆ.

ವಿನೋದ್ ಭಾರತಿ ಛಾಯಾಗ್ರಹಣ, ದೀಪು ಗೌಡ ಸಂಕಲನ, ರಘು ನೃತ್ಯ ನಿರ್ದೇಶನ ಹಾಗೂ ರಿಸ್ಕಿ ಶಿವು ಅವರ ಸಾಹಸ ನಿರ್ದೇಶನವಿರುವ "ಅನಂತ ಪಯಣ" ಚಿತ್ರದ ನಾಯಕಿಯಾಗಿ ನಿವಿಶ್ಕಾ ಪಾಟೀಲ್ ನಟಿಸಿದ್ದಾರೆ. ಎಂ.ಕೆ ಮಠ, ಮಂಜುನಾಥ್ ಹೆಗಡೆ, ಅಪೂರ್ವ ಶ್ರೀ, ಲಕ್ಷ್ಮೀ ಸಿದ್ದಯ್ಯ, ಬಲ ರಾಜವಾಡಿ, ಸಂದೀಪ್ ನೀನಾಸಂ, ಪ್ರಶಾಂತ್ ಸಿದ್ದಿ, ಲಪಂಗ್ ರಾಜಾ, ಅನನ್ಯ ನಿಹಾರಿಕ ಮುಂತಾದವರು ತಾರಾಬಳಗದಲ್ಲಿದ್ದಾರೆ ಎಂದು ತಿಳಿಸಿದ ಚಿತ್ರದ ನಿರ್ದೇಶಕ ಹಾಗೂ ನಾಯಕ ಶ್ರೀ ಕಾಕಾ, ಸದ್ಯದಲ್ಲೇ ಚಿತ್ರದ ಹಾಡುಗಳು ಹಾಗೂ ಟೀಸರ್ ಬಿಡುಗಡೆಯಾಗಲಿದೆ ಎನ್ನುತ್ತಾರೆ.





## 'ಮರಳಿ ಮನಸಾಗಿದೆ' ಚಿತ್ರ ಫೆಬ್ರವರಿ 12 ರಂದು ಬಿಡುಗಡೆ

"ಮರಳಿ ಮನಸಾಗಿದೆ". ಟ್ರೇಲರ್ ಚೆನ್ನಾಗಿದೆ. ಪೇಡ್ ಪ್ರಿಮಿಯರ್ ನೋಡಿದರವರ ಮನಸು ಖುಷಿಯಾಗಿದೆ. ಚಿತ್ರ ಫೆಬ್ರವರಿ 12ರಂದು ಬಿಡುಗಡೆಯಾಗುತ್ತಿದೆ. .

ಬೆನಕ ಟಾಕೀಸ್ ಲಾಂಛನದಲ್ಲಿ ಮುದೇಗೌಡ ನವೀನ್ ಕುಮಾರ್ ಆರ್ ಓ ತೆಲಿಗಿ ಮಲ್ಲಿಕಾರ್ಜುನಪ್ಪ, ನಾಗರಾಜ್ ಶಂಕರ್ ಹಾಗೂ ಆಶಿತ್ ಸುಬ್ರಹ್ಮಣ್ಯ ನಿರ್ಮಿಸಿರುವ, ನಾಗರಾಜ್ ಶಂಕರ್ ನಿರ್ದೇಶನದಲ್ಲಿ ಅರ್ಜುನ್ ವೇದಾಂತ್ ನಾಯಕರಾಗಿ ನಟಿಸಿರುವ "ಮರಳಿ ಮನಸಾಗಿದೆ" ಚಿತ್ರದ ಟ್ರೇಲರ್ ಇತ್ತೀಚಿಗೆ ಬಿಡುಗಡೆಯಾಗಿದೆ. ಟ್ರೇಲರ್ ನಲ್ಲೇ ಕುತೂಹಲ ಕೆರಳಿಸಿರುವ ಈ ಚಿತ್ರ ಫೆಬ್ರವರಿ 12ರಂದು ರಾಜ್ಯಾದ್ಯಂತ ಬಿಡುಗಡೆಯಾಗುತ್ತಿದೆ. ಬಿಡುಗಡೆಗೂ ಮುನ್ನವೇ ಬೆಂಗಳೂರು ಸೇರಿದಂತೆ ಕೆಲವು ಕಡೆ ಪೇಡ್ ಪ್ರಿಮಿಯರ್ ಆಗಿದೆ. ಪ್ರಿಮಿಯರ್ ನಲ್ಲಿ ಚಿತ್ರ ನೋಡಿದವರ ಮನಸ್ಸು ಖುಷಿಯಾಗಿದೆ. ಟ್ರೇಲರ್ ಬಿಡುಗಡೆ ನಂತರ ಚಿತ್ರದ ಕುರಿತು ಚಿತ್ರತಂಡದ ಸದಸ್ಯರು ಮಾತನಾಡಿದರು.

ಹತ್ತು ವರ್ಷಗಳ ನಂತರ ನಾನು ನಟಿಸಿರುವ ಕನ್ನಡ ಚಿತ್ರ "ಮರಳಿ ಮನಸಾಗಿದೆ" ಇದೇ ಫೆಬ್ರವರಿ 12 ರಂದು ಬಿಡುಗಡೆಯಾಗುತ್ತಿದೆ ಎಂದು ಮಾತನಾಡಿದ ನಾಯಕ ಅರ್ಜುನ್ ವೇದಾಂತ್, ನಾನು ನಟಿಸಿದ್ದ "ಕುಡ್ಲ ಕೆಫೆ" ಚಿತ್ರ 2016 ಫೆಬ್ರವರಿ 12ರಂದು ಬಿಡುಗಡೆಯಾಗಿತ್ತು. ಈಗ ಹತ್ತು ವರ್ಷಗಳ ನಂತರ ಈ ಚಿತ್ರ ತೆರೆಗೆ ಬರುತ್ತಿದೆ. ಹಾಡುಗಳು ಹಾಗೂ ಟೀಸರ್ ಮೂಲಕ ಈಗಾಗಲೇ ಜನರ ಈ ಚಿತ್ರ ಜನರ ಮನ ತಲುಪಿದೆ. ಟ್ರೇಲರ್ ಗೂ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗುತ್ತಿದೆ. ಬಿಡುಗಡೆಗೂ ಮುನ್ನ ಬೆಂಗಳೂರು, ಪುತ್ತೂರು, ಉಡುಪಿ ಮುಂತಾದ ಕಡೆ "ಮರಳಿ ಮನಸಾಗಿದೆ" ಚಿತ್ರದ ಪೇಡ್ ಪ್ರೀಮಿಯರ್ ಏರ್ಪಡಿಸಿದ್ದೆವು. ಅಲ್ಲಿ ನಮ್ಮ ಚಿತ್ರ ನೋಡಿದವರು ನೀಡಿದ ಪ್ರತಿಕ್ರಿಯೆಗೆ ಮನ ತುಂಬಿ ಬಂದಿದೆ. ಚಿತ್ರ ಬಿಡುಗಡೆ ಆದ ಮೇಲೂ ಜನರಿಂದ ಇದೇ ಅಭಿಪ್ರಾಯ ಬರುವ ಭರವಸೆ ಇದೆ ಎಂದರು.

ಚಾಲೆಂಜಿಂಗ್ ಸ್ಟಾರ್ ದರ್ಶನ್ ಅವರು ನಾನು ಚಿತ್ರರಂಗಕ್ಕೆ ಬರಲು ಸ್ಪೂರ್ತಿ ಎಂದು ಮಾತನಾಡಿದ ನಿರ್ಮಾಪಕ ಮುದೇಗೌಡ ನವೀನ್ ಕುಮಾರ್ ಆರ್. ಓ, ಸಾಮಾನ್ಯವಾಗಿ ಪ್ರಿಮಿಯರ್ ಶೋಗೆ ಮೊದಲು ಟ್ರೇಲರ್ ರಿಲೀಸ್ ಮಾಡುತ್ತಾರೆ. ಆದರೆ ನಾವು ಪೇಡ್ ಪ್ರಿಮಿಯರ್ ಮುಗಿಸಿ ಈಗ ಟ್ರೇಲರ್ ಬಿಡುಗಡೆ ಮಾಡಿದ್ದೇವೆ. ಚಿತ್ರತಂಡದ ಸಹಕಾರದಿಂದ ಒಂದೊಳ್ಳೆ ಸಿನಿಮಾ ನಿಮ್ಮ ಮುಂದೆ ಇದೇ ಫೆಬ್ರವರಿ 12 ರಂದು ಬರಲಿದೆ. ಚಿತ್ರಮಂದಿರಗಳಲ್ಲೇ ನಮ್ಮ ಚಿತ್ರ ನೋಡಿ ಪ್ರೋತ್ಸಾಹಿಸಿ ಎಂದರು.

"ಮರಳಿ ಮನಸಾಗಿದೆ" ನನ್ನ ಸಿನಿಪಯಣದ ಮೊದಲ ಚಿತ್ರ. ನಾನು ಮೂಲತಃ ಎಂಜಿನಿಯರ್. ಎಂಟು ಕಡೆ ನಮ್ಮ ಚಿತ್ರದ ಪೇಡ್ ಪ್ರಿಮಿಯರ್ ನಡೆದಿದೆ. ಸಾವಿರಕ್ಕೂ ಹೆಚ್ಚು ಜನರು ನಮ್ಮ ವೀಕ್ಷಿಸಿದ್ದಾರೆ. ನೋಡಿವರೆಲ್ಲರೂ ಚಿತ್ರದ ಬಗ್ಗೆ ಆಡಿದ ಪ್ರಶಂಸೆಯ ಮಾತಗಳನ್ನು ಕೇಳಿ ಬಹಳ ಖುಷಿಯಾಗಿದೆ.

ಪ್ರೇಕ್ಷಕರು ಕೊಟ್ಟ ದುಡ್ಡಿಗೆ ಮೋಸ ಮೋಸವಾಗದ ಚಿತ್ರವಿದು. ಇದೊಂದು ಸಾಮಾನ್ಯ ಪ್ರೇಮಕಥೆಯಲ್ಲ. ಉತ್ತಮ ಕಂಟೆಂಟ್ ವುಳ್ಳ ಚಿತ್ರ. ಸಾಮಾನ್ಯ ಜನರಿಗೂ ತಲುಪುವ ಚಿತ್ರ ಎಂದು ನಿರ್ದೇಶಕ ನಾಗರಾಜ್ ಶಂಕರ್ ಹೇಳಿದರು.

ನಾಯಕಿಯರಾದ ನಿರೀಕ್ಷಾ ಶೆಟ್ಟಿ ಹಾಗೂ ಸ್ಮೃತಿ ವೆಂಕಟೇಶ್, ನಟ ಗಿರೀಶ್ ಜತ್ತಿ, ಸಂಗೀತ ನಿರ್ದೇಶಕ ವಿನು ಮನಸು, ಛಾಯಾಗ್ರಾಹಕ ಹಾಲೇಶ್ ಹಾಗೂ ವಿಜಯ್ ಸುಬ್ರಹ್ಮಣ್ಯ, ಹರೀಶ್ ಎಸ್ ಎಂ, ಸಂಜಯ್ ಸೇರಿದಂತೆ ಚಿತ್ರತಂಡದ ಅನೇಕ ಸದಸ್ಯರು ಚಿತ್ರದ ಕುರಿತು ಮಾತನಾಡಿದರು. ಟಿ.ಎಸ್.ನಾಗಾಭರಣ, ಮಾನಸಿ ಸುಧೀರ್, ಭೋಜರಾಜ್ ವಾಮಂಜೂರ್ ಮುಂತಾದವರು ಈ ಚಿತ್ರದ ತಾರಾಬಳಗದಲ್ಲಿದ್ದಾರೆ.



## `ನಾಗಬಂಧಂ' ನಲ್ಲಿ ರಿಷಬ್ ಸಾಹ್ನಿ ಅಬ್ಬರ!

ಯುವ ನಟ ವಿರಾಟ್ ಕರ್ಣ ನಾಯಕನಾಗಿ ನಟಿಸುತ್ತಿರುವ, ಅಭಿಷೇಕ್ ನಾಮ ನಿರ್ದೇಶನದ ಪೌರಾಣಿಕ ಆ?ಯಕ್ಷನ್ ಡ್ರಾಮಾ 'ನಾಗಬಂಧಂ' ಚಿತ್ರತಂಡದಿಂದ ಮಹತ್ವದ ಅಪ್‌ಡೇಟ್ ಹೊರಬಿದ್ದಿದೆ.

ಈ ಚಿತ್ರದಲ್ಲಿ ಬಾಲಿವುಡ್‌ನ 'ಫೈಟರ್' ಚಿತ್ರದ ಮೂಲಕ ಗಮನಸೆಳೆದಿದ್ದ ನಟ ರಿಷಬ್ ಸಾಹ್ನಿ ಅವರು ಆಫ್ಘನ್ ಸುಲ್ತಾನ್ 'ಅಬ್ದಾಲಿ' ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದು, ಅವರ ಫಸ್ಟ್ ಲುಕ್ ಪೋಸ್ಟರ್ ಇಂದು ಬಿಡುಗಡೆಯಾಗಿದೆ.

ಬಿಡುಗಡೆಯಾಗಿರುವ ಪೋಸ್ಟರ್‌ನಲ್ಲಿ ರಿಷಬ್ ಸಾಹ್ನಿ ಅವರು ರಕ್ತಸಿಕ್ತ ಕೊಡಲಿಯನ್ನು ಹಿಡಿದು, ಮಂಜುಗಡ್ಡೆಯ ಯುದ್ಧಭೂಮಿಯಲ್ಲಿ ಆಕ್ರಮಣಕಾರಿ ಶೈಲಿಯಲ್ಲಿ ಕಾಣಿಸಿಕೊಂಡಿದ್ದಾರೆ. ಅವರ ಹಿಂದೆ ಬೃಹತ್ ಸೈನ್ಯ, ಯುದ್ಧದ ಆನೆಗಳು ಮತ್ತು ಕೆಂಡದಂತಹ ಕಣ್ಣುಗಳಿರುವ ತೋಳಗಳ ಹಿಂಡು ಇರುವುದು ಪಾತ್ರದ ಕ್ರೌರ್ಯ ಮತ್ತು ಶಕ್ತಿಯನ್ನು ಬಿಂಬಿಸುತ್ತಿದೆ.

ಕ್ರಿಸ್ತ ಶಕ 1750ರ ಕಾಲಘಟ್ಟದ ಕಥೆಯನ್ನು ಹೊಂದಿರುವ ಈ ಚಿತ್ರದಲ್ಲಿ, ಭಾರತದ ಮೇಲೆ ದಾಳಿ ಮಾಡಿ ದೇವಾಲಯಗಳನ್ನು ಲೂಟಿ ಮಾಡಿದ ಅಬ್ದಾಲಿಯ ಇತಿಹಾಸವನ್ನು ತೋರಿಸಲಾಗಿದೆ. ಹಿಮಾಲಯದಲ್ಲಿ ಅಡಗಿರುವ ರಹಸ್ಯ 'ನಾಗಬಂಧಂ' ಅನ್ನು ಭೇದಿಸಲು ಈತ ನಡೆಸುವ ಕ್ರೂರ ಹಾದಿ ಮತ್ತು ಆತನ ಮಹತ್ವಾಕಾಂಕ್ಷೆಯೇ ಈ ಪಾತ್ರದ ಜೀವಾಳ.

ನಿರ್ದೇಶಕ ಅಭಿಷೇಕ್ ನಾಮ ಮಾತನಾಡಿ, "ರಿಷಬ್ ಸಾಹ್ನಿ ಅವರು ಅಬ್ದಾಲಿ ಪಾತ್ರಕ್ಕೆ ಜೀವ ತುಂಬಿದ್ದಾರೆ. ತೆರೆಯ ಮೇಲೆ ಅವರು ನಿಜವಾದ ಇತಿಹಾಸದ ವ್ಯಕ್ತಿಯಂತೆಯೇ ಕಾಣುತ್ತಾರೆ" ಎಂದಿದ್ದಾರೆ. ನಟ ರಿಷಬ್ ಸಾಹ್ನಿ ಕೂಡ ಇಂತಹ ಸವಾಲಿನ ಪಾತ್ರ ಸಿಕ್ಕಿದ್ದಕ್ಕೆ ಸಂತಸ ವ್ಯಕ್ತಪಡಿಸಿದ್ದಾರೆ.

ತಾರಾಗಣದ ವಿಚಾರಕ್ಕೆ ಬಂದರೆ, ವಿರಾಟ್ ಕರ್ಣ, ನಭಾ ನಟೇಶ್, ಐಶ್ವರ್ಯ ಮೆನನ್, ಜಗಪತಿ ಬಾಬು, ಮುರಳಿ ಶರ್ಮ, ಬಿ.ಎಸ್. ಅವಿನಾಶ್ ಮುಂತಾದವರು ನಟಿಸಿದ್ದಾರೆ. ತಾಂತ್ರಿಕ ವರ್ಗದಲ್ಲಿ ಸೌಂದರ್ ರಾಜನ್ (ಛಾಯಾಗ್ರಹಣ), ಅಶೋಕ್ ಕುಮಾರ್ (ಕಲಾ ನಿರ್ದೇಶನ), ಕುಮಾರ್ (ಸಂಗೀತ) ಇದ್ದಾರೆ. ಕಿಶೋರ್ ಅನ್ನಪೂರೆಡ್ಡಿ ಮತ್ತು ನಿಶಿತಾ ನಾಗಿರೆಡ್ಡಿ ಈ ಸಿನಿಮಾದ ನಿರ್ಮಾಪಕರು. ಮಹಾಶಿವರಾತ್ರಿಗೆ ಟೀಸರ್ ಬಿಡುಗಡೆಯಾಗಲಿದೆ. ಈ ಚಿತ್ರವು ಈ ಬೇಸಿಗೆಯಲ್ಲಿ ಪ್ಯಾನ್-ಇಂಡಿಯಾ ಮಟ್ಟದಲ್ಲಿ ತೆರೆಕಾಣಲು ಸಜ್ಜಾಗಿದೆ.



## ಉಪೇಂದ್ರ ಪುತ್ರ ಆಯುಷ್ ನಾಯಕ ಕಾಶ್ಮೀರದಲ್ಲಿ ಚಿತ್ರೀಕರಣ

ನಟ, ನಿರ್ದೇಶಕ ಉಪೇಂದ್ರ ಪುತ್ರ ಆಯುಷ್ ಉಪೇಂದ್ರ ನಾಯಕನಾಗಿ ನಟಿಸುತ್ತಿರುವ ಚಿತ್ರ ಪ್ರಾರಂಭವಾಗಿದೆ.

ಈ ಮೂಲಕ ಆಯುಷ್ ಉಪೇಂದ್ರ ಸ್ಯಾಂಡಲ್ ವುಡ್ ಗೆ ನಾಯಕನಾಗಿ ಪಾದಾರ್ಪಣೆ ಮಾಡುತ್ತಿದ್ದಾರೆ. ಆಯುಷ್ ನಾಯಕನಾಗಿ ನಟಿಸುತ್ತಿರುವ ಮೊದಲ ಚಿತ್ರಕ್ಕೆ ಕಾಶ್ಮೀರದಲ್ಲೇ ಮುಹೂರ್ತ ನೆರವೇರಿದ್ದು, ಅಲ್ಲಿಯೇ 25 ದಿನಗಳ ಮೊದಲ ಹಂತದ ಚಿತ್ರೀಕರಣ ಕೂಡ ನಡೆದಿದೆ. ನಾಯಕನಾಗಲೂ ಬೇಕಾಗಿರುವ ಪೂರ್ವ ತಯಾರಿಗಳನ್ನೆಲ್ಲಾಆಯುಷ್ ಮಾಡಿಕೊಂಡಿದ್ದಾರೆ.

ನಿರ್ದೇಶಕ ಪುರುಷೋತ್ತಮ ಸೂರಿ ಈ ಚಿತ್ರವನ್ನು ನಿರ್ದೇಶಿಸುತ್ತಿದ್ದಾರೆ. ಶ್ರೀಕಲ್ಪವೃಕ್ಷ ಮೂವೀ ಮೇಕರ್ಸ್ ಲಾಂಛನದಲ್ಲಿ ಅಭಿಷೇಕ್ ಎನ್ ಸಿರಿವಂತ್ ಈ ನೂತನ ಚಿತ್ರವನ್ನು ನಿರ್ಮಿಸುತ್ತಿದ್ದಾರೆ.

ಇದು ಅಭಿಷೇಕ್ ಎನ್ ಸಿರಿವಂತ್ ಅವರ ಚೊಚ್ಚಲ ನಿರ್ಮಾಣದ ಚಿತ್ರ. ಎಚ್ ಸಿ ವೇಣು ಛಾಯಾಗ್ರಹಣ ಹಾಗೂ ಅರ್ಜುನ್ ಜನ್ಯ ಅವರ ಸಂಗೀತ ಸಂಯೋಜನೆ ಈ ಚಿತ್ರಕ್ಕಿದೆ. ಸದ್ಯದಲ್ಲೇ ಚಿತ್ರದ ಶೀರ್ಷಿಕೆ ಹಾಗೂ ಉಳಿದ ತಾರಾಬಳಗ ಮತ್ತು ತಂತ್ರಜ್ಞರ ಕುರಿತು ಮಾಹಿತಿ ನೀಡುವುದಾಗಿ ನಿರ್ಮಾಪಕರು ತಿಳಿಸಿದ್ದಾರೆ.

ಕಾಶ್ಮೀರದಲ್ಲಿ ಮಗನ ಮೊದಲ ಚಿತ್ರದ ಚಿತ್ರೀಕರಣ ಸಂದರ್ಭದಲ್ಲಿ ಉಪೇಂದ್ರ ಹಾಗೂ ಪ್ರಿಯಾಂಕ ಉಪೇಂದ್ರ ಅವರು ಉಪಸ್ಥಿತರಿದ್ದು, ಆಯುಷ್ ಗೆ ಮಾರ್ಗದರ್ಶನ ನೀಡಿದ್ದಾರೆ. ವಿಶೇಷವಾಗಿ ಪ್ರಿಯಾಂಕ ಉಪೇಂದ್ರ ಅವರು ನಿರ್ಮಾಣದ ಅಂಶಗಳ ಕುರಿತು ಗಮನ ಹರಿಸುವುದರ ಜೊತೆಗೆ, ವಿವಿಧ ವಿಭಾಗಗಳಲ್ಲಿ



## `ಓ ಸುಂದರ ರಾಕ್ಷಸಿ': ಈ ವಾರ ಬಿಡುಗಡೆ

ನಟನೆಯ ಜೊತೆಗೆ ನಿರ್ದೇಶನ, ಸಂಗೀತ ಸಂಯೋಜನೆ ಹಾಗೂ ಕಥೆಗಾರಿಕೆಯಲ್ಲಿ ತಮ್ಮದೇ ಆದ ಛಾಪು ಮೂಡಿಸಿರುವ ಶೇರಾಜ್ ಮೆಹದಿ, ಇದೀಗ 'ಓ ಸುಂದರ ರಾಕ್ಷಸಿ' ಚಿತ್ರದ ಮೂಲಕ ಪ್ರೇಕ್ಷಕರ ಮುಂದೆ ಬರಲು ಸಜ್ಜಾಗಿದ್ದಾರೆ.

ಈ ಚಿತ್ರದಲ್ಲಿ ಶೇರಾಜ್ ಮೆಹದಿ ನಾಯಕನಾಗಿ ನಟಿಸುವುದರ ಜೊತೆಗೆ ನಿರ್ದೇಶನದ ಜವಾಬ್ದಾರಿಯನ್ನೂ ಹೊತ್ತಿದ್ದಾರೆ. ಸ್ಕೈ ಈಸ್ ದಿ ಲಿಮಿಟ್ ಬ್ಯಾನರ್ ಅಡಿಯಲ್ಲಿ ಸುರಿಂದರ್ ಕೌರ್ ನಿರ್ಮಿಸಿರುವ ಈ ಚಿತ್ರವು ಫೆಬ್ರವರಿ 13ರಂದು ಬಿಡುಗಡೆಯಾಗಲಿದೆ. ಚಿತ್ರದ ಬಿಡುಗಡೆಗೆ ಮುನ್ನ ಆಯೋಜಿಸಲಾಗಿದ್ದ ಪ್ರಿ-ರಿಲೀಸ್ ಕಾರ್ಯಕ್ರಮದಲ್ಲಿ ಚಿತ್ರತಂಡವು ಹಲವು ಆಸಕ್ತಿದಾಯಕ ವಿಷಯಗಳನ್ನು ಹಂಚಿಕೊಂಡಿದೆ.

ಕಾರ್ಯಕ್ರಮದಲ್ಲಿ ಮಾತನಾಡಿದ ನಾಯಕ ಹಾಗೂ ನಿರ್ದೇಶಕ ಶೇರಾಜ್ ಮೆಹದಿ, "ವರ್ಷಕ್ಕೆ ಒಮ್ಮೆ ಇಂತಹದೊಂದು ಅತ್ಯುತ್ತಮ ಸಿನಿಮಾ ಬರುತ್ತದೆ. 'ಓ ಸುಂದರ ರಾಕ್ಷಸಿ' ಅಂತಹ ಸಾಲಿಗೆ ಸೇರುವ ಚಿತ್ರ. ಕೃತಿ ವರ್ಮಾ, ವಿಹಾನ್ವಿ ಹೆಗಡೆ ಸೇರಿದಂತೆ ಪ್ರತಿಯೊಬ್ಬ ಕಲಾವಿದರು ತಮ್ಮ ಪಾತ್ರಗಳಿಗೆ ಜೀವ ತುಂಬಿದ್ದಾರೆ. ಪ್ರೇಕ್ಷಕರಿಗೆ ಒಂದು ಕ್ಷಣವೂ ಬೋರ್ ಆಗದಂತೆ ಚಿತ್ರಕಥೆ ಹೆಣೆಯಲಾಗಿದೆ. ಇದರಲ್ಲಿ ಅದ್ಭುತ ಟ್ವಿಸ್ಟ್‌ಗಳಿದ್ದು, ವಿಶೇಷವಾಗಿ ಮಹಿಳೆಯರಿಗೆ ಈ ಸಿನಿಮಾ ಹೆಚ್ಚು ಇಷ್ಟವಾಗಲಿದೆ" ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಚಿತ್ರದ ಕಥೆ ಮತ್ತು ಸಂಭಾಷಣೆಗಾರ ಭಾಷ್ಯ ಶ್ರೀ ಮಾತನಾಡಿ, "ಇಂದಿನ ಯುವತಿಯರು ಹೇಗಿರಬೇಕು ಎಂಬ ಪರಿಕಲ್ಪನೆಯ ಮೇಲೆ ಈ ಚಿತ್ರವನ್ನು ರೂಪಿಸಲಾಗಿದೆ. ಶೇರಾಜ್ ಅವರು ನಟ, ನಿರ್ದೇಶಕ ಹಾಗೂ ಸಂಗೀತ ನಿರ್ದೇಶಕರಾಗಿ ಮ್ಯಾಜಿಕ್ ಮಾಡಿದ್ದಾರೆ. ಚಿತ್ರಮಂದಿರದಿಂದ ಹೊರಬರುವಾಗ ಪ್ರೇಕ್ಷಕರು ಒಂದು ಪಾಸಿಟಿವ್ ಫೀಲ್‌ನ ಭಾವನೆಯೊಂದಿಗೆ ಬರುತ್ತಾರೆ" ಎಂದರು.

ಈ ಚಿತ್ರವು ಕೇವಲ ಸಾಧಾರಣ ಪ್ರೇಮಕಥೆಯಲ್ಲದೆ, ಇಂದಿನ ಸಮಾಜದಲ್ಲಿ ಯುವತಿಯರು ಎದುರಿಸುತ್ತಿರುವ ಸವಾಲುಗಳು ಮತ್ತು ಅದಕ್ಕೆ ಅವರು ನೀಡಬೇಕಾದ ಪ್ರತಿಕ್ರಿಯೆಯನ್ನು ಪ್ರತಿಬಿಂಬಿಸುತ್ತದೆ. "ಹುಡುಗಿಯರಿಗೆ ಮೋಸವಾದಾಗ ಅವರ ಸೌಂದರ್ಯವೇ ರಾಕ್ಷಸ ರೂಪ ತಾಳುತ್ತದೆ" ಎಂಬ ವಿಹಾನ್ವಿ ಹೆಗಡೆ ಅವರ ಮಾತು ಚಿತ್ರದ ತಿರುಳನ್ನು ಸೂಚಿಸುತ್ತದೆ. ಸಮಾಜಕ್ಕೆ ಒಂದು ಬಲವಾದ ಸಂದೇಶವನ್ನು ನೀಡುವ ಉದ್ದೇಶ ಹೊಂದಿರುವ ಈ ಸಿನಿಮಾ, ಮಹಿಳೆಯರು ಆತ್ಮವಿಶ್ವಾಸದಿಂದ ಹೇಗೆ ಬದುಕಬೇಕು ಎಂಬುದನ್ನು ಮನೋಜ್ಞವಾಗಿ ಚಿತ್ರಿಸಿದೆ. ವಿಶೇಷವಾಗಿ ಮಹಿಳಾ ಪ್ರೇಕ್ಷಕರಿಗೆ ಕನೆಕ್ಟ್ ಆಗುವಂತಹ ಭಾವನಾತ್ಮಕ ಸನ್ನಿವೇಶಗಳು ಮತ್ತು ಅದಕ್ಕೆ ಪೂರಕವಾದ ಸಂಭಾಷಣೆಗಳು ಚಿತ್ರದ ದೊಡ್ಡ ಪ್ಲಸ್ ಪಾಯಿಂಟ್ ಎನ್ನಲಾಗಿದೆ.



## ಟ್ರೇಲರ್ ನಲ್ಲೇ ಕುತೂಹಲ ಮೂಡಿಸಿದ `ದೈವ'

ಟ್ರೇಲರ್ ನಲ್ಲೇ ಕುತೂಹಲ ಮೂಡಿಸಿದ "ದೈವ" ಕಲ್ಪವೃಕ್ಷ ಕ್ರಿಯೇಷನ್ಸ್ ಬ್ಯಾನರ್ ಅಡಿಯಲ್ಲಿ ಶ್ರೀಮತಿ ಜಯಮ್ಮ ಪದ್ಮರಾಜ್ ನಿರ್ಮಿಸಿರುವ, ರಾಮಪ್ಪ ಸೋಮಪ್ಪ ಮೇಗಲಮನಿ, ಸೋಮಶೇಖರ್ ಜಿ ಪಟ್ಟಣಶೆಟ್ಟಿ ಅವರ ಸಹ ನಿರ್ಮಾಣವಿರುವ ಹಾಗೂ ಒ.ಎ ಜಯರಾಜ್ ಅವರು ನಿರ್ದೇಶನದ ಜೊತೆಗೆ ನಾಯಕನಾಗೂ ನಟಿಸಿರುವ "ದೈವ" ಚಿತ್ರದ ಟ್ರೇಲರ್ ಇತ್ತೀಚೆಗೆ ಬಿಡುಗಡೆಯಾಯಿತು. ನಿರ್ದೇಶಕರ ತಾಯಿ ಹಾಗೂ ನಿರ್ಮಾಪಕಿ ಜಯಮ್ಮ ಪದ್ಮರಾಜ್ ಅವರೆ ಟ್ರೇಲರ್ ಬಿಡುಗಡೆ ಮಾಡಿ, ಮಗ ಒ.ಎ ಜಯರಾಜ್ ನಿರ್ದೇಶನದ ಜೊತೆಗೆ ನಾಯಕನಾಗಿಯೂ ನಟಿಸಿರುವ "ದೈವ" ಚಿತ್ರ ಯಶಸ್ವಿಯಾಗಲೆಂದು ಹಾರೈಸಿದರು. ವಿಭಿನ್ನ ಕಥಾಹಂದರ ಹೊಂದಿರುವ ಈ ಚಿತ್ರದ ಟ್ರೇಲರ್ ಕುತೂಹಲ ಮೂಡಿಸಿದ್ದು, ಚಿತ್ರ ನೋಡುವ ಕಾತುರವನ್ನು ಹೆಚ್ಚಿಸಿದೆ. ಟ್ರೇಲರ್ ಅನಾವರಣದ ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು.

ಇಂಜಿನಿಯರ್ ಕಾಲೇಜಿನ ಅಸುಸ್ಟೆಂಟ್ ಪ್ರೊಫೆಸರ್ ಆಗಿ ಕಾರ್ಯ ನಿರ್ವಹಿಸುತ್ತಿದ್ದ ನಾನು, ಕೆಲವು ದಿನಗಳ ನಂತರ ಕೆಲಸಕ್ಕೆ ರಾಜಿನಾಮೆ ನೀಡಿ ನಿರ್ದೇಶಕ ರವಿ ಶ್ರೀವತ್ಸ ಅವರ ಬಳಿ ಸಹಾಯಕ ನಿರ್ದೇಶಕನಾಗಿ ಕಾರ್ಯ ನಿರ್ವಹಿಸಲು ಆರಂಭ ಮಾಡಿದೆ. ನಂತರ ಸಿನಿಮಾ ಬಗ್ಗೆ ತಿಳಿದುಕೊಂಡು ಈ ಚಿತ್ರವನ್ನು ನಿರ್ದೇಶಿಸುವುದರ ಜೊತೆಗೆ ನಾಯಕನಾಗಿಯೂ ನಟಿಸಿದ್ದೇನೆ. ನಮ್ಮ ತಾಯಿ ನಿರ್ಮಾಣ ಮಾಡಿದ್ದಾರೆ. "ದೈವ" ಎಂದರೆ ಹೆಚ್ಚಾಗಿ ನೆನಪಾಗುವುದು ರಿಷಭ್ ಶೆಟ್ಟಿ ಅವರ "ಕಾಂತಾರ" ಸಿನಿಮಾ. ಅದರಲ್ಲಿ ಅವರು ದಕ್ಷಿಣ ಕನ್ನಡದ ದೈವಗಳ ಬಗ್ಗೆ ಹೇಳಿದ್ದಾರೆ. ನಾನು ಈ ಚಿತ್ರದಲ್ಲಿ ಮಂಡ್ಯ ಜಿಲ್ಲೆಯ ಜೋಗಿಗಳ ಬಗ್ಗೆ ಹೇಳಿದ್ದೇನೆ. ಇದೊಂದು ಪಕ್ಕಾ ಹಳ್ಳಿ ಸೊಗಡಿನ ಸಿನಿಮಾ ಕೂಡ. ಯಾವುದೇ ಸೆಟ್ ಹಾಕದೆ, ಶಿರಸಿ ಬಳಿಯ ಹಳ್ಳಿಯೊಂದರಲ್ಲಿ ಚಿತ್ರದ ಹೆಚ್ಚಿನ ಭಾಗದ ಚಿತ್ರೀಕರಣ ಮಾಡಿದ್ದೇನೆ. ಎರಡು ಶೇಡ್ ಗಳಲ್ಲಿ ನನ್ನ ಪಾತ್ರವಿರುತ್ತದೆ. ಈಗಾಗಲೇ ಟೀಸರ್ ಹಾಗೂ ಹಾಡುಗಳಿಗೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ಟ್ರೇಲರ್ ಗೂ ಮೆಚ್ಚುಗೆ ದೊರಕಿದೆ. ಚಿತ್ರತಂಡದ ಸಹಕಾರದಿಂದ ಉತ್ತಮವಾಗಿ ಮೂಡಿಬಂದಿರುವ ನಮ್ಮ ಚಿತ್ರ ಫೆಬ್ರವರಿ 12 ರಂದು ಬಿಡುಗಡೆಯಾಗುತ್ತಿದೆ. ನಮ್ಮ ಚಿತ್ರಕ್ಕೆ ನಿಮ್ಮೆಲ್ಲರ ಪ್ರೋತ್ಸಾಹವಿರಲಿ ಎಂದರು.

ಗ್ರಾಮೀಣ ಸೊಗಡಿನ ಈ ಚಿತ್ರದಲ್ಲಿ ನನ್ನದು ಓಟುಔ ಮೂಲಕ ಹಳ್ಳಿಯ ಮಕ್ಕಳಿಗೆ ಶಿಕ್ಷಣವನ್ನು ನೀಡುವ ಶಿಕ್ಷಕನ ಪಾತ್ರ ಮಾಡಿದ್ದಾರೆ ಹಾಗೂ ಚಿತ್ರದ ಸಹ ನಿರ್ದೇಶಕನಾಗಿಯೂ ಕೆಲಸ ಮಾಡಿದ್ದೇನೆ ಎಂದು ಪತ್ರಕರ್ತ, ನಟ, ಮಂಜುರಾಜ್ ಸೂರ್ಯ(ವಿಸಿಎನ್ ಮಂಜು) ಹೇಳಿದರು. ನಾಯಕಿಯರಾದ ನೀತು ರಾಯ್, ಸುರಭಿ ರೆಡ್ಡಿ, ನಟ ಅರುಣ್ ಬಚ್ಚನ್ ಸಂಗೀತ ನಿರ್ದೇಶಕ ವಿಜೇತ್ ಮಂಜಯ್ಯ ಹಾಗೂ ಛಾಯಾಗ್ರಾಹಕ ಸಿದಾರ್ಥ್ ಸೇರಿದಂತೆ ಚಿತ್ರತಂಡದ ಅನೇಕ ಸದಸ್ಯರು "ದೈವ" ಚಿತ್ರದ ಕುರಿತು ಮಾತನಾಡಿದರು.

## ಆಲ್ಫಾ ಚಿತ್ರದ ಟ್ರೇಲರ್ ಬಂತು



ಐಂ ಪ್ರೊಡಕ್ಷನ್ಸ್ ಲಾಂಛನದಲ್ಲಿ ಆನಂದ್ ಕುಮಾರ್ ನಿರ್ಮಾಣದ, ವಿಜಯ್ ನಿರ್ದೇಶನದ ಹಾಗೂ ಹೇಮಂತ್ ಕುಮಾರ್ ನಾಯಕನಾಗಿ ನಟಿಸಿರುವ "ಆಲ್ಫಾ #ಒಇಓ ಐಔಗಿಇ ಗಿಇಓಉಇಂಓಅಇ* ಚಿತ್ರದ ಟ್ರೇಲರ್ ಅನಾವರಣ ಆಗಿದೆ. ನಂತರ ನಟ ಶ್ರೀಮುರಳಿ ಹಾಗೂ ಚಿತ್ರತಂಡದವರು ಮಾತನಾಡಿದರು.

ಹೇಮಂತ್ ಚೊಚ್ಚಲ ಚಿತ್ರಕ್ಕೆ ಅಗಿರುವ ತಯಾರಿ ಕಂಡು ಸಂತೋಷವಾಯಿತು ಮತ್ತು ಇಡೀ ತಂಡದ ಶ್ರಮ ಟ್ರೇಲರ್ ನಲ್ಲಿ ಕಾಣುತ್ತಿದೆ. ಎ0ದರು ಮುರಳಿ.

ನಾನು ಶ್ರೀಮುರಳಿ ಅಭಿಮಾನಿ. ನಾಯಕನಾಗಲೂ ಅವರ ನಟನೆಯ ಉಗ್ರಂ ಸೇರಿದಂತೆ ಹಲವು ಚಿತ್ರಗಳೆ ಸ್ಫೂರ್ತಿ. ಅಂದರು ನಾಯಕ ನಟ ಹೇಮಂತ್ ಕುಮಾರ್.

ನಿರ್ದೇಶಕ ವಿಜಯ್ ಮಾತನಾಡಿ ಈಗಾಗಲೇ ಟೀಸರ್, ಟ್ರೇಲರ್ ಹಾಗೂ ಹಾಡುಗಳ ಮೂಲಕ ಜನರನ್ನು ತಲುಪಿರುವ ನಮ್ಮ ಚಿತ್ರ ಫೆ20 ರಂದು ತೆರೆ ಕಾಣಲಿದೆ ಎಂದರು.

ನಾಯಕಿಯರಾದ ಆಯನಾ, ಗೋಪಿಕ ಸುರೇಶ್, ಕಲಾವಿದರಾದ ಅವಿನಾಶ್, ಅಚ್ಯುತಕುಮಾರ್, ವಿನಯ್ ಬಿದ್ದಪ್ಪ, ಗಿರಿರಾಜ್, ಸಂಗೀತ ನಿರ್ದೇಶಕ ಅನೂಪ್ ಸೀಳಿನ್, ಗಾಯಕ ವ್ಯಾಸರಾಜ್ ಸೋಸಲೆ, ನೃತ್ಯ ನಿರ್ದೇಶಕ ಭೂಷಣ್, ಕಲಾ ನಿರ್ದೇಶಕ ಅಮರ್ ಹಾಗೂ ಸಂಭಾಷಣೆ ಬರೆದಿರುವ ಮಾಸ್ತಿ ಮುಂತಾದವರು ಚಿತ್ರದ ಕುರಿತು ಮಾತನಾಡಿದರು.

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from Mihir Akash K.R, #78, Daya Marga Near Geetha School, Siddartha Nagar Mysore-570011, Editor K.N Ravi,